ಸಂಪುಟ: 14 Volume | ಸಂಚಿಕೆ: 107 Issue | ಪುಟಗಳು 08 Pages | ಶನಿವಾರ 01 ಆಗಸ್ಟ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೆಂಗಳೂರು | ಹುಬ್ಬಳ್ಳಿ | ಬೀದರ ಆವೃತ್ತಿ: ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ, ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**


ಸುಖದಲ್ಲೂ ಭಯ, ಅಪಾಯ ಇದೆ. ಕಷ್ಟದಲ್ಲೂ ಹಿತ, ಭರವಸೆ ಇದೆ.

–ಫ್ರಾನ್ಸಿಸ್ ಬೇಕನ್

## ಪತ್ರಿಕೆಗೆ ಅಭಿನಂದಿಸಿದ ಗಣ್ಯರು



**ಹುಮನಾಬಾದ್:** "ನನ್ನ ಪರಡಿಯಲ್ಲಿ ಬೆಳೆದು, ಸಮಾಜದ ನೋವು-ನಲಿವುಗಳನ್ನು ಅರಿತು ಪತ್ರಿಕೋದ್ಯಮವನ್ನು ಸೇವೆಯಾಗಿ ಸ್ವೀಕರಿಸಿದ ರಮೇಶ್ ರೆಡ್ಡಿ ಅವರು ಇಂದು 'ಮಲ್ಲಮ್ಮ ನುಡಿ' ಪ್ರಾದೇಶಿಕ ಪತ್ರಿಕೆಯ ಬೆಂಗಳೂರು ಆವೃತ್ತಿಯನ್ನು ಆರಂಭಿಸುತ್ತಿರುವುದು ನನಗೆ ಅಪಾರ ಸಂತಸ ಮತ್ತು ಹೆಮ್ಮೆಯ ವಿಷಯವಾಗಿದೆ" ಎಂದು ಮಾಜಿ ಶಾಸಕ ಸುಭಾಷ್ ಕಲ್ಲೂರು ತಿಳಿಸಿದ್ದಾರೆ. ಅವರು ಮಾತನಾಡಿ, "ಒಬ್ಬ ವ್ಯಕ್ತಿಯ ಸಾಧನೆ ಎಂದರೆ ಕೇವಲ ಅವರ ಯಶಸ್ಸಲ್ಲ; ಅವರ ಹಿಂದೆ ಇರುವ ಪರಿಶ್ರಮ, ಪ್ರಾಮಾಣಿಕತೆ ಮತ್ತು ಸಮಾಜದ ಮೇಲಿನ ಬದ್ಧತೆಯ ಪ್ರತೀಕವಾಗಿದೆ. ರಮೇಶ್ ರೆಡ್ಡಿ ಅವರು ನಿರಂತರ ಶ್ರಮ, ನಿಷ್ಠೆ ಮತ್ತು ಜನಪರ ಕಾಳಜಿಯಿಂದ 'ಮಲ್ಲಮ್ಮ ನುಡಿ'ಯನ್ನು ಜನರ ವಿಶ್ವಾಸದ ಪತ್ರಿಕೆಯನ್ನಾಗಿ ಬೆಳೆಸಿದ್ದಾರೆ. ಇದೀಗ ರಾಜಧಾನಿ ಬೆಂಗಳೂರಿನಲ್ಲಿ ಹೊಸ ಆವೃತ್ತಿ ಆರಂಭಿಸುತ್ತಿರುವುದು ಅವರ ಕನಸಿನ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ" ಎಂದು ಹೇಳಿದರು. "ಗ್ರಾಮೀಣ ಜನರ ಧ್ವನಿಯನ್ನು ರಾಜ್ಯದ ರಾಜಧಾನಿವರೆಗೆ ತಲುಪಿಸುವ ಕಾರ್ಯ ಅತ್ಯಂತ ಶ್ಲಾಘನೀಯ. ಪತ್ರಿಕೆಯು ಸತ್ಯ, ನಿಷ್ಪಕ್ಷಪಾತತೆ ಮತ್ತು ಜನಸೇವೆಯ ಮೌಲ್ಯಗಳನ್ನು ಸದಾ ಎತ್ತಿಹಿಡಿದು ಇನ್ನಷ್ಟು ಯಶಸ್ಸಿನ ಶಿಖರಗಳನ್ನು ತಲುಪಲಿ" ಎಂದು ಹಾರೈಸಿದರು. ಈ ಸಂದರ್ಭದಲ್ಲಿ 'ಮಲ್ಲಮ್ಮ ನುಡಿ' ಪ್ರಾದೇಶಿಕ ಪತ್ರಿಕೆಯ ಸಂಪಾದಕ ಹಾಗೂ ಮಾಲೀಕರಾದ ರಮೇಶ್ ರೆಡ್ಡಿ ಅವರಿಗೆ, ಪತ್ರಿಕೆಯ ಸಂಪಾದಕ ಮಂಡಳಿ, ವರದಿಗಾರರು, ಸಿಬ್ಬಂದಿ ವರ್ಗ ಮತ್ತು ಓದುಗರಿಗೆ ಮಾಜಿ ಶಾಸಕ ಸುಭಾಷ್ ಕಲ್ಲೂರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿ, ಉಜ್ವಲ ಭವಿಷ್ಯಕ್ಕಾಗಿ ಶುಭ ಹಾರೈಸಿದರು.



**ಬೆಂಗಳೂರು:** ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಬೆಂಗಳೂರು ಆವೃತ್ತಿಯ ಆರಂಭಕ್ಕೆ ಮಾಜಿ ರಾಜ್ಯಸಭಾ ಸದಸ್ಯ ಕುಪೇಂದ್ರ ರೆಡ್ಡಿ ಅವರು ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದ್ದಾರೆ. ಈ ಸಂದರ್ಭದಲ್ಲಿ ಅವರು ಮಾತನಾಡಿ, "ಪ್ರಾದೇಶಿಕ ಪತ್ರಿಕೆಗಳು ಸಮಾಜದ ಧ್ವನಿಯಾಗಿ ಕಾರ್ಯನಿರ್ವಹಿಸುತ್ತವೆ. ಜನರ ಸಮಸ್ಯೆಗಳು, ಅಭಿವೃದ್ಧಿಯ ವಿಚಾರಗಳು ಹಾಗೂ ಸಾರ್ವಜನಿಕ ಹಿತಾಸಕ್ತಿಯ ವಿಷಯಗಳನ್ನು ನಿಷ್ಪಕ್ಷಪಾತವಾಗಿ ಜನರಿಗೆ ತಲುಪಿಸುವಲ್ಲಿ ಅವುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಲ್ಲಮ್ಮ ನುಡಿ ಪತ್ರಿಕೆ ಜನಪರ ಮೌಲ್ಯಗಳನ್ನು ಎತ್ತಿಹಿಡಿದು ವಿಶ್ವಾಸಾರ್ಹ ಪತ್ರಿಕೋದ್ಯಮವನ್ನು ಮುಂದುವರಿಸಲಿ" ಎಂದು ಆಶಿಸಿದರು. ಬೆಂಗಳೂರು ಆವೃತ್ತಿಯ ಆರಂಭವು ಪತ್ರಿಕೆಯ ಬೆಳವಣಿಗೆಯ ಹೊಸ ಅಧ್ಯಾಯವಾಗಿದ್ದು, ರಾಜ್ಯದ ಎಲ್ಲ ಭಾಗಗಳ ಸುದ್ದಿಗಳನ್ನು ಜನರಿಗೆ ತಲುಪಿಸುವ ಮೂಲಕ ಸಮಾಜಮುಖಿ ಸೇವೆಯನ್ನು ಇನ್ನಷ್ಟು ವಿಸ್ತರಿಸಲಿ ಎಂದು ಅವರು ಹಾರೈಸಿದರು. ಪತ್ರಿಕೆಯ ಸಂಪಾದಕ ಹಾಗೂ ಮಾಲೀಕರಾದ ರಮೇಶ್ ರೆಡ್ಡಿ, ಸಂಪಾದಕ ಮಂಡಳಿ, ವರದಿಗಾರರು, ಸಿಬ್ಬಂದಿ ವರ್ಗ ಹಾಗೂ ಓದುಗರಿಗೆ ಅಭಿನಂದನೆ ಸಲ್ಲಿಸಿದ ಕುಪೇಂದ್ರ ರೆಡ್ಡಿ ಅವರು, ಮಲ್ಲಮ್ಮ ನುಡಿ ಕನ್ನಡ ಪತ್ರಿಕೋದ್ಯಮದಲ್ಲಿ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಹಾಗೂ ಸಮಾಜದ ವಿಶ್ವಾಸವನ್ನು ಗಳಿಸುತ್ತಾ ನಿರಂತರ ಯಶಸ್ಸು ಸಾಧಿಸಲಿ ಎಂದು ಶುಭ ಕೋರಿದರು.

## ಯಾರ ಹಂಗಿಲ್ಲದೆ ಬೆಳೆಯಲಿ..!



ಮಲ್ಲಮ್ಮ ನುಡಿ ಹೆಸರೇ ವಿಶಿಷ್ಟವಾಗಿದೆ. ನಾನು ಹೈದರಾಬಾದ್ ಕರ್ನಾಟಕದ ಕಡೆ ಹೋದಾಗಲೆಲಾ ಈ ಪತ್ರಿಕೆ ಕಣ್ಣಿಗೆ ಬೀಳುತ್ತದೆ. ಖುಷಿಯಿಂದ ಓದುತ್ತೇನೆ. ವಿಶೇಷವಾಗಿ ಒಂದು ಪ್ರಾದೇಶಿಕ ಪತ್ರಿಕೆ ರೂಪುಗೊಳ್ಳುವುದರ ಹಿಂದೆ ಅದೆಷ್ಟೋ ಶ್ರಮ ಇರುತ್ತದೆ. ಅದು ಹೊಸ ವಿಷಯವಲ್ಲ. ಆದರೆ ಪ್ರಾದೇಶಿಕ ಸುದ್ದಿಗಳ ಜೊತೆ ಜೊತೆಗೇ ಇಡೀ ನಾಡಿನ ರಾಷ್ಟ್ರದ ಸುದ್ದಿಗಳೂ ಮಲ್ಲಮ್ಮನುಡಿಯಲ್ಲಿರುವುದನ್ನು ಕುತೂಹಲದಿಂದ ಅವಲೋಕಿಸಿದ್ದೇನೆ. ಯಾರ ಮುಲಾಜು ಇಲ್ಲದೆ, ಗಿಲೀಟು ಮಾಡದೆ, ನಿಷ್ಠುರವಾಗಿರುವ ಸುದ್ದಿಗಳ್ನು ಪ್ರಕಟಿಸುವುದು ಮಲ್ಲಮ್ಮನುಡಿಯ ವೈಶಿಷ್ಟ್ಯ. ಬೀದರ್ ಜೊತೆಗೆ ಹುಬ್ಬಳ್ಳಿ, ಬೆಂಗಳೂರು ಆವೃತ್ತಿಗಳೂ ಹೊರಬರುತ್ತಿರುವುದು ಮತ್ತೊಂದು ಸಂತೋದ ಸಂಗತಿ. ಹೀಗೇ ಯಾರ ಹಂಗಿಲ್ಲದೆ ಬೆಳೆಯಲಿ. ಪ್ರಜಾ ಪ್ರಭಿತ್ವದ ನಾಲ್ಕನೇ ಅಂಗವಾಗಿ ಕಾರ್ಯನಿರ್ವಹಿಸುವ ಮೂಲಕ ಆರೋಗ್ಯ ಸಮಾಜ ನಿರ್ಮಾಣ ಮಾಡಲಿ.

–ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿಗಳು

## ಬೀದರ್‌ನಿಂದ ಬೆಂಗಳೂರು ವರೆಗೆ






**ಪ್ರಿಯ ಓದುಗ ಬಂಧುಗಳೇ**

ನಾಡ ಪುರೋಭಿವೃದ್ಧಿ, ಜನರ ಉನ್ನತಿ ಧ್ಯೇಯವಾಕ್ಯದಿಂದ ಆರಂಭವಾದಮಲ್ಲಮ್ಮನುಡಿ–ಕನ್ನಡ ದಿನಪತ್ರಿಕೆಪ್ರಾದೇಶಿಕವಾಗಿ,ಕಲ್ಯಾಣ ಕರ್ನಾಟಕದಾದ್ಯಂತ ಮನೆ ಮಾತಾಗಿದೆ. ಇದೀಗ ಹದಿಮೂರು ದಾಟಿ ಹದಿನಾಲ್ಕನೇ ವಸಂತಕ್ಕೆ ಕಾಲಿಟ್ಟಿದೆ. ಸದಾ ಹೊಸತನಕ್ಕೆ ನಾಂದಿಯಾಡುತ್ತ, ಗಿಲೀಟು ಸುದ್ದಿಗಳ ಜೋಲಿಗೆ ಹೋಗದೆ, ವರ್ತಮಾನಕ್ಕೆ ದನಿಯಾಗಿ, ದೈನಂದಿನ ಘಟನಾವಳಿಗಗಳಿಗೆ ಸಾಕ್ಷಿಯಾಗಿದೆ. ಸುದ್ದಿಯ ವಿಶ್ಲೇಷಣೆ, ಪುಟ ವಿನ್ಯಾಸದ ವಿನೂತನ ಶೈಲಿಯಿಂದ ಓದುಗರ ಮೆಚ್ಚುಗೆಗೆ ಪಾತ್ರವಾಗಿದ್ದು ಗೊತ್ತೇ ಇದೆ. ಯಾರ ಒತ್ತಡಕ್ಕೂ ಮಣಿಯದೆ, ರಾಷ್ಟ್ರ–ನಾಡಿನ ಹಿತಕ್ಕೆ ಬದ್ಧವಾಗಿ ನಿರಂತರವಾಗಿ ಪ್ರಕಟವಾಗುತ್ತಿರುವುದು ಪತ್ರಿಕೆಯ ಅಸ್ಮಿತೆಯ ಪ್ರತೀಕ. ಇದೀಗ ಬೆಂಗಳೂರು ಆವೃತ್ತಿಯೂ ಆರಂಭವಾಗುತ್ತಿದೆ. ಈ ಹೊಸ ಸಾಹಸಕ್ಕೆ ಓದುಗ ಬಂಧುಗಳ ಬೆಂಬಲ ಬೇಕು. ಎಂದಿನಂತೆ ಹಿತೈಷಿಗಳ ಮಾರ್ಗದರ್ಶನ, ಜಾಹೀರಾತುದಾರರ ನಿತ್ಯ ಪ್ರೋತ್ಸಾಹ ಅತ್ಯಗತ್ಯ. ತಮ್ಮ ಬೆಂಬಲವೇ ನಮಗೆ ಭೀಮ ಬಲ. ನಾಡಪರ ಚಿಂತನೆಯೇ ನಮ್ಮ ಪ್ರಗತಿ.

–ಪತ್ರಿಕಾ ಆಡಳಿತ ಮಂಡಳಿ

## ಮಲ್ಲಮ್ಮನುಡಿಗೆಶುಭವಾಗಲಿ



ಬದಲಾಗುತ್ತಿರುವ ಕಾಲಘಟ್ಟದಲ್ಲಿ ಪತ್ರಿಕೆಗಳು ಜೀವಂತವಾಗಿರುವುದೇ ಕಷ್ಟ. ಅಂಥಾದ್ರಲ್ಲಿ ಮಲ್ಲಮ್ಮ ನುಡಿ ನಿರಂತರವಾಗಿ ಪ್ರಕಟವಾಗುತ್ತಿದೆ. ಬೀದರ್, ರಾಯಚೂರು, ವಿಜಾಪುರ, ಕಲ್ಬುರ್ಗಿ, ಬಳ್ಳಾರಿ, ಕೊಪ್ಪಳ, ಹೊಸಪೇಟೆ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಈ ಪತ್ರಿಕೆ ಹೆಸರು ಮಾಡಿದೆ. ಎಷ್ಟೋ ಸಮಾಜ ಮುಖಿ ವಿಶೇಷ ಸುದ್ದಿಗಳನ್ನು ಪ್ರಕಟಿಸಿ ಸರ್ಕಾರಗಳ ಕಣ್ಣು ತೆರೆಸಿದ್ದು ಗಮನಿಸಿರುವೆನು. ಪ್ರಕಟವಾಗುವ ರಾಜಕೀಯ ವರದಿಗಳು ಮೌಲಿಕವಾಗಿದ್ದು, ಸಮಾಜದ ಓರೆ ಕೋರೆ ತಿದ್ದಲು ಸಹಕಾರಿ ಆಗಿವೆ. ಈಗಾಗಲೇ ಹೈದ್ರಾಬಾದ್ ಕರ್ನಾಟಕದಲ್ಲಿ ಹೆಸರು ಮಾಡಿ ಇದೀಗ ಹುಬ್ಬಳ್ಳಿ, ಬೆಂಗಳೂರು ಆವೃತ್ತಿಗಳನ್ನು ಆರಂಭಿಸುತ್ತಿರುವ ಮಲ್ಲಮ್ಮ ನುಡಿ ದೈನಿಕಕ್ಕೆ ಶುಭವಾಗಲಿ.

–ಎಸ್.ಆರ್, ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ

# ತಜ್ಞರ ಸಲಹೆಗೆ ಮೊರೆ

## ಪರಿಸ್ಥಿತಿ ತಿಳಿಯಾದ ಬಳಿಕ ತಮಿಳುನಾಡು ಸಿಎಂ ವಿಜಯ್ ಜೊತೆ ಸಭೆ: ಸಿಎಂ ಡಿಕೆಶಿವಕುಮಾರ್

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಕಾವೇರಿ ನೀರಿನ ವಿಚಾರವಾಗಿ ಕಾನೂನು ತಜ್ಞರ ಸಲಹೆ ಹಾಗೂ ಪ್ರತಿ ಪಕ್ಷಗಳ ನಾಯಕರನ್ನು ವಿಶ್ವಾಸಕ್ಕೆ ಪಡೆದ ಬಳಿಕ ಮುಂದಿನ ತೀರ್ಮಾನ ಮಾಡಲಾಗುವುದು' ಎಂದು ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಶಿವಕುಮಾರ್ ಅವರು ಮಾತನಾಡಿ, 'ಪರಿಸ್ಥಿತಿ ತಿಳಿಯಾದ ಬಳಿಕ ತಮಿಳುನಾಡು ಸಿಎಂ ವಿಜಯ್ ಜೊತೆ ಸಭೆ ನಡೆಸಲಾಗುವುದು. ಕಾವೇರಿ ನೀರಿನ ವಿಚಾರದಲ್ಲಿ ನಿತ್ಯ 3500 ಕ್ಯೂಸೆಕ್ ನೀರುನ್ನು ತಮಿಳುನಾಡಿಗೆ ಹರಿಸಬೇಕು ಎಂಬ ಕಾವೇರಿ ನೀರು ನಿಯಂತ್ರಣ ಸಮಿತಿ (CWRC) ಆದೇಶ ನೀಡಿದೆ ಎಂದು ಹೇಳಿದ್ದಾರೆ.

**ನೀರು ಕಡಲಿಗೆ ವ್ಯರ್ಥ:** 2016, 2017, 2018, 2023ರಲ್ಲಿ ಇಂತಹ ಆದೇಶ ಬಂದಿವೆ. ಕಳೆದ ವರ್ಷ ಜೂನ್ ತಿಂಗಳಲ್ಲೇ ಕೆಆರ್ ಎಸ್ ಜಲಾಶಯಕ್ಕೆ ಬಾಗಿನ ಅರ್ಪಿಸಿದ್ದೆವು. ಕಳೆದ ವರ್ಷ ಉತ್ತಮ ಮಳೆ ಬೆಳೆ ಆಗಿತ್ತು. ಕಳೆದ ವರ್ಷ 177 ಟಿಎಂಸಿ ಬದಲಾಗಿ 400ಕ್ಕೂ ಹೆಚ್ಚು ಟಿಎಂಸಿ ನೀರು ಹರಿಸಲಾಗಿತ್ತು. ಅನೇಕ ಪ್ರಮಾಣದ ನೀರು ಸಮುದ್ರವನ್ನು ಸೇರಿದೆ ಎಂದಿದ್ದಾರೆ.

**ಉತ್ತರ ಕೊಡುವ ಅಗತ್ಯವಿಲ್ಲ:** ಬಿಳಿಗುಂಡ್ಲುವಿಗೆ 3,500 ಕ್ಯೂಸೆಕ್ ನೀರನ್ನು ಹರಿಸಲು ನೀಡಿರುವ ಆದೇಶದ ವಿರುದ್ಧ ನಾವು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಅಘಒಂ) ಮುಂದೆ ಮೇಲ್ಮನವಿ ಸಲ್ಲಿಸಿದ್ದೆವು. ನಮ್ಮ ವಿರೋಧ ಪಕ್ಷಗಳ ಸ್ನೇಹಿತರು, ಅಧಿಕಾರಿಗಳು ಹೋಗಿಲ್ಲ ಎಂದು ಆರೋಪ ಮಾಡಿದರು. ನಾನು ಅವರಿಗೆ ಉತ್ತರ ಕೊಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.




### ಮಾಹಿತಿ ಮುಚ್ಚಿಡಲಾಗಲ್ಲ



ಕಾವೇರಿ ಪ್ರಾಧಿಕಾರದವರಿಗೆ, ತಮಿಳುನಾಡಿನವರಿಗೆ, ಮಾಧ್ಯಮವರರು ಸೇರಿದಂತೆ ಎಲ್ಲರಿಗೂ ಪ್ರತಿ ಅಣೆಕಟ್ಟಿನ ಒಳಹರಿವಿನ ಮಾಹಿತಿ ಇದ್ದು, ಹಾರಂಗಿ ಜಲಾಶಯ 95%, ಕಬಿನಿ 83%, ಕೆಆರ್ ಎಸ್ 36%, ಹೇಮಾವತಿಯಲ್ಲಿ 67% ನೀರು ಶೇಖರಣೆಯಾಗಿದೆ. ಈ ಮಾಹಿತಿಯನ್ನು ಯಾರಿಂದಲೂ ಮುಚ್ಚಿಡಲು ಸಾಧ್ಯವಿಲ್ಲ ಎಂದಿದ್ದಾರೆ ಸಚಿವ ರಾಮಲಿಂಗಾರೆಡ್ಡಿ.

### ಸಂಸದರಿಂದ ಸಹಕಾರ

ಪ್ರತಿ ಪಕ್ಷದ ನಾಯಕರು ಮಾಧ್ಯಮಗಳ ಮೂಲಕ ಅನೇಕ ಮಾರ್ಗದರ್ಶನ ನೀಡಿದ್ದಾರೆ. ನಾವು ಮೇಲ್ಮನವಿ ಸಲ್ಲಿಸುವ ಮುನ್ನ ಕೇಂದ್ರ ಸಂಸದರು ಹಾಗೂ ಕೇಂದ್ರ ಸಚಿವರ ಸರ್ವಪಕ್ಷ ಸಭೆ ಮಾಡಿದ್ದೆ. ಎಲ್ಲಾ ಪಕ್ಷದ ಸಂಸದರು ಬಹಳ ಗೌರವದಿಂದ ರಾಜ್ಯದ ನೆಲ, ಜಲ ವಿಚಾರದಲ್ಲಿ ಸಭೆಯಲ್ಲಿ ಭಾಗವಹಿಸಿ ಚರ್ಚೆ ಮಾಡಿದ್ದಾರೆ ಎಂದು ಸಿಎಂ ಸ್ಮರಿಸಿದ್ದಾರೆ.

### ಮೇಕೆದಾಟು ಒಂದು ವರ

ಮೇಕೆದಾಟು ಯೋಜನೆ ಕರ್ನಾಟಕಕ್ಕಿಂತ ತಮಿಳುನಾಡಿಗೆ ಹೆಚ್ಚು ಪ್ರಯೋಜನವಾಗಲಿದೆ. ನಾವು ಕೇವಲ 400 ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಹಾಗೂ ಕುಡಿಯುವ ನೀರಿನ ಪೂರೈಕೆಗೆ ಬಳಕೆಯಾಗಲಿದೆ. ಈ 66 ಟಿಎಂಸಿ ನೀರನ್ನು ಯಾವುದೇ ಕಾರಣಕ್ಕೂ ನೀರಾವರಿ ಉದ್ದೇಶಕ್ಕೆ ಬಳಸಿಕೊಳ್ಳುವುದಿಲ್ಲ ಎಂದು ಮುಖ್ಯಮಂತ್ರಿ ವಿವರಿಸಿದ್ದಾರೆ.

### ಆದೇಶ ಹೊರಡಿಸಿದ್ದು ಸಲ್ಲ



ಮುಂದಿನ 15 ದಿನಗಳ ಕಾಲ ತಮಿಳುನಾಡಿಗೆ ಪ್ರತಿನಿತ್ಯ 3,500 ನೀರನ್ನು ಹರಿಸಬೇಕು ಎಂದು ಕಾವೇರಿ ಪ್ರಾಧಿಕಾರ ಊಹಾತ್ಮಕವಾಗಿ ಆದೇಶ ನೀಡಿದೆ. ಬರುವ ದಿನಗಳಲ್ಲಿ ಕಾವೇರಿ ಕಣಿವೆ ಜಲಾಶಯಗಳಿಗೆ 12 ಟಿಎಂಸಿ ನೀರು ಹರಿದು ಬರಬಹುದು ಎಂದು ಅದು ಊಹೆ ಮಾಡಿದೆ. ಯಾವ ಆಧಾರದಲ್ಲಿ ಇಂತಹ ಊಹೆಯನ್ನು ಪ್ರಾಧಿಕಾರ ಮಾಡಿದೆ ಎಂಬುದು ನನಗೆ ಅರ್ಥವಾಗುತ್ತಿಲ್ಲ ಎಂದಿದ್ದಾರೆ ಕೇಂದ್ರ ಸಚಿವ ಕುಮಾರಸ್ವಾಮಿ.

## ಪತ್ರಿಕೆಯ ಬೆಂಗಳೂರು ಆವೃತ್ತಿಗೆ ಶುಭಾಶಯ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**



ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯ ಬೆಂಗಳೂರು ಆವೃತ್ತಿ ಆರಂಭವಾಗುತ್ತಿರುವುದು ಅತ್ಯಂತ ಸಂತಸದ ಹಾಗೂ ಹೆಮ್ಮೆಯ ಸಂಗತಿ. ಕನ್ನಡ ಭಾಷೆ, ಸಂಸ್ಕೃತಿ ಹಾಗೂ ಸಮಾಜದ ನೈಜ ಸಮಸ್ಯೆಗಳನ್ನು ಜನರ ಮುಂದಿಡುವ ಮಾಧ್ಯಮಗಳ ಅಗತ್ಯ ಇಂದು ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಮಲ್ಲಮ್ಮ ನುಡಿ ಬೆಂಗಳೂರಿನಲ್ಲಿ ತನ್ನ ಹೊಸ ಆವೃತ್ತಿಯನ್ನು ಆರಂಭಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದ ರಾಜ್ಯ ಕಾಂಗ್ರೆಸ್ ಪಕ್ಷದ ಮಹಿಳಾ ಅಧ್ಯಕ್ಷೆ ಸೌಮ್ಯರೆಡ್ಡಿ ಅಭಿನಂದಿಸಿದ್ದಾರೆ.

ಪತ್ರಿಕೆಯು ಸದಾ ಸತ್ಯ, ನಿಷ್ಪಕ್ಷಪಾತ ಹಾಗೂ ಜನಪರ ಪತ್ರಿಕೋದ್ಯಮದ ಮೂಲಕ ಸಮಾಜದ ಧ್ವನಿಯಾಗಿ ಕಾರ್ಯನಿರ್ವಹಿಸಲಿ. ರಾಜ್ಯದ ಜನರ ವಿಶ್ವಾಸ ಗಳಿಸಿ ಇನ್ನಷ್ಟು ಯಶಸ್ಸು, ಪ್ರಗತಿ ಹಾಗೂ ಕೀರ್ತಿ ಹೊಂದಲಿ ಎಂದು ಹಾರೈಸುತ್ತೇನೆ. ಪತ್ರಿಕೆಯ ಮಾಲೀಕರು, ಸಂಪಾದಕರು ಹಾಗೂ ಸಂಪೂರ್ಣ ಬಳಗಕ್ಕೆ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಶುಭಾಶಯಗಳು ಎಂದಿದ್ದಾರೆ.

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**



ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯ ಬೆಂಗಳೂರು ಆವೃತ್ತಿ ಆರಂಭವಾಗುತ್ತಿರುವುದು ಅತ್ಯಂತ ಸಂತಸದ ಸಂಗತಿ. ಕನ್ನಡ ನಾಡಿನ ರಾಜಧಾನಿಯಾದ ಬೆಂಗಳೂರಿನಲ್ಲಿ ಪತ್ರಿಕೆಯ ಹೊಸ ಅಧ್ಯಾಯ ಆರಂಭವಾಗುತ್ತಿರುವುದು ಹೆಮ್ಮೆಯ ವಿಷಯ.

ಸಮಾಜದ ಧ್ವನಿಯಾಗಿ, ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮಾಧ್ಯಮವಾಗಿ ಹಾಗೂ ನೈಜ ಸುದ್ದಿಗಳನ್ನು ಜನರಿಗೆ ತಲುಪಿಸುವಲ್ಲಿ ಮಲ್ಲಮ್ಮ ನುಡಿ ಇನ್ನಷ್ಟು ಯಶಸ್ಸು ಸಾಧಿಸಲಿ. ಪತ್ರಿಕೆಯು ಇನ್ನಷ್ಟು ಬೆಳೆಯಲಿ, ರಾಜ್ಯದಾದ್ಯಂತ ತನ್ನ ಓದುಗರ ಬಳಗವನ್ನು ವಿಸ್ತರಿಸಲಿ ಎಂದು ಹಾರೈಸುತ್ತೇನೆ.


ಪತ್ರಿಕೆಯ ಮಾಲೀಕರು, ಸಂಪಾದಕರು ಹಾಗೂ ಸಂಪೂರ್ಣ ಬಳಗಕ್ಕೆ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಶುಭಾಶಯಗಳು.

–ಶೇಖರ್ ರೆಡ್ಡಿ
ಪ್ರಧಾನ ಕಾರ್ಯದರ್ಶಿಗಳು,
ರೆಡ್ಡಿ ಜನ ಸಂಘ, ಬೆಂಗಳೂರು.

# ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆ ಬೆಂಗಳೂರು ಆವೃತ್ತಿಗೆ ಗಣ್ಯರ ಶುಭ ಹಾರೈಕೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

"ಮಲ್ಲಮ್ಮ ನುಡಿ" ಪ್ರಾದೇಶಿಕ ಪತ್ರಿಕೆಯ ಬೆಂಗಳೂರು ಆವೃತ್ತಿಯ ಆರಂಭಕ್ಕೆ ಸಚಿವ ರಾಮಲಿಂಗಾ ರೆಡ್ಡಿ ಅವರು ಹೃತ್ಪೂರ್ವಕ ಶುಭ ಹಾರೈಸಿದ್ದಾರೆ.



ಪತ್ರಿಕೆಗಳು ಸಮಾಜದ ಕನ್ನಡಿ ಹಾಗೂ ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾಗಿದ್ದು, ಜನಸಾಮಾನ್ಯರ ಧ್ವನಿಯಾಗಿ ಕಾರ್ಯನಿರ್ವಹಿಸುವ ಜವಾಬ್ದಾರಿ ಹೊಂದಿವೆ. "ಮಲ್ಲಮ್ಮ ನುಡಿ" ಗ್ರಾಮೀಣ ಹಾಗೂ ನಗರ ಭಾಗಗಳ ಸಮಸ್ಯೆಗಳನ್ನು ಸಮಾನವಾಗಿ ಬೆಳಕಿಗೆ ತಂದು ಜನಪರ ಪತ್ರಿಕೋದ್ಯಮವನ್ನು ಮತ್ತಷ್ಟು ಬಲಪಡಿಸಲಿ ಎಂದು ಅವರು ಆಶಿಸಿದರು. ಬೆಂಗಳೂರು ಆವೃತ್ತಿಯ ಆರಂಭವು ಪತ್ರಿಕೆಯ ಬೆಳವಣಿಗೆಯ ಹೊಸ ಅಧ್ಯಾಯವಾಗಿದ್ದು, ರಾಜ್ಯದ ವಿವಿಧ ಭಾಗಗಳ ಸುದ್ದಿಗಳನ್ನು ನಿಷ್ಪಕ್ಷಪಾತವಾಗಿ ಓದುಗರಿಗೆ ತಲುಪಿಸುವಲ್ಲಿ ಯಶಸ್ಸು ಸಾಧಿಸಲಿ ಎಂದು ಅವರು ಹಾರೈಸಿದರು. ಪತ್ರಿಕೆಯ ಸಂಪಾದಕ ಮಂಡಳಿ, ವರದಿಗಾರರು, ಸಿಬ್ಬಂದಿ ಹಾಗೂ ಓದುಗರಿಗೆ ಅಭಿನಂದನೆ ಸಲ್ಲಿಸಿದ ಸಚಿವ ರಾಮಲಿಂಗಾ ರೆಡ್ಡಿ, "ಮಲ್ಲಮ್ಮ ನುಡಿ" ಇನ್ನಷ್ಟು ಜನಪ್ರಿಯವಾಗಿ ಬೆಳೆಯಲಿ ಹಾಗೂ ಸಮಾಜಮುಖಿ ಸೇವೆಯನ್ನು ನಿರಂತರವಾಗಿ ಮುಂದುವರಿಸಲಿ ಎಂದು ಶುಭ ಕೋರಿದರು.

• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್**

"ಮಲ್ಲಮ್ಮ ನುಡಿ" ಪ್ರಾದೇಶಿಕ ಪತ್ರಿಕೆಯ ಬೆಂಗಳೂರು ಆವೃತ್ತಿಯ ಆರಂಭಕ್ಕೆ ಮಾಜಿ ಸಚಿವ ರಾಜಶೇಖರ ಬಿ. ಪಾಟೀಲ ಅವರು ಹೃತ್ಪೂರ್ವಕ ಶುಭ ಹಾರೈಸಿದ್ದಾರೆ.




ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಪ್ರಾದೇಶಿಕ ಪತ್ರಿಕೆಗಳು ಸಮಾಜದ ನೈಜ ಸಮಸ್ಯೆಗಳನ್ನು ಜನರ ಮುಂದೆ ತರುವ ಜೊತೆಗೆ ಆಡಳಿತ ಮತ್ತು ಸಾರ್ವಜನಿಕರ ನಡುವಿನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತವೆ. 'ಮಲ್ಲಮ್ಮ ನುಡಿ' ಕಳೆದ ಹಲವು ವರ್ಷಗಳಿಂದ ಜನಪರ ಹಾಗೂ ಸಮಾಜಮುಖಿ ಸುದ್ದಿಗಳಿಗೆ ಆದ್ಯತೆ ನೀಡುತ್ತಾ ವಿಶ್ವಾಸಾರ್ಹ ಪತ್ರಿಕೆಯಾಗಿದ್ದು, ಇದೀಗ ಬೆಂಗಳೂರು ಆವೃತ್ತಿಯ ಆರಂಭವು ಪತ್ರಿಕೆಯ ಬೆಳವಣಿಗೆಯಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ" ಎಂದು ಹೇಳಿದರು.

ರಾಜ್ಯದ ರಾಜಧಾನಿಯಿಂದಲೂ ಜನರ ಧ್ವನಿಯಾಗಿ ಕಾರ್ಯನಿರ್ವಹಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಬಲವರ್ಧನೆಗೆ ಪತ್ರಿಕೆ ತನ್ನ ಸೇವೆಯನ್ನು ಇನ್ನಷ್ಟು ವಿಸ್ತರಿಸಲಿ ಎಂದು ಅವರು ಹಾರೈಸಿದರು. ಪತ್ರಿಕೆಯ ಸಂಪಾದಕ ಮಂಡಳಿ, ವರದಿಗಾರರು, ಸಿಬ್ಬಂದಿ ವರ್ಗ ಹಾಗೂ ಓದುಗರಿಗೆ ಅಭಿನಂದನೆ ಸಲ್ಲಿಸಿದ ಮಾಜಿ ಸಚಿವ ರಾಜಶೇಖರ ಬಿ. ಪಾಟೀಲ, "ಮಲ್ಲಮ್ಮ ನುಡಿ" ಇನ್ನಷ್ಟು ಯಶಸ್ಸು ಗಳಿಸಿ ಕನ್ನಡ ಪತ್ರಿಕೋದ್ಯಮದಲ್ಲಿ ವಿಶಿಷ್ಟ ಸ್ಥಾನವನ್ನು ಅಲಂಕರಿಸಲಿ ಎಂದು ಶುಭ ಕೋರಿದರು.

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

"ಮಲ್ಲಮ್ಮ ನುಡಿ" ಪ್ರಾದೇಶಿಕ ಪತ್ರಿಕೆಯ ಬೆಂಗಳೂರು ಆವೃತ್ತಿಯ ಆರಂಭಕ್ಕೆ ಸಚಿವ ಈಶ್ವರ ಬಿ. ಖಂಡ್ರೆ ಅವರು ಹೃತ್ಪೂರ್ವಕ ಶುಭ ಹಾರೈಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಪ್ರಾದೇಶಿಕ ಪತ್ರಿಕೆಗಳು ಸಮಾಜದ ನೈಜ ಸಮಸ್ಯೆಗಳನ್ನು ಜನರ ಮುಂದೆ ತರುವ ಜೊತೆಗೆ ಆಡಳಿತ ಮತ್ತು ಸಾರ್ವಜನಿಕರ ನಡುವಿನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತವೆ. 'ಮಲ್ಲಮ್ಮ ನುಡಿ' ಕಳೆದ ಹಲವು ವರ್ಷಗಳಿಂದ ಜನಪರ ಹಾಗೂ ಸಮಾಜಮುಖಿ ಸುದ್ದಿಗಳಿಗೆ ಆದ್ಯತೆ ನೀಡುತ್ತಾ ವಿಶ್ವಾಸಾರ್ಹ ಪತ್ರಿಕೆಯಾಗಿದ್ದು, ಇದೀಗ ಬೆಂಗಳೂರು ಆವೃತ್ತಿಯ ಆರಂಭವು ಪತ್ರಿಕೆಯ ಬೆಳವಣಿಗೆಯಲ್ಲಿವ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ" ಎಂದು ಹೇಳಿದರು. ರಾಜ್ಯದ ರಾಜಧಾನಿಯಿಂದಲೂ ಜನರ ಧ್ವನಿಯಾಗಿ ಕಾರ್ಯನಿರ್ವಹಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಬಲವರ್ಧನೆಗೆ ಪತ್ರಿಕೆ ತನ್ನ ಸೇವೆಯನ್ನು ಇನ್ನಷ್ಟು ವಿಸ್ತರಿಸಲಿ ಎಂದು ಅವರು ಹಾರೈಸಿದರು. ಪತ್ರಿಕೆಯ ಸಂಪಾದಕ ಮಂಡಳಿ, ವರದಿಗಾರರು, ಸಿಬ್ಬಂದಿ ವರ್ಗ ಹಾಗೂ ಓದುಗರಿಗೆ ಅಭಿನಂದನೆ ಸಲ್ಲಿಸಿದ ಸಚಿವ ಈಶ್ವರ ಬಿ. ಖಂಡ್ರೆ, "ಮಲ್ಲಮ್ಮ ನುಡಿ" ಇನ್ನಷ್ಟು ಯಶಸ್ಸು ಗಳಿಸಿ ಕನ್ನಡ ಪತ್ರಿಕೋದ್ಯಮದಲ್ಲಿ ವಿಶಿಷ್ಟ ಸ್ಥಾನವನ್ನು ಅಲಂಕರಿಸಲಿ ಎಂದು ಶುಭ ಕೋರಿದರು.



**ಕಾವೇರಿ ಕಿಡಿ: ತಮಿಳುನಾಡು ಸಿಎಂ ವಿಜಯ್ ಭೇಟಿಗೆ ಬ್ರೇಕ್ ಹಾಕಿದ ಡಿಕೆಶಿ! ಎಲ್ಲ ಅಂಕಿ–ಅಂಶ ನ್ಯಾಯಾಲಯದಲ್ಲಿದೆ, ಮೇಲ್ಮನವಿ ಸಲ್ಲಿಸಿದ್ದೇವೆ ಎಂದ ಸಿಎಂ ಡಿಕೆಶಿ**

# ಆದಷ್ಟು ಬೇಗ ಸಚಿವರ ನೇಮಕ ಮಾಡಿ, ಜನರ ಸಂಕಷ್ಟಗಳಿಗೆ ಸ್ಪಂದಿಸಿ

ಪ್ರಜಾಪ್ರಭುತ್ವದಲ್ಲಿ ಸರ್ಕಾರದ ಮೊದಲ ಕರ್ತವ್ಯ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವುದಾಗಿದೆ. ಆದರೆ ಸಚಿವರ ನೇಮಕಾತಿಯಲ್ಲಿ ಉಂಟಾಗುವ ವಿಳಂಬ ಆಡಳಿತದ ವೇಗವನ್ನು ಕುಂಠಿತಗೊಳಿಸುತ್ತದೆ. ಇಲಾಖೆಗಳಿಗೆ ಪೂರ್ಣ ಪ್ರಮಾಣದ ನಾಯಕತ್ವ ಇಲ್ಲದಿದ್ದರೆ ಮಹತ್ವದ ನಿರ್ಧಾರಗಳು ಮುಂದೂಡಲ್ಪಡುತ್ತವೆ. ಅದರ ನೇರ ಪರಿಣಾಮವನ್ನು ಅನುಭವಿಸುವವರು ಸಾಮಾನ್ಯ ಜನರೇ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ರಾಜ್ಯದ ಹಲವು ಭಾಗಗಳಲ್ಲಿ ರೈತರು ಮಳೆಯ ಕೊರತೆಯಿಂದ ಸಂಕಷ್ಟದಲ್ಲಿದ್ದಾರೆ. ಯುವಕರು ಉದ್ಯೋಗದ ನಿರೀಕ್ಷೆಯಲ್ಲಿದ್ದಾರೆ. ರಸ್ತೆ, ಕುಡಿಯುವ ನೀರು, ಆರೋಗ್ಯ, ಶಿಕ್ಷಣ ಸೇರಿದಂತೆ ಅನೇಕ ಮೂಲಭೂತ ಸಮಸ್ಯೆಗಳು ಪರಿಹಾರಕ್ಕಾಗಿ ಕಾಯುತ್ತಿವೆ. ಇಂತಹ ಸಂದರ್ಭದಲ್ಲಿ ಬಲಿಷ್ಠ ಮತ್ತು ಪೂರ್ಣ ಪ್ರಮಾಣದ ಸಚಿವ ಸಂಪುಟದ ಅಗತ್ಯ ಹಿಂದೆಂದಿಗಿಂತಲೂ ಹೆಚ್ಚಾಗಿದೆ.

ಸರ್ಕಾರವು ರಾಜಕೀಯ ಲೆಕ್ಕಾಚಾರಗಳಿಗಿಂತ ಜನಹಿತಕ್ಕೆ ಆದ್ಯತೆ ನೀಡಬೇಕು. ಖಾಲಿ ಇರುವ ಸಚಿವ ಸ್ಥಾನಗಳನ್ನು ಆದಷ್ಟು ಬೇಗ ಭರ್ತಿ ಮಾಡಿ, ಪ್ರತಿಯೊಂದು ಇಲಾಖೆಯ ಕಾರ್ಯಚಟುವಟಿಕೆಗಳಿಗೆ ಹೊಸ ಚೈತನ್ಯ ನೀಡಬೇಕು. ಸಚಿವರು ನೇರವಾಗಿ ಜನರೊಂದಿಗೆ ಸಂಪರ್ಕದಲ್ಲಿದ್ದು, ಅಧಿಕಾರಿಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಿ, ಬಾಕಿ ಉಳಿದಿರುವ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡಬೇಕಾಗಿದೆ.

ಜನರು ಸರ್ಕಾರದಿಂದ ನಿರೀಕ್ಷಿಸುವುದು ಭರವಸೆಯ ಮಾತುಗಳಲ್ಲ, ಫಲಿತಾಂಶ. ಆದ್ದರಿಂದ ಸರ್ಕಾರವು ಸಮಯ ವ್ಯರ್ಥ ಮಾಡದೆ ಸಚಿವರನ್ನು ನೇಮಿಸಿ, ಆಡಳಿತಕ್ಕೆ ವೇಗ ನೀಡಿ, ಸಾರ್ವಜನಿಕರ ಸಮಸ್ಯೆಗಳಿಗೆ ಶಾಶ್ವತ ಮತ್ತು ಪರಿಣಾಮಕಾರಿ ಪರಿಹಾರ ಕಲ್ಪಿಸುವ ಮೂಲಕ ಜನರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಬೇಕಾಗಿದೆ.

# ವಿಜೃಂಭಣೆಯಿಂದ ಗುರುಪೂರ್ಣಿಮೆ ಆಚರಣೆ



**ಗಂಗಾವತಿ:** ಭಾರತದ ಸಂಸ್ಕೃತಿ, ಆಧ್ಯಾತ್ಮಿಕ ಪರಂಪರೆ ಮತ್ತು ಗುರು–ಶಿಷ್ಯ ಸಂಬಂಧದ ಮಹತ್ವವನ್ನು ಸಾರುವ ಗುರುಪೂರ್ಣಿಮೆ ಅಂಗವಾಗಿ ಗಂಗಾವತಿಯ ಐತಿಹಾಸಿಕ ಕಲ್ಮಠದಲ್ಲಿ ಭಕ್ತಿ, ಶ್ರದ್ಧೆ ಮತ್ತು ಸಂಭ್ರಮದ ವಾತಾವರಣದಲ್ಲಿ ವಿಶೇಷ ಕಾರ್ಯಕ್ರಮ ನಡೆಯಿತು. ಕೊಟ್ಟೂರೇಶ್ವರ ಶಿವಯೋಗಿಗಳ ಪುಣ್ಯಾರಾಧನೆ ನಿಮಿತ್ತ ಆಯೋಜಿಸಲಾದ ಪುರಾಣ ಪ್ರವಚನ ಹಾಗೂ ಗುರುಪೂರ್ಣಿಮೆ ಸಮಾರಂಭದಲ್ಲಿ ನೂರಾರು ಭಕ್ತರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಮಠದ ಅಭಿಮಾನಿಗಳು ಭಾಗವಹಿಸಿ ಗುರುವಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಕಲ್ಮಠ ಮಹಿಳಾ ಕಾಲೇಜಿನ ಪ್ರಾಚಾರ್ಯರಾದ ಡಾ. ಶರಣಬಸಪ್ಪ ಕೋಲ್ಕಾರ್, ಭಾರತವು ವಿಶ್ವದಲ್ಲೇ ಅತ್ಯಂತ ಶ್ರೇಷ್ಠ ಗುರುಪರಂಪರೆಯನ್ನು ಹೊಂದಿದ ರಾಷ್ಟ್ರವಾಗಿದ್ದು, ಸಾವಿರಾರು ವರ್ಷಗಳಿಂದ ತನ್ನ ಮೂಲ ಸಂಸ್ಕೃತಿ, ಆಧ್ಯಾತ್ಮಿಕ ಪರಂಪರೆ ಮತ್ತು ಜೀವನ ಮೌಲ್ಯಗಳನ್ನು ಉಳಿಸಿಕೊಂಡು ಬಂದಿರುವುದು ಭಾರತೀಯ ಸಂಸ್ಕೃತಿಯ ಮಹತ್ತರ ವೈಶಿಷ್ಟ್ಯವಾಗಿದೆ ಎಂದು ಹೇಳಿದರು.

ಅವರು ಮಾತನಾಡುತ್ತ, ಜಗತ್ತಿನ ಅನೇಕ ರಾಷ್ಟ್ರಗಳಲ್ಲಿ ಒಂದೊಂದು ಧರ್ಮಕ್ಕೆ ಒಬ್ಬರೇ ಗುರುಗಳಿರುವ ಪರಂಪರೆ ಕಂಡುಬರುತ್ತದೆ. ಆದರೆ ಭಾರತದಲ್ಲಿ ಕಾಲಕಾಲಕ್ಕೆ ವಿವಿಧ ಧರ್ಮ, ಮತ, ಪಂಥ ಹಾಗೂ ಸಿದ್ಧಾಂತಗಳು ಉದಯಿಸಿ, ಅವುಗಳಿಗೆ ತಕ್ಕ ಧರ್ಮಗುರುಗಳು ಸಮಾಜಕ್ಕೆ ಸನ್ಮಾರ್ಗ ತೋರಿಸುವ ಕೆಲಸ ಮಾಡಿದ್ದಾರೆ. ಇದೇ ಕಾರಣದಿಂದ ಭಾರತೀಯ ಸಂಸ್ಕೃತಿ ಐದು ಸಾವಿರಕ್ಕೂ ಹೆಚ್ಚು ವರ್ಷಗಳ ಇತಿಹಾಸವನ್ನು ಹೊಂದಿದ್ದರೂ ತನ್ನ ಜೀವಂತಿಕೆಯನ್ನು ಇಂದಿಗೂ ಉಳಿಸಿಕೊಂಡಿದೆ ಎಂದು ಅಭಿಪ್ರಾಯಪಟ್ಟರು.

ಬೌದ್ಧ, ಜೈನ, ವೈಷ್ಣವ, ಶೈವ ಹಾಗೂ ವೀರಶೈವ–ಲಿಂಗಾಯತ ಪರಂಪರೆಗಳ ಮಠಗಳು ಮತ್ತು ಧರ್ಮಗುರುಗಳು ಜನರಲ್ಲಿ ಭಕ್ತಿ, ಶಿಸ್ತು, ಆಧ್ಯಾತ್ಮಿಕತೆ, ಮಾನವೀಯತೆ ಮತ್ತು ಜೀವನ ಮೌಲ್ಯಗಳನ್ನು ಬಿತ್ತುತ್ತ ಭಾರತೀಯ ಸಂಸ್ಕೃತಿಯನ್ನು ಸಂರಕ್ಷಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಅಂತಹ ಮಹಾನ್ ಗುರುಗಳ ಸ್ಮರಣಾರ್ಥ ದೇಶಾದ್ಯಂತ ಗುರುಪೂರ್ಣಿಮೆಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ ಎಂದು ಅವರು ಹೇಳಿದರು.

ಗಂಗಾವತಿಯ ಐತಿಹಾಸಿಕ ಕಲ್ಮಠಕ್ಕೆ ಸುಮಾರು 600 ವರ್ಷಗಳ ಭವ್ಯ ಪರಂಪರೆ ಇದ್ದು, ಅನೇಕ ಮಹಾನ್ ಶಿವಯೋಗಿಗಳು ಇಲ್ಲಿ ತಪಸ್ಸು ನಡೆಸಿ ಸಮಾಜಮುಖಿ ಕಾರ್ಯಗಳ ಮೂಲಕ ಜನಜೀವನಕ್ಕೆ ದಾರಿ ತೋರಿದ್ದಾರೆ. ವಿಶೇಷವಾಗಿ ಶಿಕ್ಷಣ, ಧಾರ್ಮಿಕ ಜಾಗೃತಿ, ಸಂಗೀತ ಹಾಗೂ ಸಂಸ್ಕೃತಿ ಕ್ಷೇತ್ರಗಳಲ್ಲಿ ಕಲ್ಮಠದ ಕೊಡುಗೆ ಅಪಾರವಾಗಿದೆ. ಪ್ರಸ್ತುತ ಪೀಠಾಧಿಪತಿಗಳಾದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಈ ಪರಂಪರೆಯನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ದು ಶಿಕ್ಷಣ ಸಂಸ್ಥೆಗಳನ್ನು ಆದರ್ಶ ಶಿಕ್ಷಣ ಕೇಂದ್ರಗಳಾಗಿ ಬೆಳೆಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಕೊಟ್ಟೂರೇಶ್ವರ ವಿದ್ಯಾವರ್ಧಕ ಸಂಘದ ವಿವಿಧ ಶಾಲೆ ಹಾಗೂ ಕಾಲೇಜುಗಳ ಪ್ರಾಚಾರ್ಯರು, ಮುಖ್ಯೋಪಾಧ್ಯಾಯರು, ಉಪನ್ಯಾಸಕರು, ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಗುರುಗಳಿಗೆ ಪುಷ್ಪಾರ್ಚನೆ ಸಲ್ಲಿಸಿ ಗುರುವಂದನೆ ನೆರವೇರಿಸಿದರು. ಇದೇ ವೇಳೆಯಲ್ಲಿ ಮಲ್ಲಮ್ಮ ನುಡಿ ದಿನಪತ್ರಿಕೆ ವರದಿಗಾರರಾದ ರಾಮಕೃಷ್ಣ ಸಿಡಿ ಅವರಿಗೆ ಹಾಗೂ ಸುದರ್ಶನ್ ವೈದ್ಯ ಹಿರಿಯ ಪತ್ರಕರ್ತರಿಗೆ ಕೊಟ್ಟೂರೇಶ್ವರ ಮಹಾಸ್ವಾಮಿಗಳು ಗೌರವ ಸನ್ಮಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು, ಸಮಾಜದಲ್ಲಿ ದ್ವೇಷ, ಅಸೂಯೆ ಹಾಗೂ ವೈಮನಸ್ಸಿನಿಂದ ಯಾವುದೇ ಶಾಶ್ವತ ಸಾಧನೆ ಸಾಧ್ಯವಿಲ್ಲ. ಪರಸ್ಪರ ಪ್ರೀತಿ, ವಿಶ್ವಾಸ, ಗೌರವ ಮತ್ತು ಸಹಬಾಳ್ವೆಯ ಮನೋಭಾವದಿಂದ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಪ್ರತಿಯೊಬ್ಬರೂ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಸೌಹಾರ್ದಯುತ ಬದುಕು ನಡೆಸಬೇಕು ಎಂದು ಕರೆ ನೀಡಿದರು.

# ಪತ್ರಿಕಾ ದಿನಾಚರಣೆ: ಪತ್ರಕರ್ತರಿಗೆ ಗೌರವ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ರಿ) ತಾಲೂಕು ಘಟಕ ಕಮಲನಗರದ ವತಿಯಿಂದ ಶುಕ್ರವಾರದಂದು ಪಟ್ಟಣದ ಡಾ. ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆಯ ಆವರಣದಲ್ಲಿ 'ಪತ್ರಿಕಾ ದಿನಾಚರಣೆ – 2026' ಕಾರ್ಯಕ್ರಮವನ್ನು ಅತ್ಯಂತ ವೈಭವ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

**ಮಾಧ್ಯಮ ಪ್ರಜಾಪ್ರಭುತ್ವದ ನಾಲ್ಕನೇ ಕಂಬ: ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು**

ಕಾರ್ಯಕ್ರಮದ ದಿವ್ಯ ನೇತೃತ್ವ ವಹಿಸಿ ಆಶೀರ್ವಚನ ನೀಡಿದ ಭಾಲ್ಕಿಯ ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು, "ಪತ್ರಕರ್ತರ ಶಕ್ತಿ ಅಪಾರವಾದದ್ದು. ಅವರು ಸಮಾಜದ ಪ್ರತಿಯೊಂದು ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆ ನೀಡುತ್ತಿದ್ದಾರೆ. ಸಮಾಜದಲ್ಲಿ ಆಗುವ ತಪ್ಪು–ತಡೆಗಳನ್ನು ತಿದ್ದುವ ಗುರುತರ ಜವಾಬ್ದಾರಿ ಪತ್ರಕರ್ತರ ಮೇಲಿದೆ. ನ್ಯಾಯಾಂಗ, ಕಾರ್ಯಾಂಗ ಹಾಗೂ ಶಾಸಕಾಂಗ ಎಂಬ ಮೂರು ಕಂಬಗಳನ್ನು ವ್ಯವಸ್ಥಿತವಾಗಿ ಮುನ್ನಡೆಸುವಲ್ಲಿ ನಾಲ್ಕನೇ ಕಂಬವಾದ ಮಾಧ್ಯಮದ ಪಾತ್ರ ಅತ್ಯಂತ ಪ್ರಮುಖವಾಗಿದೆ" ಎಂದು ಹೇಳಿದರು.

**ಪತ್ರಿಕಾರಂಗ ಸಾಹಸ ಮತ್ತು ಶ್ರಮದಾಯಕ ವೃತ್ತಿ: ಪ್ರತೀಕ್ ಚೌಹಾಣ್:** ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಯುವ ಮುಖಂಡರಾದ ಪ್ರತೀಕ್ ಚೌಹಾಣ, "ಪತ್ರಿಕಾರಂಗ ಎಂಬುದು ಅತ್ಯಂತ ಸಾಹಸಮಯ ಹಾಗೂ ಶ್ರಮದಾಯಕವಾದ ಕೆಲಸ. ಸಮಾಜದ ಕುಂದುಕೊರತೆಗಳನ್ನು ಬೆಳಕಿಗೆ ತಂದು, ಸಾರ್ವಜನಿಕರಿಗೆ ಧ್ವನಿಯಾಗುವ ಮೂಲಕ ಪತ್ರಕರ್ತರು ನೀಡುತ್ತಿರುವ ಕೊಡುಗೆ ಅತ್ಯಂತ ಶ್ಲಾಘನೀಯ" ಎಂದು ಬಣ್ಣಿಸಿದರು.

**ಪತ್ರಕರ್ತರ ಕ್ಷೇಮಾಭಿವೃದ್ಧಿಗೆ ಸಂಘ ಸದಾ ಬದ್ಧ: ಶಿವಕುಮಾರ ಸ್ವಾಮಿ:** ಇನ್ನೋರ್ವ ಮುಖ್ಯ ಅತಿಥಿ, ಸಂಘದ ಜಿಲ್ಲಾ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ, "ಸಂಘಟನೆಯ ಪ್ರತಿಯೊಬ್ಬ ಸದಸ್ಯರ ಹಿತರಕ್ಷಣೆ ನಮ್ಮ ಆದ್ಯತೆಯಾಗಿದೆ. ಪತ್ರಕರ್ತರ ಕ್ಷೇಮಾಭಿವೃದ್ಧಿ, ಅವರ ಆರೋಗ್ಯ ಮತ್ತು ಅವರ ಕುಟುಂಬದ ಭದ್ರತೆಗೆ ಸಂಬಂಧಿಸಿದಂತೆ ಸಂಘವು ಸದಾ ಬೆನ್ನಲುಬಾಗಿ ನಿಲ್ಲಲಿದೆ" ಎಂದು ಭರವಸೆ ನೀಡಿದರು ಹಾಗೂ ಸಮಾಜವನ್ನು ಜಾಗ್ರತಗೊಳ್ಳುವ ನಿಷ್ಪಕ್ಷಪಾತ ಸುದ್ದಿ ಮಾಡಿ ಎಂದು ಕರೆ ನೀಡಿದರು.

**ಪ್ರಮುಖರ ಉಪಸ್ಥಿತಿ:** ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಅಧ್ಯಕ್ಷರಾದ ಮನೋಜಕುಮಾರ ಹಿರೇಮಠ ವಹಿಸಿದ್ದರು. ಮುಖ್ಯ ಅತಿಥಿ ಯಾಗಿ ತಹಸೀಲ್ದಾರ ಅಮಿತ ಕುಮಾರ ಕುಲಕರ್ಣಿ, ಇಒ ಹಣಮಂತರಾಯ ಕೌಟಗೆ, ಯುವ ಉದ್ಯಮಿ ವಿಜಯಕುಮಾರ ಬಿರಾದಾರ, ಸಿ.ಪಿ.ಐ. ಶ್ರೀಕಾಂತ ಅಲ್ಲಾಪುರೆ, ವೈದ್ಯ ಅಧಿಕಾರಿ ಶ್ರೀಮಂತ ಮಡಿವಾಳ, ಕ್ಷೇತ್ರ ಶಿಕ್ಷಣಾಧಿಕಾರಿ, ಸುನಿಲ ಕಸ್ತೂರೆ, ಎಸ್. ಏನ್ ಶಿವಣಕರ, ಲಿಂಗಾನಂದ ಮಹಾಜಾನ, ಶ್ರೀರಂಗ ಪರಿಹಾರ, ಪ್ರವೀಣ ಕುಲಕರ್ಣಿ, ಶಾಲೆ ಆಡಳಿತ ಅಧಿಕಾರಿ ಚನ್ನಬಸವ ಘಾಳೆ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶಾಲೆ ಮಕ್ಕಳು ಸಂಸ್ಕೃತಿಕ ಕಾರ್ಯಕ್ರಮ ನೆರವೇರಿಸಿ ಕೊಟ್ಟರು, ಪ್ರಧಾನ ಕಾರ್ಯದರ್ಶಿ ಮಹಾದೇವ ಬಿರಾದಾರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಪ್ರಶಾಂತ ಮಠಪತಿ ವಂದನಾರ್ಪಣೆ ನೆರವೇರಿಸಿದರು.

**ತಾಲೂಕಿನ ಪತ್ರಕರ್ತರಿಗೆ ಭವ್ಯ ಸನ್ಮಾನ:** ಕಮಲನಗರನಲ್ಲಿ ಪತ್ರಿಕಾ ದಿನಾಚರಣೆ ನಿಮಿತ್ಯ ಸಮಾಜಮುಖಿ ಸೇವೆಯಲ್ಲಿ ನಿರತರಾಗಿರುವ ಕಮಲನಗರ ತಾಲೂಕಿನ ಎಲ್ಲಾ ಕಾರ್ಯನಿರತ ಪತ್ರಕರ್ತರನ್ನು ಸಂಘದ ವತಿಯಿಂದ ಅತ್ಯಂತ ಗೌರವಪೂರ್ವಕವಾಗಿ ಸನ್ಮಾನಿಸಿ ಗೌರವಿಸಲಾಯಿತು.

**ಸನ್ಮಾನಿತ ಪತ್ರಕರ್ತರು:** ಮನೋಜಕುಮಾರ ಹಿರೇಮಠ, ಮಹಾದೇವ ಬಿರಾದಾರ, ಡಾ. ಎಸ್. ಎಸ್. ಮೈನಾಳೆ, ಭಾವುರಾವ ಹೆಡೆ, ಚಂದ್ರಕಾಂತ ಗಳಗೆ, ಮಹಾದು ಬರ್ಗೆ, ಅನುರಾಧಾ ಸಿ. ಮಠಪತಿ, ರಾಜಶೇಖರ ಅಜ್ಜಾ, ಸಂಗಮೇಶ್ವರ ಮುರ್ಕೆ, ಸಂಜೀವಕುಮಾರ ಮುಳೆ, ಪರಮೇಶ ರಾಂಪುರೆ, ರವಿ ವಲ್ಲೇಪುರೆ, ಬಾಲಾಜಿ ಫಿರಂಗೆ, ನಿತೀನ ಶಿನಕರ, ಮೋಯಿನ್ ಅತನೂರೆ, ಪ್ರವೀಣ ಕೊಂಡಾಳೆ, ಸವಿತಾ ರಾಜಶೇಖರ ಅಜ್ಜಾ, ಲಕ್ಷ್ಮಣ ರಾಠೋಡ ಸೇರಿದಂತೆ ಇನ್ನಿತರ ಇದ್ದರು.

# ಶಿಸ್ತು ಮತ್ತು ಸೇವೆಯ ಪ್ರತೀಕ ಪ್ರೊ. ಚಂದ್ರಕಾಂತ ಎಂ ಶಾಹಾಬಾದಕರ್

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಶಿಕ್ಷಣ ಕ್ಷೇತ್ರದ ದಕ್ಷ ಸಾರಥಿ, ಆದರ್ಶ ಆಡಳಿತಗಾರ ಪ್ರೊ.ಚಂದ್ರಕಾಂತ ಎಂ. ಶಾಹಾಬಾದಕರ್ ಶಾಲಾ ಶಿಕ್ಷಣ ಇಲಾಖೆ(ಪದವಿಪೂರ್ವ) ಬೀದರ ಅವರ ಸಾರ್ಥಕ ಸೇವಾಯಾನಕ್ಕೆ ಗೌರವದ ವಿರಾಮ.

ಶಿಕ್ಷಣವೆಂಬುದು ರಾಷ್ಟ್ರ ನಿರ್ಮಾಣದ ಭದ್ರ ಬುನಾದಿ. ಆ ಬುನಾದಿಯನ್ನು ಮತ್ತಷ್ಟು ಸದೃಢಗೊಳಿಸುವಲ್ಲಿ ಶಿಕ್ಷಕರು, ಉಪನ್ಯಾಸಕರು ಮತ್ತು ಶಿಕ್ಷಣ ಆಡಳಿತಾಧಿಕಾರಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅಂತಹ ಕರ್ತವ್ಯನಿಷ್ಠ, ಶಿಸ್ತುಬದ್ಧ ಹಾಗೂ ಆಡಳಿತಗಾರರ ಸಾಲಿನಲ್ಲಿ ಪ್ರಮುಖ ಹೆಸರು ಶ್ರೀಯುತರದ್ದು.

ಸುದೀರ್ಘ ಸೇವಾ ಪಯಣದ ನಂತರ ಅವರು ನಿವೃತ್ತಿಯ ಅಂಚಿನಲ್ಲಿರುವುದು ಶಿಕ್ಷಣ ಇಲಾಖೆಗೆ ಒಂದು ಭಾವನಾತ್ಮಕ ಕ್ಷಣವಾಗಿದೆ. ಆದರೆ ಅವರ ಸೇವೆ, ಸಾಧನೆ ಮತ್ತು ಮೌಲ್ಯಾಧಾರಿತ ಆಡಳಿತ ಎಂದೆಂದಿಗೂ ಸ್ಮರಣೀಯವಾಗಿ ಉಳಿಯಲಿದೆ. ಅವರು ತಮ್ಮ ಸೇವಾವಧಿಯಲ್ಲಿ ಶಿಕ್ಷಣವನ್ನು ಕೇವಲ ಆಡಳಿತದ





ಚೌಕಟ್ಟಿಗೆ ಸೀಮಿತಗೊಳಿಸದೆ, ಗುಣಮಟ್ಟದ ಕಲಿಕೆ, ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿ ,ಪ್ರಗತಿಗೆ ಆದ್ಯತೆ ನೀಡಿದರು. ಉಪನ್ಯಾಸಕರು, ಪ್ರಾಚಾರ್ಯರು ಮತ್ತು ಸಿಬ್ಬಂದಿಯೊಂದಿಗೆ ಆತ್ಮೀಯ ಸಮನ್ವಯ ಸಾಧಿಸಿ ಸಮಸ್ಯೆಗಳಿಗೆ ತ್ವರಿತ ಪರಿಹಾರ ಒದಗಿಸುವ ಮೂಲಕ ಉತ್ತಮ ಆಡಳಿತದ ಮಾದರಿಯನ್ನು ನಿರ್ಮಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಹಲವಾರು ಮಹತ್ವದ ಕಾರ್ಯಕ್ರಮಗಳು, ಶೈಕ್ಷಣಿಕ ಸುಧಾರಣಾ ಕ್ರಮಗಳು ಹಾಗೂ ವಿದ್ಯಾರ್ಥಿ ಕಲ್ಯಾಣ ಯೋಜನೆಗಳ ಅನುಷ್ಠಾನದಲ್ಲಿ ಅವರ ಪಾತ್ರ ಗಮನಾರ್ಹವಾಗಿದೆ. ಪರೀಕ್ಷಾ ವ್ಯವಸ್ಥೆಯ ಸುಗಮ ನಿರ್ವಹಣೆ, ಶೈಕ್ಷಣಿಕ ಗುಣಮಟ್ಟದ ವೃದ್ಧಿ, ಫಲಿತಾಂಶ ಸುಧಾರಣೆ ಮತ್ತು ಶಿಕ್ಷಣ ಸಂಸ್ಥೆಗಳ ಶಿಸ್ತುಬದ್ಧ ಕಾರ್ಯನಿರ್ವಹಣೆಗೆ ಅವರು ನಿರಂತರ ಶ್ರಮಿಸಿದರು.

ಅವರ ಸರಳ ವ್ಯಕ್ತಿತ್ವ, ಪ್ರಾಮಾಣಿಕತೆ, ಸಮಯಪ್ರಜ್ಞೆ, ಕರ್ತವ್ಯನಿಷ್ಠೆ ಹಾಗೂ ಮಾನವೀಯ ಮೌಲ್ಯಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿವೆ. ಅಧಿಕಾರದ ಸ್ಥಾನದಲ್ಲಿದ್ದರೂ ವಿನಯವನ್ನು ಉಳಿಸಿಕೊಂಡು ಪ್ರತಿಯೊಬ್ಬರೊಂದಿಗೆ ಸೌಹಾರ್ದದಿಂದ ವರ್ತಿಸಿದ ಅವರು, ಸಹೋದ್ಯೋಗಿಗಳ ವಿಶ್ವಾಸಗಳಿಸಿದ ಅಪರೂಪದ ಉಪನಿರ್ದೇಶಕರಾಗಿದ್ದಾರೆ.

ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯ ಉಜ್ವಲವಾಗಬೇಕು ಎಂಬ ಕಾಳಜಿಯಿಂದ ಅವರು ಅನೇಕ ನವೀನ ಶೈಕ್ಷಣಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿದರು. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೇರೇಪಿಸುವುದು, ಉಪನ್ಯಾಸಕರಿಗೆ ಮಾರ್ಗದರ್ಶನ ನೀಡುವುದು ಹಾಗೂ ಶೈಕ್ಷಣಿಕ ವಾತಾವರಣವನ್ನು ಇನ್ನಷ್ಟು ಉತ್ತಮಗೊಳಿಸುವಲ್ಲಿ ಅವರ ಸೇವೆ ಶ್ಲಾಘನೀಯವಾಗಿದೆ.

ಅವರ ನಿವೃತ್ತಿಯಿಂದ ಆಡಳಿತಾತ್ಮಕವಾಗಿ ಒಂದು ಸ್ಥಾನ ಖಾಲಿಯಾಗಬಹುದು; ಆದರೆ ಅವರು ರೂಪಿಸಿದ ಕಾರ್ಯ ಸಂಸ್ಕೃತಿ, ಶಿಸ್ತು, ಪ್ರಾಮಾಣಿಕತೆ ಮತ್ತು ಸೇವಾ ಮನೋಭಾವ ಮುಂದಿನ ಅಧಿಕಾರಿಗಳಿಗೆ ಆದರ್ಶವಾಗಿಯೇ ಉಳಿಯಲಿದೆ. ನಿವೃತ್ತಿಯ ನಂತರವೂ ಅವರ ಅನುಭವ, ಮಾರ್ಗದರ್ಶನ ಮತ್ತು ಶಿಕ್ಷಣದ ಮೇಲಿನ ಬದ್ಧತೆ ಸಮಾಜಕ್ಕೆ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ಹೊಸ ದಾರಿದೀಪವಾಗಲಿ. ಶ್ರೀಯತರ ವಿಶ್ರಾಂತ ಜೀವನವು ಉತ್ತಮ ಆರೋಗ್ಯ, ನೆಮ್ಮದಿ, ಸಂತೋಷ ಮತ್ತು ದೀರ್ಘಾಯುಷ್ಯ ಸಮೃದ್ಧಿಯಿಂದ ಕೂಡಿರಲಿ ಎಂದು ಶುಭ ಕೋರುತ್ತೇವೆ.

**ಕರ್ತವ್ಯಕ್ಕೆ ಗೌರವ, ಸೇವೆಗೆ ಸನ್ಮಾನ, ವ್ಯಕ್ತಿತ್ವಕ್ಕೆ ಅಭಿಮಾನ ಇವೇ ಚಂದ್ರಕಾಂತ ಎಂ. ಶಾಹಾಬಾದಕರ್ ಅವರ ಸಾರ್ಥಕ ಸೇವಾಯಾನದ ನಿಜವಾದ ಹೆಗ್ಗುರುತು. ಹಲ್ಲಾಗು ಬೆಟ್ಟದಡಿ ಮಲ್ಲಿಗೆಯಾಗು ಕಲ್ಲಾಗು ಕಷ್ಟಗಳ ವಿಧಿಯ ಮಳೆ ಸುರಿಯೇ ಬೆಲ್ಲ ಸಕ್ಕರೆಯಾಗು ದೀನ ದುರ್ಬಲರಿಂಗೆ ಎಲ್ಲರೊಳಗೊಂದಾಗು ಮಂಕುತಿಮ್ಮ! ಡಿವಿಜಿಯವರು ತಿಳಿಸಿದಂತೆ ಶ್ರೀಯುತರ ಬದುಕು ಆದರ್ಶ ಪ್ರಾಯವಾಗಿದೆ.**

**–ಬಿ.ಎಸ್. ಕರಣಂ ಭಾಲ್ಕಿ**

# ಶಾಂತಿ ಸುವ್ಯವಸ್ಥೆ ಕಾಪಾಡಲು ಸಾರ್ವಜನಿಕರ ಸಹಕಾರ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ವಿಸ್ತಾರವಾದ ಕೆಂಭಾವಿ ಪೊಲೀಸ್ ಠಾಣಾ ವ್ಯಾಪ್ತಿಯನ್ನು ಶಹಾಪುರ ಪೊಲೀಸ್ ವೃತ್ತಕ್ಕೆ ಸೇರ್ಪಡೆಗೊಳಿಸಲಾಗಿದೆ. ಸಾರ್ವಜನಿಕರಿಗೆ ಶೀಘ್ರ ಸೇವೆ ಒದಗಿಸಲು ಹಾಗೂ ಕಾನೂನು ಮತ್ತು ಸುವ್ಯವಸ್ಥೆಯನ್ನು ಮತ್ತಷ್ಟು ಸಮರ್ಥವಾಗಿ ನಿರ್ವಹಿಸಲು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕೆಂದು ಶಹಾಪುರ ವೃತ್ತ ನಿರೀಕ್ಷಕರಾದ ದೀಪಕ್ ಭೋಸರಡ್ಡಿ ಕೋರಿದರು.

ಶುಕ್ರವಾರ ಕೆಂಭಾವಿ ಪೊಲೀಸ್ ಠಾಣೆಗೆ ಭೇಟಿ ನೀಡಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ವೃತ್ತ ಪುನರ್ವಿಂಗಡಣೆಯ ಕುರಿತು ವಿವರಣೆ ನೀಡಿದರು.



2026–27ನೇ ಸಾಲಿನ ಆಯವ್ಯಯದಂತೆ ಕಕ್ಕೇರಾವನ್ನು ನೂತನ ಪೊಲೀಸ್ ಠಾಣೆಯನ್ನಾಗಿ ಘೋಷಿಸಲಾಗಿದೆ. ಇದರಿಂದಾಗಿ ಹುಣಸಗಿ ವೃತ್ತ ವ್ಯಾಪ್ತಿಯಲ್ಲಿ ಠಾಣೆಗಳ ಸಂಖ್ಯೆ ಹೆಚ್ಚಾಗಿದ್ದರಿಂದ, ಉತ್ತಮ ಕಾನೂನು ನಿರ್ವಹಣೆಗಾಗಿ ಸರ್ಕಾರ ಕೆಂಭಾವಿ ಠಾಣೆಯನ್ನು ಶಹಾಪುರ ವೃತ್ತಕ್ಕೆ ವರ್ಗಾಯಿಸಿ ಆದೇಶಿಸಿದೆ. ಶಹಾಪುರ ವೃತ್ತದಲ್ಲಿ ಈ ಹಿಂದೆ ಭೀಮರಾಯನಗುಡಿ ಮತ್ತು ಗೋಗಿ ಠಾಣೆಗಳು ಮಾತ್ರ ಇದ್ದವು. ಭೌಗೋಳಿಕವಾಗಿ ಕೆಂಭಾವಿಯು ಗೋಗಿ ಠಾಣೆಯ ಗಡಿಗೆ ಹೊಂದಿಕೊಂಡಿದೆ. ವಿಶೇಷವಾಗಿ ಕೆಂಭಾವಿ ಪೊಲೀಸ್ ಠಾಣಾ ವ್ಯಾಪ್ತಿಯ ಬಹುಪಾಲು ಹಳ್ಳಿಗಳು ಶಹಾಪುರ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುತ್ತವೆ ಎಂದ ಅವರು ಸಾರ್ವಜನಿಕರು ಯಾವುದೇ ಸಮಸ್ಯೆಗಳಿದ್ದರೂ ನೇರವಾಗಿ ಠಾಣೆಯನ್ನು ಸಂಪರ್ಕಿಸಬಹುದು. ಶಹಾಪುರ ವೃತ್ತ ಪೊಲೀಸ್ ಸಿಬ್ಬಂದಿ ಸದಾ ನಿಮ್ಮ ಸೇವೆಯಲ್ಲಿದ್ದು, ಪ್ರದೇಶದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲು ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಿಎಸ್ಐ ಅಮೋಜ್ ಕಾಂಬಳೆ, ಕ್ರೈಮ್ ಪಿಎಸ್ಐ ಹಣಮಂತ ಸಿದ್ದಾಪೂರ ಹಾಗೂ ಸಿಬ್ಬಂದಿ ಇದ್ದರು.

# ನೇಮಕಾತಿ ಲಿಖಿತ ಪರೀಕ್ಷೆ: ಅಗತ್ಯ ಸಿಧ್ಧತೆ ಕೈಗೊಳ್ಳಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಿವಿಲ್ ಪೊಲೀಸ್ ಕಾನಸ್ಟೇಬಲ್ ಹುದ್ದೆಗಳಿಗೆ ಬೀದರ ನಗರದಲ್ಲಿ ಆಗಸ್ಟ್ 2ರಂದು ಭಾನುವಾರ ಜರುಉವ ಲಿಖಿತ ಪರೀಕ್ಷೆಗಾಗಿ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡದಂತೆ ಯಶಸ್ವಿಯಾಗಿ ನಡೆಸಲು ಸಂಬಠಧಿಸಿದ ಅಧಿಕಾರಿಗಳು ಅಗತ್ಯ ಪೂರ್ವ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಕುರಿತು ಜುಲೈ 30 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಖಿತ ಪರೀಕ್ಷೆಯು ನಗರದ 17 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಆಗಸ್ಟ 2ರ ಬೆಳಿಗ್ಗೆ 10 ಗಂಟೆಗೆ ಕಲ್ಯಾಣ ಕರ್ನಾಟಕ ಮಿಕ್ಕುಳಿದ ಅಭ್ಯರ್ಥಿಗಳಿಗೆ ಪರೀಕ್ಷೆ ಸಮಯ ನಿಗಧಿಯಾಗಿದ್ದು, ಒಟ್ಟು 4,745 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಸಂಜೆ 4 ಗಂಟೆಯಿಠದ ಕಲ್ಯಾಣ ಕರ್ನಾಟಕದ ಅಭ್ಯರ್ಥಿಗಳಿಗೆ ಸಮಯ ನಿಗಧಿಯಾಗಿದ್ದು, ಒಟ್ಟು 5,882 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಿರುವ ಸಿಬ್ಬಂದಿಗಳು ಹಾಗೂ ಅಧಿಕಾರಿಗಳು ಕಡ್ಡಾಯವಾಗಿ ತಮಗೆ ಸೂಚಿಸಿದ ಸಮಯಕ್ಕೆ ಹಾಜರಾಗಿ ಕಟ್ಟುನಿಟ್ಟಾಗಿ ಸೇವೆ ಸಲ್ಲಿಸಬೇಕು. ಕೇಂದ್ರಗಳಲ್ಲಿ ಕುಡಿಯುವ ನೀರು, ಸ್ವಚ್ಛತೆ, ಬೆಳಕು, ಫ್ಯಾನ್ ವ್ಯವಸ್ಥೆ ನೋಡಿಕೊಳ್ಳುವುದು ಆಯಾ ಕೇಂದ್ರ ಮುಖ್ಯ ಅಧೀಕ್ಷಕರ ಜವಾಬ್ದಾರಿಯೆಂದು ತಿಳಿಸಿದರು.

ಪ್ರತಿ ಕೇಂದ್ರಕ್ಕೆ ವಿಕ್ಷಕರನ್ನು ಕಸ್ಟೋಡಿಯನ್ ಹಾಗೂ ಡ್ರೆಸ್ ಕೋಡ್ ಅಧಿಕಾರಿಗಳನ್ನು



ನಿಯೋಜಿಸಲಾಗಿದೆ. ಪ್ರಶ್ನೆ ಪತ್ರಿಕೆ ಹಾಗು ಓ.ಎಂ. ಆರ್ ಪತ್ರಿಕೆ ತಲುಪಿಸಲು 6 ರೂಟ್ ಅಧಿಕಾರಿಗಳನ್ನು ನೇಮಿಸಲಾಗಿದೆ. ತಹಶೀಲ್ದಾರರ ಜವಬ್ದಾರಿಯಿಂದ ಮೇಲ್ವಿಚಾರಣೆ ಮಾಡಬೇಕೆಂದರು.

ಎಲ್ಲ 17 ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಸಿಸಿ ಟಿವಿ ಅಳವಡಿಕೆಯಾಗಿರಬೇಕು. ಪೊಲೀಸ್ ಅಧಿಕಾರಿಗಳು ಹಾಗೂ ಆಯಾ ಕಾಲೇಜು ಪ್ರಾಂಶುಪಾಲರು ಅಗತ್ಯ ಸಿದ್ಧತೆ ನಡೆಸಿಕೊಳ್ಳಬೇಕೆಂದರು. ಅಭ್ಯರ್ಥಿಗಳ ವಿವರಗಳನ್ನು ಸ್ಕ್ಯಾನ್ ಮಾಡಲು ಡಿಪ್ಲೋಮಾ ಕಾಲೇಜಿನ ಉಪನ್ಯಾಸಕರನ್ನು ನೋಡಲ್ ಅಧಿಕಾರಿಗಳಾಗಿ ನೇಮಿಸಲಾಗಿದೆ. 17 ಕೇಂದ್ರಗಳ ಸುತ್ತಲೂ 200 ಮೀಟರ ವ್ಯಾಪ್ತಿ ಪ್ರದೇಶದಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ.

**ಡ್ರೆಸ್ ಕೋಡ್ ವಿವರ ಇಂತಿದೆ:** ಪರೀಕ್ಷಾರ್ಥಿಗಳು ಉದ್ದ ತೋಳುಗಳ ಡ್ರೆಸ್‌ಗಳನ್ನು ಧರಿಸಿ ಪರೀಕ್ಷೆಗೆ ಹಾಜರಾಗುವಂತಿಲ್ಲ, ಕಿವಿ, ತಲೆ ಮತ್ತು ಮುಖ ಮುಚ್ಚುವಂತಹ ಯಾವುದೇ ಉಡುಪುಗಳನ್ನು ಧರಿಸಿಕೊಂಡು ಬರಬಾರದು. ಯಾವುದೇ ಆಭರಣ ಅಥವಾ ಲೋಹದ ವಸ್ತುಗಳನ್ನು (ಅಂದರೆ ಮೂಗುತಿ ಮತ್ತು ಮಂಗಳಸೂತ್ರವನ್ನು ಹೊರತುಪಡಿಸಿ) ಧರಿಸಬಾರದು. ಚಪ್ಪಲಿಗಳು ಕಡಿಮೆ ಹಿಮ್ಮಡಿ ಇರುವ ಸ್ಯಾಂಡಲ್ಗಳನ್ನು ಧರಿಸುವುದು ಉತ್ತಮ, ಮುಖ್ಯವಾಗಿ ಶೂಗಳನ್ನು ಹಾಕಿಕೊಂಡು ಬರುವಂತಿಲ್ಲ.

**ಶ್ರವಣ ಸಾಧನ ಅಥವಾ ಕಿವಿ ಆಂತರಿಕ ಉಪಕರಣ ಬಳಸುವ ವಿಶೇಷ ಚೇತನ ಅಭ್ಯರ್ಥಿಗಳಿಗೆ ಮಾರ್ಗಸೂಚಿಗಳು ಇಂತಿವೆ:** ಶ್ರವಣ ಸಾಧನ ಅಥವಾ ಕಿವಿ ಆಂತರಿಕ ಉಪಕರಣ ಬಳಸಿಕೊಂಡು ಪರೀಕ್ಷೆಗೆ ಹಾಜರಾಗುವ ವಿಶೇಷ ಚೇತನ ಅಭ್ಯರ್ಥಿಗಳು ಪರೀಕ್ಷೆ ಆರಂಭಕ್ಕೆ 2 ಗಂಟೆ ಮೊದಲು ಪರೀಕ್ಷಾ ಕೇಂದ್ರಕ್ಕೆ ಹಾಜರಾಗಿ ಯುಡಿಐಡಿ ಕಾರ್ಡ್, ವೈದ್ಯಕೀಯ ಪ್ರಮಾಣ ಪತ್ರಗಳೊಂದಿಗೆ ವರದಿ ಮಾಡಿಕೊಳ್ಳಬೇಕು. ಅವರನ್ನು ಪ್ರತ್ಯೇಕವಾಗಿ ಪರಿಶೀಲನೆಗೆ ಒಳಪಡಿಸಿ ಶ್ರಾವಣ ಸಾಧನಗಳೊಂದಿಗೆ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದು.

ಯಾವುದಾದರೂ ಧಾರ್ಮಿಕ ಉಡುಪುಗಳನ್ನು ಧರಿಸಿಕೊಂಡು ಪರೀಕ್ಷೆ ಬರೆಯಲು ಇಚ್ಛಿಸುವವರು ಪರೀಕ್ಷೆ ಆರಂಭಕ್ಕೆ 2 ಗಂಟೆ ಮೊದಲು ಪರೀಕ್ಷಾ ಕೇಂದ್ರಕ್ಕೆ ವರದಿ ಮಾಡಿಕೊಳ್ಳಬೇಕು. ಅವರನ್ನು ಪ್ರತ್ಯೇಕವಾಗಿ ಪರಿಶೀಲನೆಗೆ ಒಳಪಡಿಸಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗುವುದು. ಜನಿವಾರ, ಶಿವದಾರ ಧರಿಸಿ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ ಎಂದವರು ಹೇಳಿದರು.

**ಪರೀಕ್ಷಾ ಕೇಂದ್ರಕ್ಕೆ ನಿಷೇಧಿತ ವಸ್ತುಗಳ ಕುರಿತು ಅಭ್ಯರ್ಥಿಗಳಿಗೆ ಮಹತ್ವದ ಸೂಚನೆ:** ಯಾವುದೇ ಸಂದರ್ಭದಲ್ಲಿ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದೊಳಗೆ ಈ ಕೆಳಗಿನ ನಿಷೇಧಿತ ವಸ್ತುಗಳನ್ನು ಕೊಂಡೊಯ್ಯಲು ಅವಕಾಶ ಇರುವುದಿಲ್ಲ.

**ನಿಷೇಧಿತ ವಸ್ತುಗಳು:** ಪಠ್ಯ ಸಾಮಗ್ರಿಗಳು: ಪುಸ್ತಕಗಳು, ಬರೆದಿಟ್ಟಿರುವ ಅಥವಾ ಮುದ್ರಿತ ಚೀಟಿಗಳು, ಜ್ಯಾಮಿಟ್ರಿ ಬಾಕ್ಸ್, ಪೆನ್ಸಿಲ್ ಬಾಕ್ಸ್, ಪ್ಲಾಸ್ಟಿಕ್ ಪೌಚ್, ಕ್ಯಾಲ್ಕುಲೇಟರ್, ಸ್ಕೇಲ್, ಬರೆಯುವ ಪೇಪರ್, ಪೆನ್ ಡ್ರೈವ್, ಇರೇಸರ್, ಲಾಗ್ ಟೇಬಲ್, ಎಲೆಕ್ಟ್ರಾನಿಕ್ ಪೆನ್, ಸ್ಕ್ಯಾನರ್ ಸೇರಿದಂತೆ ಯಾವುದೇ ಅಧ್ಯಯನ ಅಥವಾ ಬರವಣಿಗೆ ಸಾಮಗ್ರಿಗಳು.

**ವೈಯಕ್ತಿಕ ವಸ್ತುಗಳು:** ವಾಲೆಟ್, ಗಾಗಲ್ಸ್, ಕೈಚೀಲ, ಬೆಲ್ಟ್, ಕ್ಯಾಪ್ ಸೇರಿದಂತೆ ಇತರೆ ವೈಯಕ್ತಿಕ ವಸ್ತುಗಳು.

**ಗುಪ್ತ ಸಂವಹನ ಸಾಧನಗಳು:** ಮೈಕ್ರೋಚಿಪ್, ಕ್ಯಾಮೆರಾ, ಬ್ಲೂಟೂತ್ ಸಾಧನಗಳು ಹಾಗೂ ಅನ್ಯಾಯದ ವಿಧಾನಗಳಿಗೆ ಬಳಸಬಹುದಾದ ಯಾವುದೇ ಗುಪ್ತ ಎಲೆಕ್ಟ್ರಾನಿಕ್ ಸಾಧನಗಳು.

**ಆಧುನಿಕ ಸಂವಹನ ಸಾಧನಗಳು:** ಮೊಬೈಲ್ ಫೋನ್, ಮೈಕ್ರೋಫೋನ್, ಪೇಜರ್ ಸೇರಿದಂತೆ ಯಾವುದೇ ಆಧುನಿಕ ಸಂವಹನ ಸಾಧನಗಳು.

**ಮಣಿಕಟ್ಟು ವಸ್ತುಗಳು:** ಯಾವುದೇ ರೀತಿಯ ಗಡಿಯಾರ, ಕೈಗಡಿಯಾರ, ಸ್ಮಾರ್ಟ್ ವಾಚ್, ಬಳೆ, ಕ್ಯಾಮೆರಾ ಸೇರಿದಂತೆ ಮಣಿಕಟ್ಟಿಗೆ ಧರಿಸುವ ಅಥವಾ ಎಲೆಕ್ಟ್ರಾನಿಕ್ ಸಾಧನಗಳು.

**ಆಹಾರ ಮತ್ತು ಪಾನೀಯ:** ತೆರೆದಿರುವ ಅಥವಾ ಪ್ಯಾಕ್ ಮಾಡಲಾದ ಯಾವುದೇ ಆಹಾರ ಪದಾರ್ಥಗಳು ಹಾಗೂ ನೀರಿನ ಬಾಟಲಿಯನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯಲು ಅನುಮತಿ ಇರುವುದಿಲ್ಲ. ಅಭ್ಯರ್ಥಿಗಳು ಪರೀಕ್ಷಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ನಿಷೇಧಿತ ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ತರದಂತೆ ಅವರು ಸೂಚಿಸಿದರು.

# ಕನಕದಾಸರ ತತ್ವಗಳು ಯುವಜನತೆಗೆ ಆದರ್ಶ: ರಾಜಶೇಖರ ಕಡಗನ



ಆಳಂದ: ಕನಕದಾಸರು ತಮ್ಮ ಜೀವನ ಮತ್ತು ಸಾಹಿತ್ಯದ ಮೂಲಕ ಸಮಾನತೆ, ಮಾನವೀಯತೆ ಹಾಗೂ ಭಕ್ತಿಯ ಸಂದೇಶವನ್ನು ಸಾರಿದ ಮಹಾನ್ ಸಂತ-ಕವಿ. ಅವರ ತತ್ವಗಳು ಇಂದಿನ ಯುವಜನತೆಗೆ ಆದರ್ಶವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಉಪನ್ಯಾಸಕ ರಾಜಶೇಖರ ಕಡಗನ ಹೇಳಿದರು.ಶುಕ್ರವಾರ ಆಳಂದ ಪಟ್ಟಣದ ಮಾತೋಶ್ರೀ ಪ್ರೇಮಿಳಾಬಾಯಿ ಮಾಧವರಾವ ಗುತೆ-ದಾರ ಕನ್ಯಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನಲ್ಲಿ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಮತ್ತು ಕಲಾನಿಕೇತನ ಟ್ರಸ್ಟ್ ಸಗರ ಸಹಯೋಗದಲ್ಲಿ ಆಯೋಜಿಸಿದ್ದ 'ಕನಕ ದರ್ಶನ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನಕದಾಸರು ಜಾತಿ, ಮತ, ಪಂಥಗಳ ಭೇದವನ್ನು ಮೀರಿ ಮಾನವೀಯ ಮೌಲ್ಯಗಳನ್ನು ಸಾರಿದ ಅಪರೂಪದ ದಾರ್ಶನಿಕರು. ಅವರ ಕೀರ್ತನೆಗಳು ಮತ್ತು ಕೃತಿಗಳು ಕೇವಲ ಭಕ್ತಿ ಸಾಹಿತ್ಯವಲ್ಲ, ಸಮಾಜದಲ್ಲಿ ಸಮಾನತೆ ಮತ್ತು ಸೌಹಾರ್ದತೆಯನ್ನು ಬೆಳೆಸುವ ಜೀವನದರ್ಶನವಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಪರೀಕ್ಷೆಗಳಲ್ಲಿ ಉತ್ತಮ ಅಂಕಗಳಿಸುವುದರ ಜೊತೆಗೆ ನೈತಿಕ ಮೌಲ್ಯಗಳನ್ನು ಅಳವಡಿಸಿಕೊಂಡು ಉತ್ತಮ ನಾಗರಿಕರಾಗಬೇಕು. ಕನಕದಾಸರ ಸಾಹಿತ್ಯವನ್ನು ಓದುವ ಮೂಲಕ ವ್ಯಕ್ತಿತ್ವ ವಿಕಸನಕ್ಕೆ ಅಗತ್ಯವಾದ ಮೌಲ್ಯಗಳನ್ನು ರೂಢಿಸಿಕೊಳ್ಳಬಹುದು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರು ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಾಹಿತ್ಯ, ಸಂಸ್ಕೃತಿ ಹಾಗೂ ಮೌಲ್ಯಾಧಾರಿತ ಶಿಕ್ಷಣವನ್ನು ಬೆಳೆಸುವ ಉದ್ದೇಶದಿಂದ ಇಂತಹ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ನಿವೃತ್ತ ಉಪನ್ಯಾಸಕ ಬಾಬುರಾವ ಸರಡಗಿ ಉದ್ಘಾಟಿಸಿದರು. ಕಲಾನಿಕೇತನ ಟ್ರಸ್ಟ್ ಸಗರ ಅಧ್ಯಕ್ಷ ಬಸವರಾಜ ಶಿಣ್ಣೂರ, ವಿಶ್ವನಾಥ ಘೋಡಕೆ, ಲಕ್ಷ್ಮಣ ದೇವಂತಗಿ ಮುಖ್ಯ ಅತಿಥಿಗಳಾಗಿದ್ದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಅ.1 ರಿಂದ ಆಳಮೀನುಗಾರಿಕೆಗೆ ಅನುಮತಿ ಶಿಕಾರಿಗೆ ಸಜ್ಜುಗೊಂಡ ಬೋಟ್‌ಗಳು



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಸಮುದ್ರದ ಆಳಮೀನುಗಾರಿಕೆಗೆ ಅಗಸ್ಟ1 ರಿಂದ ಅನುಮತಿಯಿರುವುದರಿಂದ ಈಗ ಬೋಟ್‌ಗಳು ಬಲೆಗಳೊಂದಿಗೆ ಮೀನು ಶಿಕಾರಿಗೆ ಸಜ್ಜಾಗಿ ನಿಂತಿವೆ. ಜೂನ್, ಜುಲೈ ಈ ಎರಡು ತಿಂಗಳು ಮಳೆಗಾಲದ ನಿಮಿತ್ತ ಮತ್ತು ಮೀನಿನ ಮರಿ ಬೆಳವಣಿಗೆಯ ಕಾರಣಕ್ಕಾಗಿ ನಿಷೇಧಿಸಲಾಗುತ್ತದೆ. ಹೀಗಾಗಿ ಅಗಸ್ಟ್ 1 ರಿಂದ ಅವಕಾಶ ಇರುವುದರಿಂದಾಗಿ ಬೋಟ್‌ನವರು ಶಿಕಾರಿಗೆ ಸಜ್ಜುಗೊಂಡಿದ್ದಾರೆ.

ಮಂಜಗುಣಿ,ಬೆಳಂಬಾರ,ಬೇಲೆಕೇರಿ ಬಂದರುಗಳಲ್ಲಿ ಆಳ ಮೀನುಗಾರಿಕೆ ನಡೆಸಿದ ಬೋಟ್‌ಗಳು ಈ ಬಂದರಿಗೆ ಆಗಮಿಸುತ್ತವೆ. ಹಾಗೇ ನೋಡಿದರೆ ಬೇಲೆಕೇರಿ ದೊಡ್ಡ ಬಂದರು. ಇನ್ನು ಮಂಜಗುಣಿ, ಬೆಳಂಬಾರ ಸಣ್ಣ ಬಂದರಾಗಿದ್ದರೂ ಕೂಡ ಸ್ಥಳೀಯ ಬೋಟ್‌ನವರು ಇಲ್ಲಿಗೆ ಬಂದು ಮೀನು ಖಾಲಿ ಮಾಡುತ್ತಾರೆ. ಈ ಸಮಯದಲ್ಲಿ ಉತ್ತಮ ಗುಣಮಟ್ಟದ ತಾಜಾ ಮೀನುಗಳು ಸಿಗುತ್ತವೆ. ಸಿಗಡಿ, ಬಂಗಡೆ, ಪಾಪ್ಲೇಟ್ ಸೇರಿದಂತೆ ವಿವಿಧ ಮೀನುಗಳು ಸಿಗುತ್ತವೆ. ಮತ್ಸ್ಯಪ್ರಿಯರಿಗೆ ಈಗ ವಿಶಿಷ್ಟ ರುಚಿಕಟ್ಟಾದ ಮೀನನ್ನು ತಿನ್ನಲು ಕಾತುರರಾಗಿದ್ದಾರೆ. ಹಾಗೇ ಬೋಟ್ ಮಾಲೀಕರು ಮತ್ತು ಕಾರ್ಮಿಕರು ಕೂಡ ಮತ್ಸ್ಯ ಭೇಟಿಯಆತುರದಲ್ಲಿದ್ದಾರೆ.

ಜಿಲ್ಲೆಯಲ್ಲಿ ಸುಮಾರು 16538 ಪೂರ್ಣಾವಧಿ ಮತ್ತು 20386 ಅರೆಕಾಲಿಕ ಕುಟುಂಬಗಳು ನೇರವಾಗಿ ಮೀನುಗಾರಿಕೆಯನ್ನು ಅವಲಂಬಿಸಿದೆ. ಜಿಲ್ಲೆಯ 135ಕ್ಕೂ ಹೆಚ್ಚು ಕರಾವಳಿ ಗ್ರಾಮಗಳು ಜೀವನೋಪಾಯ ಮೀನುಗಾರಿಕೆಯೇ ಆಗಿದೆ. ಆದರೆ ಈ ವರ್ಷ ಹೆಚ್ಚಿನ ಮಳೆ ಬಾರದಿರುವುದರಿಂದ ಮೀನು ಹೇರಳವಾಗಿ ಸಿಗುವ ಸಾಧ್ಯತೆಯ ಬಗ್ಗೆಯೂ ಆತಂಕವಿದೆ. ಹೆಚ್ಚು ಮಳೆಯಾಗಿ ನದಿ ತುಂಬಿ ಸಮುದ್ರಕ್ಕೆ ಸೇರಿದಾಗ ಅಲ್ಲಿಯೂ ಕೂಡ ಸಿಹಿ ನೀರು ಹಾಗೂ ಉಪ್ಪು ನೀರು ಮಿಶ್ರಣಗೊಂಡು ಕಡಲು ಆತಂಕಕಾ-ರಿಯಾಗಿರುತ್ತದೆ. ಇಂತಹ ಸಮಯದಲ್ಲಿಯೇ ಹೆಚ್ಚಿನ ಪ್ರಮಾಣದಲ್ಲಿ ಮೀನು ಲಭಿಸುತ್ತದೆ. ಮಳೆ ಕೊರತೆಯಾದರೆ ಮೀನಿನ ಕೊರತೆಯು ಆಗುತ್ತದೆ ಎಂದು ಹೇಳಲಾಗುತ್ತದೆ. ಆದರೆ ಮೀನು ಶಿಕಾರಿಗೆ ಸಜ್ಜುಗೊಂಡಿದ್ದು, ಆರಂಭದಲ್ಲಿಯೇ ಮೀನುಗಾರರ ಮುಖದಲ್ಲಿ ನಗು ತರಿಸಲಿದೆಯೇ ಎಂದು ಕಾದು ನೋಡಬೇಕಿದೆ.

> ಕಡಲಾಮೆಯನ್ನು ಸಂರಕ್ಷಿಸಬೇಕಾದ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಈ ನಿಟ್ಟಿನಲ್ಲಿ ಟ್ರಾಲರ್ ಬೋಟ್‌ಗಳಲ್ಲಿ ಬಳಸುವ ಬಲೆಗಳಲ್ಲಿ ಅಳವಿನಂಚಿನಲ್ಲಿರುವ ಆಮೆ ಸಂತತಿಯನ್ನು ರಕ್ಷಿಸುವ ನಿಟ್ಟಿನಲ್ಲಿ ನೂತನ ತಂತ್ರಜ್ಞಾನ ಸಲಕರಣೆಯನ್ನು ಕಡ್ಡಾಯವಾಗಿ ಅಳವಡಿಸಬೇಕೆಂಬ ಕೇಂದ್ರ ಸರಕಾರದ ಆದೇಶವನ್ನು ಎಲ್ಲ ಮೀನುಗಾರರು ಕಡ್ಡಾಯವಾಗಿ ಪಾಲಿಸಬೇಕು.
> – ಪ್ರತೀಕ್ ಶೆಟ್ಟಿ
> ಉಪನಿರ್ದೇಶಕರು, ಮೀನುಗಾರಿಕಾ ಇಲಾಖೆ ಕಾರವಾರ

# ಯುವನಿಧಿ ಯೋಜನೆಯಿಂದ ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಯುವನಿಧಿ ಯೋಜನೆಯಿಂದ ಎರಡು ವರ್ಷ ಹಣ ಸಿಗೋದರಿಂದ ಸಣ್ಣ ವ್ಯಾಪಾರ, ಸ್ವಂತ ಉದ್ಯಮ ಶುರು ಮಾಡಲು ಯುವಕರು ಮುಂದಾಗಿದ್ದಾರೆ ಎಂದು ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಮಹಿಬೂಬ.ಎಲ್.ನಾಯ್ಕೋಡಿ ಹೇಳಿದರು.

ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಸಹಯೋಗದಲ್ಲಿ ಶುಕ್ರವಾರ ತಾಲೂಕಿನ ಮನಗೂಳಿಯ ಸರ್ಕಾರಿ ಪ್ರಥಮ ದರ್ಜೆ ಪದವಿ ಕಾಲೇಜಿನಲ್ಲಿ ಯುವನಿಧಿ ಯೋಜನೆ ಜಾಗೃತಿ ಹಾಗೂ 2026ರ ಯುವನಿಧಿ ಯೋಜನೆಯ ವಿದ್ಯಾರ್ಥಿಗಳ ನೋಂದಣಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾಲೂಕಿನಲ್ಲಿ 2295 ಒಟ್ಟು ನೋಂದಣಿಯಲ್ಲಿ 1877 ಪದವೀಧರರಿಗೆ ತಿಂಗಳಿಗೆ 3000 ಮತ್ತು 48 ಡಿಪ್ಲೊಮಾ/ಐಟಿಐ ಗೆ 1500 ರೂ ಗಳು ಇಲ್ಲಿಯವರೆಗೆ ಈ ಯೋಜನೆಯಡಿ ತಾಲೂಕಿಗೆ 5,77,018,500 ಕೋಟಿ ರೂ ಗಳು ನೇರವಾಗಿ ಬ್ಯಾಂಕ್ ಖಾತೆಗೆ ಮೂಲಕ ಜಮೆ ಆಗಿದೆ. ಇದರಿಂದ ಸಾವಿರಾರು ನಿರುದ್ಯೋಗಿ ಯುವಕರ ಮನೆಗೆ ಆಸರೆಯಾಗಿದೆ.




ನಿರುದ್ಯೋಗಿ ಪದವೀಧರ ಯುವಕರಿಗೆ ಆರ್ಥಿಕ ಆಸರೆ ಅನ್ನೋದೇ ಯೋಜನೆಯ ಮುಖ್ಯ ಉದ್ದೇಶವಾಗಿದೆ. ನಿರುದ್ಯೋಗಿ ಅನ್ನೋ ಹಣೆಪಟ್ಟಿ ಇದ್ದರೂ ತಿಂಗಳಿಗೆ ಹಣ ಬರೋದರಿಂದ ಕುಟುಂಬದಲ್ಲಿ ಗೌರವ ಮತ್ತು ಆತ್ಮವಿಶ್ವಾಸ ಹೆಚ್ಚಾಗಿದೆ. ಪೋಷಕರ ಮೇಲೆ ಅವಲಂಬನೆ ಕಡಿಮೆಯಾಗಿ, ತಮ್ಮ ಖರ್ಚಿಗೆ ತಾವೇ ದುಡ್ಡು ಇಟ್ಟುಕೊಳ್ಳುವ ಸ್ವಾತಂತ್ರ್ಯ ಸಿಕ್ಕಿದೆ ಎಂದರು.

ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾ. ಜಹಿದಾ ಮಕಾನದಾರ ವಹಿಸಿದ್ದರು ಎಪಿಎಂಸಿ ಮಾಜಿ ಅಧ್ಯಕ್ಷ ವಿಶ್ವನಾಥಗೌಡ ಪಾಟೀಲ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ, ಪಪಂ ಸದಸ್ಯ ಭಾಗ್ಯರಾಜ್ ಸೊನ್ನದ, ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ಮಹೇಶ್ ಮಾಳವಾಡಿಕರ್, ಕಂದಾಯ ಅಧಿಕಾರಿ ವಿಜಯ ರೋಖಡೆ, ಐ ಎಸ್ ಮಠಪತಿ, ಯೋಜನೆ ಸದಸ್ಯರಾದ ಮಹಾಂತೇಶ್ ತಳೆವಾಡ್, ಕವಿತಾ ಮನೋರಮಠ, ಹಾಜಿ ಸಾಬ್ ಕೌಲಗಿ ಹಾಗೂ ಕಾಲೇಜು ಸಿಬ್ಬಂದಿಗಳು ಹಾಗೂ ಫಲಾನುಭವಿ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗೆ ಪರಿಹಾರವನ್ನು ಕೊಂಡುಕೊಂಡರು, ಮತ್ತು ಹೊಸದಾಗಿ 2026 ರಲ್ಲಿ ಹೊಸ ಫಲಾನುಭವಿ ವಿದ್ಯಾರ್ಥಿಗಳಿಗೆ ನೋಂದಣಿಯನ್ನು ಮಾಡಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಯಿತು.

# ಆ.3 ರಂದುಕೆಎಲ್‌ಇ ಶಿಕ್ಷಣ ಸಂಸ್ಥೆಯಆವರಣದಲ್ಲಿರಕ್ತದಾನ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಸ್ಥಳೀಯ ಕೆಎಲ್‌ಇ ಸಮೂಹ ಸಂಸ್ಥೆಗಳು, ಲಯನ್ಸ್‌ಕ್ಲಬ್ ಅಂಕೋಲಾ ಕರಾವಳಿ, ಜಿಲ್ಲಾಕುಟುಂಬ ಕಲ್ಯಾಣ ಇಲಾಖೆ ಕಾರವಾರಆಶ್ರಯದಲ್ಲಿಕೆಎಲ್‌ಇ ಸಂಸ್ಥೆ ಬೆಳಗಾವಿಯ ಗೌರವಕಾರ್ಯಾಧ್ಯಕ್ಷಡಾ.ಪ್ರಭಾಕರಕೋರೆಯವರ 79 ನೇ ಜನ್ಮದಿನದ ನಿಮಿತ್ತ 10 ನೇ ಬಾರಿಕೆಎಲ್‌ಇ ಸಂಸ್ಥೆ ಅಂಕೋಲಾದ ಸಭಾಭವನದಲ್ಲಿಆ.3 ರಂದು ಬೆಳಿಗ್ಗೆ 9.30 ರಿಂದ ಸ್ವಯಂ ಪ್ರೇರಿತರಕ್ತದಾನ ಶಿಬಿರ ಆಯೋಜಿಸಲಾಗಿದ್ದು, ವಿದ್ಯಾರ್ಥಿಗಳು ಶಿಕ್ಷಕರು ಹಾಗೂ ಸಾರ್ವಜನಿಕರಿಗೆ ಮುಕ್ತ ಅವಕಾಶವಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ವಿನಂತಿಸಿದ್ದಾರೆ.

ರಕ್ತದಾನ ಶಿಬಿರದ ಬಗ್ಗೆ ಹೆಚ್ಚಿನ ಮಾಹಿತಿಗಾಗಿಕೆಎಲ್‌ಇ ಸಮೂಹ ಸಂಸ್ಥೆಗಳು ಅಂಕೋಲಾದ ಸದಸ್ಯ ಕಾರ್ಯದರ್ಶಿ ಹಾಗೂ ಬಿ.ಇಡಿಕಾಲೇಜಿನ ಪ್ರಾಚಾರ್ಯರಾದಡಾ.ವಿನಾಯಕ ಜಿ ಹೆಗಡೆ 9480048963 ಸಂಪರ್ಕಿಸಬೇಕಾಗಿ ಸಂಸ್ಥೆಯ ಕಾರ್ಯದರ್ಶಿಗಳಾದಡಾ.ಮೀನಲ್‌ನಾರ್ವೇಕರ್‌ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಮಂಗಲಿ ಸೇವಾಶ್ರಮದ ಸಮಾಜಮುಖಿ ಸೇವೆ ಮಾದರಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಇಲ್ಲಿಯ ಹಿರೇಮಠ ಸಂಸ್ಥಾನದಲ್ಲಿ ಪದ್ಮಶ್ರೀ ಪುರಸ್ಕೃತೆ, ಸುಮಂಗಲಿ ಸೇವಾಶ್ರಮದಡಾ.ಎಸ್.ಜಿ.ಸುಶೀಲಮ್ಮ ಅವರನ್ನು ಗುರುವಾರ ಸನ್ಮಾನಿಸಿ, ಗೌರವಿಸಲಾಯಿತು. ಹಿರೇಮಠ ಸಂಸ್ಥಾನದ ಪೀಠಾಧಪತಿ ಗುರುಬಸವ ಪಟ್ಟದ್ದೇವರು ಅವರು ದಾವಣಗೆರೆ ಪಾಂಡೊಮಟ್ಟಿ ವಿರಕ್ತ ಮಠದ ಡಾ.ಗುರುಬಸವ ಮಹಾಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ಪದ್ಮಶ್ರೀ ಪುರಸ್ಕೃತೆ ಡಾ.ಎಸ್.ಜಿ.ಸುಶೀಲಮ್ಮ ಅವರನ್ನು ಸನ್ಮಾನಿಸಿ, ಆಶೀರ್ವದಿಸಿದರು.

ನಂತರ ಮಾತನಾಡಿದ ಪೂಜ್ಯರು, ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಸುಮಂಗಲಿ ಸೇವಾಶ್ರಮದ ಮೂಲಕ ಸಲ್ಲಿಸುತ್ತಿರುವ ಸಮಾಜಮುಖಿ ಸೇವೆ ಮಾದರಿಯಾಗಿದೆ. ಡಾ.ಎಸ್.ಜಿ.ಸುಶೀಲಮ್ಮ ಅವರು ಕಟ್ಟಿದೆ ಸುಮಂಗಲಿ ಸೇವಾಶ್ರಮ ವಿವಿಧ ಜನಪರ ಮತ್ತು ಜೀವಪರ ಕಾರ್ಯಗಳ ಮೂಲಕ ವಿಶಿಷ್ಟವಾಗಿ ಗುರುತಿಸಿಕೊಂಡಿದೆ.ಈ ಸಂಸ್ಥೆಯಲ್ಲಿ ಅನಾಥ ಮಕ್ಕಳು, ನಿರ್ಗತಿಕ ಮಹಿಳೆಯರು ಮತ್ತು ಹಿರಿಯ ನಾಗರಿಕರಿಗೆ ಆಶ್ರಯ, ಉಚಿತ ಶಿಕ್ಷಣ ಹಾಗೂ ಕೌಶಲ್ಯ ತರಬೇತಿ ನೀಡುವ ಮೂಲಕ ಅತ್ಯುತ್ತಮ ಸೇವೆ ಒದಗಿಸುತ್ತಿದೆ ಎಂದರು.

ಡಾ.ಎಸ್.ಜಿ.ಸುಶೀಲಮ್ಮ ಅವರು ಸುಮಂಗಲಿ ಸೇವಾಶ್ರಮದ ಮೂಲಕ ಸಲ್ಲಿಸುತ್ತಿರುವ ಸಮಾಜಪರ ಸೇವೆ ಗುರುತಿಸಿ ಭಾರತ ಸರಕಾರ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿರುವುದು ಅತ್ಯಂತ ಖುಷಿ ತರಿಸಿದೆ. ಈ ಹಿಂದೆ ಅವರನ್ನು ಬಸವಕಲ್ಯಾಣ ಅನುಭವ ಮಂಟಪದ ವತಿಯಿಂದ ಪುರಸ್ಕಾರ ನೀಡಿ ಗೌರವಿಸಲಾಗಿದೆ. ಅವರ ಸೇವೆ ಹೀಗೆ ಮುಂದುವರೆಯಲಿ ಎಂದು ಆಶಿಸಿದರು.

ದಿವ್ಯಸಾನ್ನಿಧ್ಯವಹಿಸಿದ್ದ ದಾವಣಗೆರೆಪಾಂಡೊಮಟ್ಟಿ ವಿರಕ್ತಮಠದಡಾ.ಗುರುಬಸವ ಮಹಾಸ್ವಾಮೀಜಿ ಮಾತನಾಡಿ, ಗಡಿಭಾಗದಲ್ಲಿ ಡಾ.ಬಸವಲಿಂಗ ಪಟ್ಟದ್ದೇವರು ಬಸವತತ್ವಪ್ರಸಾರ, ಶೈಕ್ಷಣಿಕ ಕ್ರಾಂತಿ ಹಾಗೂ ಸಮಾಜ ಸೇವೆಯ ಮೂಲಕ ನಾಡಿಗೆ ದೊಡ್ಡ ಕೊಡುಗೆ ನೀಡುತ್ತಿದ್ದಾ-ರೆ. ಇವರು ಡಾ.ಚನ್ನಬಸವ ಪಟ್ಟದ್ದೇವರ ಹಾದಿಯಲ್ಲಿ ನಡೆದು ಗಡಿನಾಡಿನಲ್ಲಿ ಕನ್ನಡ ಹಾಗೂ ಶರಣ ಸಂಸ್ಕೃತಿಯನ್ನು ಬೆಳೆಸುತ್ತಿದ್ದಾರೆ. ಉಭಯ ಪೂಜ್ಯರು ಕನಸುಗಳನ್ನು ಕನಸಾಗಿಸಲು ಪರಮ ಪೂಜ್ಯ ಗುರುಬಸವ ಪಟ್ಟದ್ದೇವರು ಹಗಲಿರುಳು ಕ್ರಿಯಾಶೀಲರಾಗಿ ಶ್ರಮಿಸುತ್ತಿರುವುದು ಈ ಭಾಗದ ಪುಣ್ಯವೆಂದು ನುಡಿದರು.

ಈ ಸಂದರ್ಭದಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ತಾಲೂಕು ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ದಾನಾ, ಯುವ ಮುಖಂಡ ಕಿರಣ ಚಾಕೋತೆ, ಬಾಬು ಲಾಧಾ ಸೇರಿದಂತೆ ಹಲವರು ಇದ್ದರು. ಮುಖ್ಯಶಿಕ್ಷಕ ಬಾಬು ಬೆಲ್ದಾಳ ನಿರೂಪಿಸಿ, ವಂದಿಸಿದರು.

# ನಾಮಧಾರಿ ಗಣೇಶೋತ್ಸವ ಸಮಿತಿಯ ಅಧ್ಯಕ್ಷರಾಗಿ ಸತೀಶ ನಾಯ್ಕ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಪಟ್ಟಣದ ಕಾಕರಮಠದ ನಾಮಧಾರಿ ಸಭಾಭವನದಲ್ಲಿ ಕರ್ನಾಟಕ ಆರ್ಯ ಈಡಿಗ ನಾಮಧಾರಿ ಸಂಘದ ಅಧ್ಯಕ್ಷ ಎಂ.ಪಿ.ನಾಯ್ಕ ಇವರ ಅಧ್ಯಕ್ಷತೆಯಲ್ಲಿ ನಾಮಧಾರಿ ಗಣೇಶೋತ್ಸವ ಸಮಿತಿಯ ಪದಾಧಿಕಾರಿಗಳ ಆಯ್ಕೆ ನಡೆಯಿತು. ಅಧ್ಯಕ್ಷರಾಗಿ ಸತೀಶ ಮೋನಪ್ಪ ನಾಯ್ಕ ತೆಂಕಣಕೇರಿ, ಗೌರವಾಧ್ಯಕ್ಷರಾಗಿ ಎಂ. ಪಿ. ನಾಯ್ಕ, ಉಪಾಧ್ಯಕ್ಷರಾಗಿ ಸುನಿಲ ಎಸ್. ನಾಯ್ಕ,ರಾಘವೇಂದ್ರ ನಾಯ್ಕ, ಕಾರ್ಯದರ್ಶಿಯಾಗಿ ವಿಘ್ನೇಶ್ವರ ನಾಯ್ಕ ಹೀಗೆ ಹಲವರನ್ನು ಸದಸ್ಯರನ್ನಾಗಿ ಆಯ್ಕೆಮಾಡಲಾಯಿತು. ಸಭೆಯಲ್ಲಿ ನಾಮಧಾರಿ ಅಭಿವೃದ್ಧಿ ಸಂಘದ ಅಧ್ಯಕ್ಷರು ನಾಗೇಶ ನಾಯ್ಕ ಆಚಾ, ನಾಮಧಾರಿ ಗಣೇಶೋತ್ಸವ ಮುಖ್ಯ ಸಮಿತಿ ಅಧ್ಯಕ್ಷ ಶಿವಾನಂದ ನಾಯ್ಕ, ಕಾರ್ಯದಶಿ ರಾಜೇಶ ಮಿತ್ರನಾಯ್ಕ, ದಹಿಂಕಾಲ ಉತ್ಸವ ಅಧ್ಯಕ್ಷ ಬಾಲಕೃಷ್ಣ ಎನ್. ನಾಯ್ಕ ಪ್ರಮುಖರಾದ ಉದಯ ನಾಯ್ಕ ಸೇರಿದಂತೆ ಹಲವರು ಉಪಸ್ಥಿತರಿದರು.

# ಔರಾದ : ಸಂಘಟನೆ ಸೃಜನ್ ಅಭಿಯಾನ ಇಂದು

• ಮಲ್ಲಮ್ಮ ನುಡಿ ವಾರ್ತೆ ಔರಾದ



ಬೂತ್ ಮಟ್ಟದಿಂದ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಆಗಸ್ಟ್ 1ರಂದು ಶನಿವಾರ ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ 'ಸಂಘಟನೆ ಸೃಜನ್ ಅಭಿಯಾನ' ಹಮ್ಮಿಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಮುಖಂಡ ಡಾ.ಭೀಮಸೇರಾವ ಶಿಂಧೆ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಅಭಿಯಾನದ ಅಂಗವಾಗಿ ಪಕ್ಷದ ನೂತನ ಜಿಲ್ಲಾ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯೂ ನಡೆಯಲಿದೆ ಎಂದು ತಿಳಿಸಿದ್ದಾರೆ. ಎಐಸಿಸಿ ವೀಕ್ಷಕರಾದ ರಾಜೇಶ್ ಲಿಲೋಥಿಯಾ, ಹಸನಸಾಬ್ ದೋತಿಹಾಲ್, ವಿಠ್ಠಲ್ ಯಾಧವ, ರಮೇಶ ಮರಗೋಲ್, ಜ್ಯೋತಿ ಮರಗೋಲ್ ಹಾಗೂ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಜಿಲ್ಲೆಯಲ್ಲಿ ಪಕ್ಷದ ಸಂಘಟನೆಗೆ ಹೊಸ ಚೈತನ್ಯ ತುಂಬುವ ಉದ್ದೇಶದಿಂದ ಎಐಸಿಸಿ ವೀಕ್ಷಕರು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರವಾಸ ಕೈಗೊಂಡಿದ್ದು, ಸ್ಥಳೀಯವಾಗಿ ಪಕ್ಷದ ನೇತೃತ್ವ ಯಾರಿಗೆ ವಹಿಸಬೇಕು ಎಂಬ ಬಗ್ಗೆ ಮುಖಂಡರು ಹಾಗೂ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಲಿದ್ದಾರೆ. ಈ ವೇಳೆ ಪಕ್ಷದ ವಿವಿಧ ಹಂತಗಳ ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ಪ್ರತ್ಯೇಕ ಸಮಾಲೋಚನೆಯನ್ನೂ ನಡೆಸಲಿದ್ದಾರೆ. ಅಭಿಯಾನದಲ್ಲಿ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಮಾಜಿ ಸದಸ್ಯರು, ಪುರಸಭೆಯ ಮಾಜಿ ಅಧ್ಯಕ್ಷರು ಹಾಗೂ ಸದಸ್ಯರು, ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರು ಮತ್ತು ಸದಸ್ಯರು, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು, ವಿವಿಧ ಮುಂಚೂಣಿ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಡಾ. ಭೀಮಸೇರಾವ ಶಿಂಧೆ ಮನವಿ ಮಾಡಿದ್ದಾರೆ.

# ನಾಳೆ ಬೃಹತ ರಕ್ತದಾನ ಶಿಬಿರ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ನಗರದ ತಳವಾಡೆ ಆಸ್ಪತ್ರೆಯಲ್ಲಿ ರೋಟರಿ ಕ್ಲಬ್ ಆಫ್ ಭಾಲ್ಕಿ ಫೋರ್ಟ್(3160) ವತಿಯಿಂದ ಭಾನುವಾರ ಆಗಷ್ಟ 02 ರಂದು ಆಯೋಜಿಸಿರುವ ಸ್ವಯಂಪ್ರೇರಿತ ಬೃಹತ ರಕ್ತದಾನ ಶಿಬಿರ ಮುಂಜಾನೆ 10.00 ರಿಂದ ಸಾಯಂಕಾಲ 4.00 ಗಂಟೆವರೆಗೆ ನಡೆಯಲಿದೆ ಎಂದು ಆಸ್ಪತ್ರೆಯ ಮುಖ್ಯಸ್ಥೆ ಆದ ತಾಲೂಕು ರೋಟರಿ ಕ್ಲಬ್ ಅಧ್ಯಕ್ಷೆ ಡಾ.ಶೈಲಜಾ ತಳವಾಡೆ ತಿಳಿಸಿದ್ದಾರೆ.

ನಗರದ ತಳವಾಡೆ ಆಸ್ಪತ್ರೆಯಲ್ಲಿ ಆಗಷ್ಟ 02 ರಂದು ರೋಟರಿ ಕ್ಲಬ್ ಭಾಲ್ಕಿ ವತಿಯಿಂದ ಹಮ್ಮಿಕೊಂಡಿರುವ ರಕ್ತದಾನ ಶಿಬಿರಕ್ಕೆ ರಾಜಯೋಗ ಕೇಂದ್ರದ ಸಂಯೋಜ-ಕರಾದ ಬ್ರಹ್ಮಕುಮಾರಿ ರಾಧಿಕಾ ಬಹನಜೀ ಚಾಲನೆ ನೀಡಲಿದ್ದಾರೆ. ಸಾರ್ವಜನಿಕ ಆಸ್ಪತ್ರೆಯ ಸಿಎಮ್‌ಒ ಡಾ.ಶಶಿಕಾಂತ ಭೂರೆ, ಬೀದರನ ಬ್ರೀಮ್ಸ್ ಆಸ್ಪತ್ರೆಯ ವೈದ್ಯರು ,ರೋಟರಿ ಕ್ಲಬ್ ಕಾರ್ಯದರ್ಶಿ ಅಶೋಕ ರಾಜೋಳೆ, ಖಜಾಂಚಿ ಅವಿನಾಶ ಮಾಳಗೆ ಸೇರಿದಂತೆ ಸಮಸ್ಥ ರೋಟರಿ ಕ್ಲಬ್ ಪದಾಧಿಕಾರಿಗಳು ಉಪಸ್ಥಿತರಿರಲಿದ್ದಾರೆ.

> 'ರಸ್ತೆ ಅಪಘಾತಗಳು, ತುರ್ತು ಚಿಕಿತ್ಸೆಗಳು ಹಾಗೂ ಹೆರಿಗೆ ಸಂದರ್ಭಗಳಲ್ಲಿ ರಕ್ತದ ಸಮಸ್ಯೆ ಎದುರಾಗುತ್ತಿದೆ. ಕಾರಣ ಅರ್ಹರು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಲು ಮುಂದಾಗಿ ಇನ್ನೊಬ್ಬರ ಜೀವ ಉಳಿಸಲು ನೆರವಾಗಿ.'– ಡಾ.ಶೈಲಜಾ ತಳವಾಡೆ ಅಧ್ಯಕ್ಷರು ,ರೋಟರಿ ಕ್ಲಬ್ ಭಾಲ್ಕಿ.

# ಇಂದು ವ್ಯಸನ ಮುಕ್ತ ದಿನಾಚರಣೆ

ಕಲಬುರಗಿ.ಜು.31:ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಮ್ಸ್ ಆಸ್ಪತ್ರೆ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಆದರ್ಶ ನಗರ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಮ.ನಿ.ಪ್ರ. ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಆಗಸ್ಟ್ 1 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿಯ ಆದರ್ಶ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.


ಕರ್ನಾಟಕ ಸರ್ಕಾರ
(ಮೀನುಗಾರಿಕೆ ಇಲಾಖೆ)
ಮೀನುಗಾರಿಕೆ ಉಪನಿರ್ದೇಶಕರು
ಜಂಗಲ ಕೋಯಿ ಏರಿಯ ಮನ್ನಳ್ಳಿ ರಸ್ತೆ ಬೀದರ –585403
E-mail: ddfbidar@gmail.com Phone: 08482-236145

ಸಂಖ್ಯೆ: ಮೀಉನಿಬೀ/ಯೋ.ಜಾ.ಪ್ರ/02/2026-27. ದಿನಾಂಕ: 30/07/2026.

"ಪ್ರಕಟಣೆ"
ಮೀನುಗಾರಿಕೆ ಇಲಾಖೆಯಿಂದ ಅರ್ಜಿ ಆಹ್ವಾನ

ಬೀದರ ಜಿಲ್ಲೆಯ ಮೀನುಗಾರಿಕೆ ಇಲಾಖೆಯಿಂದ 2026-27ನೇ ಸಾಲಿನ ಜಿಲ್ಲಾ ಪಂಚಾಯತ ಯೋಜನೆಯ ವಿಶೇಷ ಘಟಕಯೋಜನೆ, ಗೀರಿಜನ ಉಪ ಯೋಜನೆಯಡಿ, ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಣೆ ಮತ್ತು ಮೀನು ಮಾರಾಟಕ್ಕಗಿ ದ್ವಿಚಕ್ರ ವಾಹನ ಖರಿದಿಗೆ ಸಹಾಯಧನ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದ್ದು ಆಸಕ್ತದಾರರು ದಿನಾಂಕ: 01/08/2026 ರಿಂದ 20/08/2026 ರವರೆಗೆ https://bidar.nic.in ಈ ಲಿಂಕ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಮಾಡಲಾಗಿರುತ್ತದೆ. ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಮತ್ಸ್ಯವಾಹಿನಿ ಯೋಜನೆಗೆ ಜಿಲ್ಲೆಗೆ ಒಂದು ಗುರಿ ನಿಗದಿಪಡಿಸಲಾಗಿರುತ್ತದೆ ಮತ್ತು ಸಾಮಾನ್ಯ ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ಟು ವಿತರಣೆ ಮತ್ತು ಕೆರೆ / ಜಲಾಶಯದ ಅಂಚಿನಲ್ಲಿ ಮೀನು ಕೃಷಿಕೊಳ ನಿರ್ಮಾಣ, ಮೀನು ಮರಿ ಖರಿದಿಗೆ ಸಹಾಯಧನ, ಕೃಷಿ ಹೊಂಡ ಹೊಂದಿರುವ ರೈತರಿಗೆ ಉಚಿತ ಮೀನು ಮರಿ ವಿತರಣೆ ಮತ್ತು ಗ್ರಾಮ ಪಂಚಾಯತಿ ಕೆರೆಗಳಲ್ಲಿ ಉಚಿತ ಮೀನು ಮರಿ ದಾಸ್ತಾನು ಯೋಜನೆಗಳನ್ನು ಅನುಷ್ಠಾನ ಗೋಳಿಸಲಾಗುತ್ತಿದ್ದು, ಆಸಕ್ತಿ ಹೊಂದಿರುವ ಮೀನುಗಾರರು / ರೈತ ಬಾಂಧವರು ದಿನಾಂಕ: 01/08/2026 ರಿಂದ 20/08/2026 ರವರೆಗೆ ಆಯಾ ತಾಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಮೀನುಗಾರಿಕೆ ಸಹಾಯಕ ನಿರ್ದೇಶಕರು ಬೀದರ 9731772927,ಸಂತಪೂರ 9908316402, ಬಸವಕಲ್ಯಾಣ 9901020772, ರವರಿಗೆ ಸಂಪರ್ಕಿಸುವಂತೆ ಮೀನುಗಾರಿಕೆ ಉಪನಿರ್ದೇಶಕರು ಬೀದರರವರು ತಿಳಿಸಿದ್ದಾರೆ.

ಸಹಿ/– ಮೀನುಗಾರಿಕೆ ಉಪನಿರ್ದೇಶಕರು
ಬೀದರ

ವಾ.ಸಾ.ಸಂ.ಇ/ಬೀದರ/101/ಕೆಎಸ್‌ಎಂಸಿ&ಎ/2026-27

# ವರದಿಗಳ ಸಕಾರಾತ್ಮಕ ಸ್ವೀಕಾರದಿಂದ ಸಮಾಜದ ಏಳಿಗೆ : ಶರಣು ಸಲಗರ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ



ಮಾಧ್ಯಮಗಳಲ್ಲಿ ಬಿತ್ತರವಾಗುವ ಪರ ವಿರೋಧಯಾವುದೇ ವರದಿಗಳಿದ್ದರು ಅದನ್ನು ಅಧಿಕಾರದಲ್ಲಿದ್ದವರುಸಕಾರಾತ್ಮಕವಾಗಿ ಸ್ವೀಕರಿಸಿದರೆ ಸಮಾಜದ ಏಳಿಗೆ ಸಾಧ್ಯಎಂದು ಶಾಸಕರಾದ ಶರಣು ಸಲಗರ ಹೇಳಿದರುಇಲ್ಲಿನ ತಾಲೂಕಾ ಕರ್ನಾಟಕ ಕಾರ್ಯನಿರತ ಪತ್ರಕರ್ತರಸಂಘದಿಂದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡ ಪತ್ರಿಕಾ ದಿನಾಚರಣೆ ಹಾಗೂ ಶಂಕರ ಪ್ರಸಾದ ದುಬೆ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ರಾಜಕಾರಣಿಗಳ ಬಗ್ಗೆ ನಂಬಿಕೆ ಕಡಿಮೆಯಾಗಿದ್ದರಬಹುದು. ಪತ್ರಿಕೆಗಳ ಮೇಲೆ ಜನರ ನಂಬಿಕೆ ಗಾಢವಾಗಿದೆ ಎಂದರು .ಸಮಾಜದ ಅಂಕು ಡೊಂಕು ತಿದ್ದುವ ಕೆಲಸ ಮಾಧ್ಯಮಗಳು ಮಾಡುತ್ತವೆ. ರಾಜಕಾರಣಿಗಳಿಂದ ಆಗಿದ ಕೆಲಸಗಳು ಮಾಧ್ಯಮದಿಂದ ಸಾಧ್ಯವಾಗಿವೆ ಎಂದರು. ಪತ್ರಿಕಾ ಭವನಕ್ಕೆ ನಿವೇಶನ ಇದ್ದರೆ, ಅದಕ್ಕೆ ಬೇಕಾದ ಅನುದಾನವನ್ನು ಕೆಕೆಆರ್‌ಡಿಬಿಯಿಂದ ಬಿಡುಗಡೆಗೊಳಿಸಿ ಪತ್ರಿಕಾ ಭವನ ನಿರ್ಮಿಸುವ ಭರವಸೆ ವ್ಯಕ್ತಪಡಿಸಿದರು. ಪತ್ರಕರ್ತರು ಅನೇಕ ಸಂಗತಿಗಳನ್ನು ಬರೆದು ನಮ್ಮ ಗಮನಕ್ಕೆ ತಂದಿದ್ದಾರೆ. ನಾನು ಅವುಗಳನ್ನು ಸಕಾರಾತ್ಮಕವಾಗಿ ಸ್ವೀಕರಿಸಿದ್ದೇನೆ ಎಂದರು.ಶಂಕರ ಪ್ರಸಾದ ದುಬೆ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತೆ ರಶ್ಮಿ ಎಸ್. ಅವರು ಮಾತನಾಡಿ, ಓದುವ ಹವ್ಯಾಸ ಕಡಿಮೆಯಾಗುತ್ತಿದೆ. ಅದರಿಂದ ಜನರ ನೆಮ್ಮದಿ ಕಳೆದು ಹೋಗುತ್ತಿದೆ. ಪತ್ರಿಕೆಗಳು ಸೇರಿ ಒಟ್ಟು ಏನನ್ನಾದರೂ ಓದುವಿಕೆ ಇದ್ದರೆಯೇ ಅಂತಃಕರಣದ ಸಮಾಜ ರೂಪಿಸಲು ಸಾಧ್ಯ. ಸಾಮಾಜಿಕ ಕಾಳಜಿ ಪತ್ರಿಕೆ, ಪ್ರಭುತ್ವ ಮತ್ತು ಆಡಳಿತದ ಮೂಲ ಕೇಂದ್ರವಾಗಬೇಕು ಎಂದರು.ಕಲ್ಯಾಣದಲ್ಲಿ ಹನ್ನೆರಡನೇ ಶತಮಾನದಲ್ಲಿಯೇ ಸಿಟಿಜನ್ ಜರ್ನಲಿಸಂ ಆರಂಭವಾಗಿತ್ತು. ಸಮಾಜದ ಓರೆಕೋರೆಗಳನ್ನು ಗುರುತಿಸುವ, ಸಮಸ್ಯೆಗಳನ್ನು ಗ್ರಹಿಸುವ, ಪರಿಹಾರ ಕಂಡುಕೊಳ್ಳುವ, ಪ್ರಭುತ್ವ ಪ್ರಶ್ನಿಸುವ ಕೆಲಸ ವಚನಕಾರರು ಅಂದೇ ಮಾಡಿದ್ದರು. ಹಾಗೆಯೇ ಅವರು ಸಾತ್ವಿಕ ಮಾರ್ಗ ಅನುಸರಿಸಿದ್ದರು ಎಂದರು.ಸಹನಾಭೂತಿ ಒಂದೇ ನಮ್ಮನ್ನು ಪಶುಗಳಿಂದ, ಪಕ್ಷಿಗಳಿಂದ ಬೇರ್ಪಡಿಸಿ ಮನುಷ್ಯನನ್ನಾಗಿಸಿದೆ. ಸ್ವಾವಲಂಬನೆಗೆ, ಸ್ವಯಂಭೂಗಾಗಿ, ಸಾಮುದಾಯಿಕ ಹಿತಕ್ಕೆ ಪತ್ರಿಕೆ ಓದಬೇಕು ಎಂದರು. ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆನಂದ ದೇವಪ್ಪ ಮಾತನಾಡಿ, ಸಾಮಾಜಿಕ ಬೆಳವಣಿಗೆಗೆ ಮಾಧ್ಯಮ ಹೆಚ್ಚು ಒತ್ತು ನೀಡಿದೆ. ಆಡಳಿತಾತ್ಮಕ ಸುಧಾರಣೆ, ಪ್ರಭುತ್ವದ ಪ್ರಜ್ಞಾಪೂರ್ವಕ ಕೆಲಸಕ್ಕೆ ಅಣಿಯಾಗಲು ಎಚ್ಚರಿಸುತ್ತದೆ. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಪತ್ರಿಕಾ ಭವನ ನಿರ್ಮಾಣ ಮತ್ತು ಪತ್ರಕರ್ತರಿಗೆ ಸರ್ಕಾರದ ಸೌಲಭ್ಯಗಳನ್ನು ಒದಗಿಸಲು ಮೊದಲ ಆದ್ಯತೆಗೆ ಶ್ರಮಿಸುವೆ ಎಂದರು.ಸಹಾಯಕ ಆಯುಕ್ತರಾದ ಪ್ರಕಾಶ್ ಕುದರಿ ಅವರು ಮಾತನಾಡಿ, ಸರ್ಕಾರದ ಯೋಜನೆಗಳು ಅನುಷ್ಠಾನಕ್ಕೆ ತರುವ ಕೆಲಸ ಮಾಧ್ಯಮಳಿಂದ ನಡೆಯುತ್ತದೆ. ಸಾರ್ವಜನಿಕರ ಮತ್ತು ಸರ್ಕಾರದ ನಡುವಿನ ಸೇತುವೆಯಾಗಿ ಮಾಧ್ಯಮಗಳಿವೆ. ವಾಸ್ತವ ಸುದ್ದಿಗಳಿಗೆ ಮಾಧ್ಯಮಗಳು ಬೆಳಕು ಚೆಲ್ಲುತ್ತವೆ ಎಂದರು.ಡಿವೈಎಸ್ಪಿ ಮಡೋಳಪ್ಪ ಅವರು ಮಾತನಾಡಿ, ಯಾವುದೇ ಘಟನೆಯಾದರೂ ಪೊಲೀಸರು ಮತ್ತು ಪತ್ರಕರ್ತರು ಘಟನಾ ಸ್ಥಳಕ್ಕೆ ಹೋಗುತ್ತಾರೆ. ಪೊಲೀಸ್ ರ ತನಿಖೆ ಮತ್ತು ಪತ್ರಕರ್ತರ ಪರೀಶೀಲನೆ ವಸ್ತುನಿಷ್ಠತೆ ಆದ್ಯತೆ ಇರುತ್ತದೆ. ಪತ್ರಿಕಗಳು ಸಂವಿಧಾನದ ನಾಲ್ಕನೆ ಅಂಗವೆಂದು ಕರೆಯಲಾಗುತ್ತದೆ. ಈ ಸಮಾಜದಲ್ಲಿ ಪತ್ರಿಕೆ ಮತ್ತು ಪೋಲಿಸರ ಸೇವೆ ಬಹಳ ಮಹತ್ವವಾಗಿದೆ ಎಂದರು.ವಿಧಾನಪರಿಷತ್ ಸದಸ್ಯ ಎಂ.ಜಿ.ಮುಳೆ ಮಾತನಾಡಿ, ದೇಶದ ಸ್ವಾತಂತ್ರ್ಯದಲ್ಲಿ , ಕರ್ನಾಟಕ ಏಕೀಕರಣದಲ್ಲಿ ಪತ್ರಿಕೆಗಳ ಪಾತ್ರ ದೊಡ್ಡದು. ಪತ್ರಿಕೆಗಳು ಸಮಾಜದ ಕನ್ನಡಿ. ಹಲವು ಸಮಸ್ಯೆಗಳನ್ನು ಅಧಿಕಾರದಲ್ಲಿರುವವರ ಎದುರಿಗೆ ತಂದು ಇಡುವ ಕೆಲಸ ಮಾಡುತ್ತವೆ ಎಂದರು.

ಜಿಲ್ಲಾ ಕಾರ್ಯದರ್ಶಿ ಶಶಿಕಾಂತ ಶೆಂಬೆಳ್ಳಿ ಮಾತನಾಡಿ, ಇತ್ತೀಚಿನ ಹೊಸ ತಲೆಮಾರಿನ ಝೆನ್ ಜಿ ಯುವಕರು ಮುಖ್ಯ ವಾಹಿನಿಯ ಪತ್ರಕರ್ತರ ಭ್ರಮೆ ಅಳಿಸಿದ್ದಾರೆ. ಸತ್ಯ ಶೋಧನೆ , ಪ್ರಾಮಾಣಿಕ ವರದಿಗಾರಿಕೆ ಮಾಡುವ ಬದ್ಧತೆಗೆ ಆದ್ಯತೆಯಿರಲಿ ಎಂದರು.ಬಿಡಿಪಿಸಿ ಅಧ್ಯಕ್ಷರಾದ ಅನಿಲಕುಮಾರ ರಗಟೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ ನಾರಾಯಣರಾವ್ ಮಾತನಾಡಿದರು.ಭೀಮರಾಯನ ಗುಡಿ ಕಾಡಾ ಅಧ್ಯಕ್ಷ ಬಾಬು ಹೊನ್ನಾನಾಯಕ,ಸರ್ಕಾರಿ ನೌಕರರ ತಾಲೂಕು ಅಧ್ಯಕ್ಷ ದಿಲೀಪ್ ಕುಮಾರ್ ಉತ್ತಮ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಅಪ್ಪಾರಾವ್ ಸೌದಿ, ಪ್ರಶಸ್ತಿ ಪ್ರಯೋಜಕರಾದ ಚಂದ್ರಶೇಖರ ದುಬೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಜಿಲ್ಲಾ ಘಟಕದ ಉಪಾಧ್ಯಕ್ಷ ಪೃಥ್ವಿರಾಜ ಎಸ್. ಖಜಾಂಚಿ ಸುನಿಲ್ ಕುಮಾರ್ ಕುಲಕರ್ಣಿ, ತಾಲೂಕ ಘಟಕ ಉಪಾಧ್ಯಕ್ಷರಾದ ಡಿ ಕೆ ಪ್ರಹ್ಲಾದ. ಎಂ ಡಿ. ನಯಮೋದ್ದಿನ್,ಹಾಗೂ ಶಿವಪುತ್ರ ಪಾಟೀಲ, ಪ್ರದೀಪ್ ವಿಸಾಜಿ, ವೀರಶೆಟ್ಟಿ ಮಲಶೆಟ್ಟಿ, ಕಲ್ಯಾಣರಾವ ಮದರಗಾಂವಕರ್, ಮಾಣಿಕ್ ಭುರೆ, ಧನರಾಜ್ ರಾಜೋಳೆ, ಎಂಡಿ ಖುತಬೋದ್ದಿನ್, ಖಾಜಾ ಸರ್ತಾಜೋದ್ದೀನ್, ಸಿದ್ದಲಿಂಗ ಗಡ್ಡೆ, ಮಲ್ಲಿಕಾರ್ಜುನ ಬಂಡೆ, ವೀರಶೆಟ್ಟಿಯರಂಡಗೆ, ಜುಬೇರ್ ನವಾಜ್, ಮಲ್ಲಿಕಾರ್ಜುನ ಮಲಶೆಟ್ಟಿ, ಶರದ್ ದುಬೆ, ವಿಜಯಕುಮಾರ ಬೆಲ್ದೆ ಮತ್ತು ಶಂಕರ್ ಪ್ರಸಾದ್ ದುಬೆ ಪರಿವಾರದವರು ಉಪಸ್ಥಿತರಿದ್ದರು.ತಾಲೂಕು ಅಧ್ಯಕ್ಷರಾದ ಮಾರ್ಥಂಡ ಜ್ಯೋಷಿ ಸ್ವಾಗತಿಸಿದರು. ಪ್ರಧಾನ ಕಾರ್ಯದರ್ಶಿ ಉದಯಕುಮಾರ್ ಮುಳೆ ಪ್ರಶಸ್ತಿ ಪತ್ರ ವಾಚಿಸಿದರು. ಜಿಲ್ಲಾ ಕಾರ್ಯಕಾರಿ ಸದಸ್ಯ ಗುರುನಾಥ ಗಡ್ಡೆ ಪ್ರಾಸ್ತಾವಿಕ ಮಾತನಾಡಿದರು. ಎಂ ಡಿ ನೈಮೋದ್ದಿನ್ ವಂದಿಸಿದರು. ತಾಲೂಕಿನ ಎಲ್ಲಾ ಪತ್ರಕರ್ತರಿಗೆ, ವಿದ್ಯುನ್ಮಾನ ಮತ್ತು ಸಾಮಾಜಿಕ ಮಾಧ್ಯಮದವರಿಗೆ ಹಾಗೂ ಪತ್ರಿಕಾ ಎಜೆಂಟರಿಗೂ ಸನ್ಮಾನಿಸಿ ಗೌರವಿಸಲಾಯಿತು.

# ಸೈಕಲ್ ಚಕ್ರಗಳಲ್ಲಿ ಹಸಿರು ಕನಸು; ಪರಿಸರ ಉಳಿಸಲು ೬೯ರ ಹರೆಯದಲ್ಲೂ ಅಚಲ ಸಂಕಲ್ಪ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಇಂದಿನ ಕಾಲದಲ್ಲಿ ಕೆಲ ಕಿಲೋಮೀಟರ್‌ಗಳ ದೂರಕ್ಕೂ ದ್ವಿಚಕ್ರ ವಾಹನವನ್ನು ಅವಲಂಬಿಸುವ ಜನರ ಮಧ್ಯೆ, 69 ವರ್ಷದ ಹಿರಿಯ ವ್ಯಕ್ತಿಯೊಬ್ಬರು ಪರಿಸರ ಸಂರಕ್ಷಣೆಯ ಸಂದೇಶವನ್ನು ಹೊತ್ತು ಸಾವಿರಾರು ಕಿಲೋಮೀಟರ್‌ಗಳ ಸೈಕಲ್ ಯಾತ್ರೆ ಕೈಗೊಂಡಿರುವುದು ನಿಜಕ್ಕೂ ಸ್ಫೂರ್ತಿದಾಯಕ. ಕೇರಳ ಮೂಲದ ಹಿರಿಯ ಪರಿಸರ ಜಾಗೃತಿ ಯಾತ್ರಿಕ ಅಂಬು ಚಾರ್ಲೆ, "ಸೈಕಲ್ ಬಳಸಿ – ಪರಿಸರ ಉಳಿಸಿ, ಆರೋಗ್ಯ ಕಾಪಾಡಿ, ಭೂಮಿಯನ್ನು ರಕ್ಷಿಸಿ" ಎಂಬ ಸಂದೇಶವನ್ನು ದೇಶದ ಜನತೆಗೆ ತಲುಪಿಸುವ ಉದ್ದೇಶದಿಂದ ಕಳೆದ ಎರಡು ತಿಂಗಳ ಹಿಂದೆ ತಮ್ಮ ಸೈಕಲ್ ಯಾತ್ರೆಯನ್ನು ಆರಂಭಿಸಿದ್ದಾರೆ. ಹಳ್ಳಿಯಿಂದ ಹಳ್ಳಿಗೆ, ನಗರದಿಂದ ನಗರಕ್ಕೆ ಸಂಚರಿಸುತ್ತಾ ಜನರನ್ನು ನೇರವಾಗಿ ಭೇಟಿ ಮಾಡಿ ಪರಿಸರ ಸಂರಕ್ಷಣೆ, ವಾಯುಮಾಲಿನ್ಯ ನಿಯಂತ್ರಣ, ನೀರಿನ ಸಂರಕ್ಷಣೆ ಹಾಗೂ ಆರೋಗ್ಯಕರ ಜೀವನಶೈಲಿಯ ಕುರಿತು ಜಾಗೃತಿ ಮೂಡಿಸುತ್ತಿದ್ದಾರೆ. ಈ ಯಾತ್ರೆಯಲ್ಲಿ ಅವರಿಗೆ ಯಾವುದೇ ವೈಯಕ್ತಿಕ ಲಾಭದ ಆಸೆಯಿಲ್ಲ. ಪ್ರಕೃತಿಯ ಮೇಲಿನ ಪ್ರೀತಿ ಮತ್ತು ಮುಂದಿನ ಪೀಳಿಗೆಗೆ ಹಸಿರು ಭೂಮಿಯನ್ನು ಉಳಿಸಬೇಕೆಂಬ ಜವಾಬ್ದಾರಿಯೇ ಅವರ ಹೆಜ್ಜೆಗಳಿಗೆ ಶಕ್ತಿ ನೀಡುತ್ತಿದೆ. ಹೋಟೆಲ್‌ಗಳು ಅಥವಾ ಐಷಾರಾಮಿ ಸೌಲಭ್ಯಗಳನ್ನು ಅವಲಂಬಿಸದೆ, ತಾವು ಹೊತ್ತೊಯ್ಯುವ ಸಣ್ಣ ಟೆಂಟ್‌ನಲ್ಲಿಯೇ ವಿಶ್ರಾಂತಿ ಪಡೆದು, ದಾರಿಯುದ್ದಕ್ಕೂ ಜನರು ಪ್ರೀತಿಯಿಂದ ನೀಡುವ ಆಹಾರವನ್ನು ಸ್ವೀಕರಿಸುತ್ತಾ ಅತ್ಯಂತ ಸರಳ ಜೀವನವನ್ನು ನಡೆಸುತ್ತಿದ್ದಾರೆ. ಈಗಾಗಲೇ ಕರ್ನಾಟಕದ ವಿವಿಧ ಭಾಗಗಳಲ್ಲಿ ಪರಿಸರ ಜಾಗೃತಿ ಮೂಡಿಸಿರುವ ಅವರು ಯಾದಗಿರಿ ಜಿಲ್ಲೆಯನ್ನು ತಲುಪಿದ್ದು, ಇಲ್ಲಿಂದ ಕಲಬುರಗಿ, ಬೀದರ ಸೇರಿದಂತೆ ಉತ್ತರ ಭಾರತದತ್ತ ತಮ್ಮ ಸೈಕಲ್ ಯಾತ್ರೆಯನ್ನು ಮುಂದುವರಿಸಲಿದ್ದಾರೆ. ಅಂತಿಮವಾಗಿ ಜಮ್ಮು–ಕಾಶ್ಮೀರ ತಲುಪಿ ಅಲ್ಲಿಯೂ ಪರಿಸರ ಸಂರಕ್ಷಣೆಯ ಸಂದೇಶವನ್ನು ಸಾರಿದ ಬಳಿಕ ತಮ್ಮ ಈ ಮಹತ್ವದ ಜಾಗೃತಿ ಅಭಿಯಾನವನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಿದ್ದಾರೆ. ಇದು ಕೇವಲ ಒಂದು ಸೈಕಲ್ ಯಾತ್ರೆಯಲ್ಲ; ಪರಿಸರದ ಬಗ್ಗೆ ಮನುಷ್ಯನಲ್ಲಿ ಜವಾಬ್ದಾರಿಯ ಭಾವನೆ ಮೂಡಿಸುವ ಸಾಮಾಜಿಕ ಚಳವಳಿಯಾಗಿದೆ. ಒಂದು ಸೈಕಲ್, ಒಂದು ಸಂದೇಶ ಮತ್ತು ಒಬ್ಬ ವ್ಯಕ್ತಿಯ ದೃಢ ಸಂಕಲ್ಪವೂ ಸಮಾಜದಲ್ಲಿ ದೊಡ್ಡ ಬದಲಾವಣೆಗೆ ನಾಂದಿ ಹಾಡಬಲ್ಲದು ಎಂಬುದಕ್ಕೆ ಅಂಬು ಚಾರ್ಲೆ ಅವರ ಜೀವನಯಾನವೇ ಜೀವಂತ ಸಾಕ್ಷಿಯಾಗಿದೆ.

# ಮಕ್ಕಳ ಜೀವದ ಜೊತೆ ಚೆಲ್ಲಾಟವಾಡಿದರೆ ಮುಲಾಜಿಲ್ಲದೇ ಕಠಿಣ ಕ್ರಮ: ಶಾಸಕ ಹಂಪನಗೌಡ ಬಾದರ್ಲಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



:ಜು.31.ದೇವರ ದಯೆಯಿಂದ ಯಾವ ಮಕ್ಕಳಿಗೂ ಪ್ರಾಣಾಪಾಯ ಸಂಭವಿಸಿಲ್ಲ, ಆದರೆ ಮಕ್ಕಳ ಜೀವದ ಜೊತೆ ಯಾರೂ ಚೆಲ್ಲಾಟವಾಡಬೇಡಿ ಎಂದು ಶಾಸಕ ಹಂಪನಗೌಡ ಬಾದರ್ಲಿ ಅವರು ವಾರ್ಡನ್ ಹಾಗೂ ಅಡುಗೆ ಸಿಬ್ಬಂದಿಯನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.ಸಿಂಧನೂರಿನ ಒಳಬಳ್ಳಾರಿ ರಸ್ತೆಯಲ್ಲಿರುವ ಮುರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆಗೆ ಅಧಿಕಾರಿಗಳೊಂದಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಅವರು ಈ ಎಚ್ಚರಿಕೆ ನೀಡಿದರು. ಇತ್ತೀಚೆಗೆ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಕಲುಷಿತ ಅಥವಾ ಕಳಪೆ ಆಹಾರ ಸೇವಿಸಿ ವಿದ್ಯಾರ್ಥಿಗಳು ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಘಟನೆಯು ಆತಂಕಕ್ಕೆ ಕಾರಣವಾಗಿತ್ತು. ಈ ಹಿನ್ನೆಲೆಯಲ್ಲಿ ಎಚ್ಚೆತ್ತ ಶಾಸಕ ಹಂಪನಗೌಡ ಬಾದರ್ಲಿ ಅವರು ನೇರವಾಗಿ ಒಳಬಳ್ಳಾರಿ ರಸ್ತೆಯಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಶಾಲೆಗೆ ಭೇಟಿ ನೀಡಿದ ಶಾಸಕರು ಅಡುಗೆಮನೆ, ಆಹಾರ ದಾಸ್ತಾನು ಕೊಠಡಿ, ಶಾಲೆಯ ಸ್ವಚ್ಛತೆ ಹಾಗೂ ವಿದ್ಯಾರ್ಥಿಗಳಿಗೆ ಕಲ್ಪಿಸಲಾಗಿರುವ ಮೂಲಭೂತ ಸೌಲಭ್ಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಅಧಿಕಾರಿಗಳಿಂದ ಘಟನೆಯ ಕುರಿತು ಸಮಗ್ರ ಮಾಹಿತಿ ಪಡೆದುಕೊಂಡ ಅವರು, ಮುಂದಿನ ದಿನಗಳಲ್ಲಿ ಮಕ್ಕಳ ಆರೋಗ್ಯ ಹಾಗೂ ಸುರಕ್ಷತೆಗೆ ಯಾವುದೇ ರೀತಿಯ ಲೋಪವಾಗದಂತೆ ಎಚ್ಚರಿಕೆ ವಹಿಸಲು ಸೂಚಿಸಿದರು. ಆಹಾರದ ಗುಣಮಟ್ಟವನ್ನು ಪ್ರತಿದಿನ ಕಡ್ಡಾಯವಾಗಿ ಪರಿಶೀಲಿಸಬೇಕೆಂದು ನಿರ್ದೇಶನ ನೀಡಿಲಾಗಿದೆ ಎಂದು ತಿಳಿದುಬಂದಿದೆ.ಪರಿಶೀಲನೆ ಬಳಿಕ ವಿದ್ಯಾರ್ಥಿನಿಯರೊಂದಿಗೆ ಆತ್ಮೀಯವಾಗಿ ಬೆಳಗಿನ ಉಪಹಾರ ಸೇವಿಸಿದ ಶಾಸಕರು, ಅವರ ಶೈಕ್ಷಣಿಕ ಪ್ರಗತಿ, ವಸತಿ ಸೌಲಭ್ಯಗಳು ಮತ್ತು ದೈನಂದಿನ ಅಗತ್ಯಗಳ ಕುರಿತು ವಿಚಾರಿಸಿ,ಯಾವುದೇ ಸಮಸ್ಯೆಗಳಿದ್ದರೂ ಹಿಂಜರಿಯದೆ ತಕ್ಷಣ ತಿಳಿಸುವಂತೆ ಹೇಳಿ, ಅವುಗಳನ್ನು ಶೀಘ್ರವಾಗಿ ಪರಿಹರಿಸುವ ಭರವಸೆ ನೀಡಿ, ವಿದ್ಯಾರ್ಥಿಗಳ ಆರೋಗ್ಯ, ಸುರಕ್ಷತೆ ಮತ್ತು ಉತ್ತಮ ಗುಣಮಟ್ಟದ ಶಿಕ್ಷಣಕ್ಕೆ ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದರು. ಅಲ್ಲದೆ, ಪೋಷಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡ ಶಾಸಕರು, ಕಡ್ಡಾಯವಾಗಿ ಸ್ವಚ್ಛತೆ ಮತ್ತು ಗುಣಮಟ್ಟದ ಆಹಾರವನ್ನು ಮಾತ್ರ ಮಕ್ಕಳಿಗೆ ನೀಡಬೇಕು. ನಿಮ್ಮ ನಿರ್ಲಕ್ಷ್ಯದ ಕೆಲಸದಿಂದ ತಾಲೂಕಿಗೆ ಹಾಗೂ ಶಿಕ್ಷಣ ಸಂಸ್ಥೆಗೆ ಕೆಟ್ಟ ಹೆಸರು ಬರಬಾರದು. ಪರಿಜ್ಞಾನವಿಟ್ಟುಕೊಂಡು ಕೆಲಸ ಮಾಡಿ, ನಿರ್ಲಕ್ಷ್ಯ ಮುಂದುವರಿದರೆ ಮುಲಾಜಿಲ್ಲದೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಘಟನೆ ಜರುಗಿದೆ.

ಈ ಸಂದರ್ಭದಲ್ಲಿ ತಹಸೀಲ್ದಾರ್ ಅರುಣ್ ಕುಮಾರ ದೇಸಾಯಿ, ಇಓ ಚಂದ್ರುಶೇಖರ, ಪೌರಾಯುಕ್ತ ಪಾಂಡುರಂಗ ಇಟಗಿ, ಡಿವೈಎಸ್ಪಿ ಜಿ.ಚಂದ್ರಶೇಖರ, ಟಿಹೆ??? ಅಯ್ಯನಗೌಡ, ಸಿಡಿಪಿಒ ಲಿಂಗನಗೌಡ,ಪಿಎಸ್‌ಐ ಯರಿಯಪ್ಪ,

ಮುಖಂಡರಾದ ಅನಿಲಕುಮಾರ ವಕೀಲರು, ಖಾಜಿ ಮಲ್ಲಿಕ್ ವಕೀಲರು, ಆರ್ ಸಿ ಪಾಟೀಲ, ಶಫು ಖಾನ್, ಹನುಮಂತಪ್ಪ ಗೋಮರ್ಶಿ ಸೇರಿದಂತೆ ವೈದಕೀಯ ಸಿಬ್ಬಂದಿಗಳು, ಕಾರ್ಯಕರ್ತರು ಇತರು ಇದ್ದರು.

# ದಿ. ಆರ್. ಧ್ರುವನಾರಾಯಣರ ಜನ್ಮದಿನದ ಅಂಗವಾಗಿ ವೃದ್ಧಾಶ್ರಮಕ್ಕೆ ದಿನಸಿ ಕಿಟ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಸಮಾಜಮುಖಿ ಚಿಂತನೆ, ಸೇವಾ ಮನೋಭಾವ ಹಾಗೂ ಮಾನವೀಯ ಮೌಲ್ಯಗಳ ಪ್ರತೀಕವಾಗಿದ್ದ ಮಾಜಿ ಸಂಸದರಾದ ದಿವಂಗತ ಆರ್. ಧ್ರುವನಾರಾಯಣ ಅವರ 65ನೇ ಜನ್ಮದಿನದ ಅಂಗವಾಗಿ, ಸುಮಿತ್ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ (ರಿ.), ರಸ್ತಾಪುರ ವತಿಯಿಂದ ವೃದ್ಧಾಶ್ರಮದಲ್ಲಿ ದಿನಸಿ ಆಹಾರ ಕಿಟ್‌ಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಜನ್ಮದಿನವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಆರಬೋಳ ಮಾತನಾಡಿ, ದಿವಂಗತ ಧ್ರುವನಾರಾಯಣ ಅವರು ತಮ್ಮ ಜೀವನವಿಡೀ ಜನಸೇವೆ, ಸಾಮಾಜಿಕ ನ್ಯಾಯ ಹಾಗೂ ಬಡವರ ಪರವಾದ ಮೌಲ್ಯಗಳನ್ನು ಅಳವಡಿಸಿಕೊಂಡು ಬದುಕಿದ ಅಪರೂಪದ ಜನನಾಯಕರು. ಅವರ ಆದರ್ಶಗಳನ್ನು ಸ್ಮರಿಸುವ ಅತ್ಯುತ್ತಮ ಮಾರ್ಗ ಸಮಾಜದ ನಿರ್ಗತಿಕರು, ಹಿರಿಯ ನಾಗರಿಕರು ಹಾಗೂ ಅಗತ್ಯವಿರುವವರಿಗೆ ನೆರವಾಗುವುದಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವೃದ್ಧಾಶ್ರಮದ ನಿವಾಸಿಗಳಿಗೆ ದಿನಸಿ ಆಹಾರ ಕಿಟ್‌ಗಳನ್ನು ವಿತರಿಸಿ, ಅವರೊಂದಿಗೆ ಆತ್ಮೀಯವಾಗಿ ಸಮಯ ಕಳೆಯುವ ಮೂಲಕ ಮಾನವೀಯ ಕಾಳಜಿಯನ್ನು ವ್ಯಕ್ತಪಡಿಸಲಾಯಿತು. ಈ ಸಂದರ್ಭದಲ್ಲಿ ಪಂಚ ಗ್ಯಾರಂಟಿ ಯೋಜನೆಯ ತಾಲೂಕು ಸದಸ್ಯರಾದ ಮೌನೇಶ ಶೆಟ್ಟಿಗೇರಾ, ಭೀಮರಾಯ ಜೇಗ್ರಿ, ಚನ್ನು ಬಾಗ್ಲಿ, ಕಾರ್ತಿಕ ನಾಗನೂರ, ರಘು ಹಂಚಿನಾಳ, ರಾಜು ಹುಲಕಲ್ ಸೇರಿದಂತೆ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೆಎಸ್‌ಆರ್‌ಟಿಸಿ ಸಿಬ್ಬಂದಿ ಪ್ರಭಾಕರ್ ಪೊಲೀಸ್ ಪಾಟೀಲ, ಶರಣಪ್ಪ ಹೂಗಾರ್‌ಗೆ ಭಾವಪೂರ್ಣ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜು 31: ಕೆಎಸ್‌ಆರ್‌ಟಿಸಿ ಗುರುಮಠಕಲ್ ಘಟಕದ ಹಿರಿಯ ಸಿಬ್ಬಂದಿಗಳಾದ ಪ್ರಭಾಕರ್ ಪೊಲೀಸ್ ಪಾಟೀಲ ಹಾಗೂ ಶರಣಪ್ಪ ಹೂಗಾರ್ ಅವರ ಸೇವಾನಿವೃತ್ತಿ ಸಮಾರಂಭ ಶನಿವಾರ ಭಾವಪೂರ್ಣವಾಗಿ ನಡೆಯಿತು. ಸುಮಾರು 40 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದ ಪ್ರಭಾಕರ್ ಪೊಲೀಸ್ ಪಾಟೀಲ ಹಾಗೂ 28 ವರ್ಷಗಳ ಸೇವೆ ಸಲ್ಲಿಸಿದ ಶರಣಪ್ಪ ಹೂಗಾರ್ ಅವರ ಸೇವೆಯನ್ನು ಸ್ಮರಿಸಿ ಸಹೋದ್ಯೋಗಿಗಳು, ಬಾಲ್ಯದ ಸ್ನೇಹಿತರು, ಬಂಧು–ಬಳಗ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಆತ್ಮೀಯವಾಗಿ ಸನ್ಮಾನಿಸಿ ಶುಭ ಹಾರೈಸಿದರು.

ಕಾರ್ಯಕ್ರಮಕ್ಕೆ ದಿಗ್ಗಾಂವ ಪಂಚವೀರ ಮಠದ ಪೂಜ್ಯ ಸಿದ್ದವೀರ ಶಿವಾಚಾರ್ಯ ಸ್ವಾಮೀಜಿ ಹಾಗೂ ಗುರುಮಠಕಲ್ ಖಾಸಾ ಮಠದ ಪೂಜ್ಯ ಶಾಂತವೀರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವೇದಿಕೆಯಲ್ಲಿ ತಾಲೂಕು ತಹಶೀಲ್ದಾರ್ ಚನ್ನಮಲ್ಲಪ್ಪ ಘಂಟಿ, ಯಾದಗಿರಿ ವಿಭಾಗೀಯ ನಿಯಂತ್ರಕ ಜಿ.ಟಿ. ಮಂಜುನಾಥ್, ಬಂಗಾರಪ್ಪ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಹೂಗಾರ್ ಸಮಾಜದ ರಾಜ್ಯಾಧ್ಯಕ್ಷ ಬಸವರಾಜ ಹೂಗಾರ್, ವೈದ್ಯಾಧಿಕಾರಿ ಡಾ. ಶಿವಪ್ರಸಾದ್ ಮೈತ್ರಿ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಂಬರೀಷ ಪಾಟೀಲ, ಗುರುಮಠಕಲ್ ಘಟಕ ವ್ಯವಸ್ಥಾಪಕ ಭೀಮಶಂಕರ್ ಕೊಲ್ಲೂರು ಹಾಗೂ ಘಟಕದ ವೈದ್ಯಾಧಿಕಾರಿ ಡಾ. ಭೀಮಶಂಕರ್ ಮುತ್ತಗಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಕರ್ತವ್ಯನಿಷ್ಠೆ, ಪ್ರಾಮಾಣಿಕತೆ ಹಾಗೂ ಸಾರ್ವಜನಿಕ ಸೇವೆಯ ಮೂಲಕ ಇಬ್ಬರೂ ಸಿಬ್ಬಂದಿ ಸಂಸ್ಥೆಗೆ ಉತ್ತಮ ಹೆಸರು ತಂದುಕೊಟ್ಟಿದ್ದಾರೆ. ಅವರ ಸೇವಾ ಮನೋಭಾವ ಮುಂದಿನ ಪೀಳಿಗೆಯ ಸಿಬ್ಬಂದಿಗೆ ಮಾದರಿಯಾಗಿದ್ದು, ನಿವೃತ್ತ ಜೀವನ ಆರೋಗ್ಯ, ನೆಮ್ಮದಿ ಮತ್ತು ಸಂತೋಷದಿಂದ ಕೂಡಿರಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಕೆಎಸ್‌ಆರ್‌ಟಿಸಿ ಸಿಬ್ಬಂದಿ, ವಿವಿಧ ಸಂಘಟನೆಗಳ ಮುಖಂಡರು, ಸಾರ್ವಜನಿಕರು ಹಾಗೂ ಕುಟುಂಬದ ಸದಸ್ಯರು, ವಿವಿಧ ಸಮಾಜದ ಅಧ್ಯಕ್ಷರು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನಿವೃತ್ತ ಸಿಬ್ಬಂದಿಗಳಿಗೆ ಆತ್ಮೀಯ ಬೀಳ್ಕೊಡುಗೆ ನೀಡಿದರು.

# ನಗರಸಭೆ ಜಪ್ತಿ ಆದೇಶಕ್ಕೆ ಹೈಕೋರ್ಟ್ ತಡೆ: ಆ.೮ರೊಳಗೆ 10 ಲಕ್ಷ ಠೇವಣಿಗೆ ಸೂಚನೆ






• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಭೂಸ್ವಾಧೀನ ಪರಿಹಾರ ಪ್ರಕರಣದಲ್ಲಿ ಇಲ್ಲಿನ ನಗರಸಭೆ ವಿರುದ್ಧ ಮೊದಲ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ನೀಡಿದ್ದ ಚರಾಸ್ತಿ ಜಪ್ತಿ ಆದೇಶಕ್ಕೆ ಕಲಬುರಗಿ ಪೀಠದ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ ಎಂದು ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ ತಿಳಿಸಿದ್ದಾರೆ.ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,1983–84ರಲ್ಲಿ ಸ್ವಾಧೀನಪಡಿಸಿಕೊಂಡ 6,656 ಚದರ ಅಡಿ ಜಮೀನಿನ ಪರಿಹಾರ ಸಂಬಂಧ ಸರಸ್ವತಿಬಾಯಿ ಸಲ್ಲಿಸಿದ್ದ ಜಾರಿ ಅರ್ಜಿಯ ಮೇರೆಗೆ ಜಿಲ್ಲಾ ನ್ಯಾಯಾಲಯವು ನಗರಸಭೆಯ ಕಂಪ್ಯೂಟರ್, ಕುರ್ಚಿ, ಟೇಬಲ್, ಏರ್ ಕೂಲರ್ ಸೇರಿದಂತೆ ಚರಾಸ್ತಿಗಳನ್ನು ಜಪ್ತಿ ಮಾಡಿತ್ತು. ಈ ಆದೇಶ ಪ್ರಶ್ನಿಸಿಸಿಬ್ಬಂದಿ ಹೈಕೋರ್ಟ್ ಮೊರೆ ಹೋಗಿತ್ತು.

ಪ್ರಕರಣದ ವಿಚಾರಣೆ ನಡೆಸಿದ ಹೈಕೋರ್ಟ್, ಜಪ್ತಿ ಆದೇಶಕ್ಕೆ ಆಗಸ್ಟ್ 20ರವರೆಗೆ ತಡೆ ನೀಡಿ, ಆಗಸ್ಟ್ 8ರೊಳಗೆ 10 ಲಕ್ಷ ರೂ. ಠೇವಣಿ ಇಡುವಂತೆ ನಿರ್ದೇಶಿಸಿದೆ ಎಂದರು.ಹೈಕೋರ್ಟ್ ನಿರ್ದೇಶನವನ್ನು ಪಾಲಿಸಿ ನಿಗದಿತ ಅವಧಿಯೊಳಗೆ 10 ಲಕ್ಷ ರೂ. ಠೇವಣಿ ಇಡಲಾಗುವುದು,ಮುಂದೆ ನ್ಯಾಯಾಲಯದ ಆದೇಶದಂತೆಯೇ ನಡೆದುಕೊಳ್ಳಲಾಗುವುದೆಂದರು.

ಈ ವಿಷಯದಲ್ಲಿ ನಾವು ಸೇರಿದಂತೆಯೇ ನಮ್ಮ ನಗರಸಭೆ ವಕೀಲರಿಂದಲ್ಲೂ ತಪ್ಪುಗಳಾಗಿವೆ ಎಂದ ಅವರು, ಇದುವರೆಗೂ ಸಂತ್ರಸ್ತೆಗೆ 31ಲಕ್ಷ ರೂ. ಪಾವತಿಸಲಾಗಿದೆ ಎಂದರು.

ಶುಕ್ರವಾರ ಸಂಜೆ ಜಿಲ್ಲಾ ನ್ಯಾಯಾಲಯದಿಂದ ಜಪ್ತಿಯಾದ ಸಾಮಾನುಗಳು ಕಚೇರಿಗೆ ತರಲಾಗಿದ್ದು, ನಾಳೆಯಿಂದ ಎಂದಿನಂತೆಯೇ ಕೆಲಸ ಕಾರ್ಯ ನಡೆಯಲಿದೆ. ಎಸ್ ಐಆರ್ ಕೆಲಸ ನಿಗದಿಯಂಯೇ ಮಾಡಿ ಮುಗಿಸಲಾಗುವುದು. ಸಾರ್ವಜನಿಕರು ತಮ್ಮ ಕೆಲಸಗಳಿಗೇ ಕಚೇರಿ ಬರಬೇಕೆಂದು ಚವ್ಹಾಣ ಮನವಿ ಮಾಡಿದ್ದಾರೆ.

## ಭೀಮಾ ನದಿಯತ್ತ ಹೋಗಬೇಡಿ

ಮಹಾರಾಷ್ಟ ರಾಜ್ಯದಿಂದ ಮಳೆ ನೀರು ಹರಿದು ಬರುತ್ತಿರುವುದರಿಂದ ಇಲ್ಲಿನ ಭೀಮಾ ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಬರುತ್ತಿದ್ದು, ಈ ವೇಳೆ ಮೀನುಗಾರರು, ಸಾರ್ವಜನಿಕರು ಯಾವುದೇ ಕಾರಣಕ್ಕೂ ನಗರದ ಸಮೀಪದ ಭೀಮಾ ನದಿಗೆ ತೆರಳಬಾರದೆಂದು ಚವ್ಹಾಣ ಮನವಿ ಮಾಡಿದ್ದಾರೆ. ಮಳೆ ಆರಂಭವಾಗಿದ್ದರಿಂದ ಸಾಂಕ್ರಮಿಕ ರೋಗದ ಹಿನ್ನಲೆಯಲ್ಲಿ ನೀರು ಕಾಯಿಸಿ,ಶೋಸಿ ಕುಡಿಯಬೇಕೆಂದು ಜನರಿಗೆ ಅವರು ಮನವಿ ಮಾಡಿದ್ದಾರೆ.

## 10 ರಿಂದ 15 ಕೋಟಿ ರೂ.ತೆರಿಗೆ ಬಾಕಿ

ನಗರದ ವಸತಿ, ಮಳಿಗೆ, ದೊಡ್ಡ,ದೊಡ್ಡ ಕಟ್ಟಡಗಳು, ಶಾಲಾ,ಕಾಲೇಜುಗಳು ಸೇರಿದಂತೆ–ಯೇ ವಿವಿಧ ಆಸ್ತಿಗಳಿಂದ ನಗರಸಭೆಗೆ 10ರಿಂದ 15 ಕೋಟಿ ರೂ. ತೆರಿಗೆ ಬಾಕಿ ಇದೆ. ನಗರಸಭೆ ನಡೆಸಲು ಆರ್ಥಿಕ ಹೊರೆಯಾಗಿದೆ. ಕಾರಣ ತೆರಿಗೆ ಬಾಕಿ ಉಳಿಸಿಕೊಂಡವರು ಕೂಡಲೇ ತೆ–ರಿಗೆ ಹಣ ಕಟ್ಟಬೇಕು, ನಿರ್ಲಕ್ಷ್ಯ ಮಾಡಿದರೇ ನೋಟಿಸ್ ನೀಡಿ, ಆಮೇಲೆ ಇತರೇ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದೆಂದು ಪೌರಾಯುಕ್ತ ಉಮೇಶ ಚವ್ಹಾಣ ಎಚ್ಚರಿಕೆ ನೀಡಿದ್ದಾರೆ.

# ಪತ್ರಿಕೋದ್ಯಮವು ಸಮಾಜದ ಅಭಿವೃದ್ಧಿಗೆ ಸಹಾಯಕ: ಡಾ. ಸಿದ್ದು ಪಾಟೀಲ್



> ಇತ್ತಿಚೆಗೆ ನಕಲಿ ಪತ್ರಕರ್ತರ ಹಾವಳಿ ಹೆಚ್ಚಾಗಿದ್ದು, ನಮ್ಮ ಸಂಘದ ಸದಸ್ಯರು ಯಾರು ಕೂಡ ಬ್ಲಾಕ್ ಮೇಲ್ ಮಾಡುವ ಸದಸ್ಯರಿಲ್ಲ, ಅಂತಹ ನಕಲಿ ಪತ್ರಕರ್ತರು ಕಾಣಿಸಿದ್ದಲ್ಲಿ ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು.

• **ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ**

ಜನರ ಸಮಸ್ಯೆಗಳನ್ನು ಸರಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸುವಲ್ಲಿ ಪತ್ರಕರ್ತರ ಪಾತ್ರ ಮಹತ್ವದ್ದಾಗಿದೆ ಎಂದು ಶಾಸಕ ಡಾ. ಸಿದ್ದು ಪಾಟೀಲ್ ತಿಳಿಸಿದರು. ಪಟ್ಟಣದ ಶ್ರೀ ಸಂತ ಶಿರೋಮಣಿ ಮಡಿವಾಳೇಶ್ವರ (ಗವಿ) ಕಲ್ಯಾಣ ಮಂಟಪದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ದಿನಾಚರಣೆಯ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಿಕೋದ್ಯಮವು ಸಮಾಜದ ಅಭಿವೃದ್ಧಿಗೆ ಪೂರಕವಾದ ಶಕ್ತಿಯಾಗಿದೆ. ನಿಷ್ಪಕ್ಷಪಾತ ಹಾಗೂ ಜವಾಬ್ದಾರಿಯುತ ವರದಿಗಾರಿಕೆ ಪ್ರಜಾ ಪ್ರಭುತ್ವವನ್ನು ಮತ್ತಷ್ಟು ಬಲಪಡಿಸುತ್ತದೆ. ಅಭಿವೃದ್ಧಿ ಪರ ಮತ್ತು ಜನಪರವಾದ ವರದಿಗಳಿಗೆ ಪತ್ರಕರ್ತರು ಹೆಚ್ಚಿನ ಆದ್ಯತೆ ನೀಡಬೇಕು ಈಗಾಗಲೇ ಪಟ್ಟಣದ ವರದಿಗಾರರ ಪತ್ರಿಕಾ ಭವನದ ನಿರ್ಮಾಣದ ಕನಸಿದೆ ಆ ಕನಸು ಮುಂಬರುವ ದಿನಮಾನಗಳಲ್ಲಿ ನನಸು ಮಾಡುವ ಪ್ರಯತ್ನ ಮಾಡುವೆ ಎಂದು ಆಶ್ವಾಸನೆ ನೀಡಿದರು. ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸತ್ಯ, ನಿಷ್ಪಕ್ಷಪಾತ ಹಾಗೂ ಜನಪರ ಪತ್ರಿಕೋದ್ಯಮವನ್ನು ಉಳಿಸಿಕೊಂಡು ಹೋಗುವುದು ಪ್ರತಿಯೊಬ್ಬ ಪತ್ರಕರ್ತನ ಹೊಣೆಗಾರಿಕೆಯಾಗಿದೆ. ಸಮಾಜದ ಸಮಸ್ಯೆಗಳಿಗೆ ಧ್ವನಿಯಾಗುವ ಜವಾಬ್ದಾರಿಯನ್ನು ಪತ್ರಕರ್ತರು ಇನ್ನಷ್ಟು ಬದ್ಧತೆಯಿಂದ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ತಾಲೂಕಾಧ್ಯಕ್ಷ ಕೃಷ್ಣ ಪಂಚಾಳ ಪ್ರಾಸ್ತಾವಿಕ ಮಾತನಾಡಿದರು. ಡಾ. ಶಿವರಂಜನ್ ಸತ್ಯಂಪೇಟೆ ಅವರು ವಿಶೇಶ ಉಪನ್ಯಾಸ ನೀಡಿದರು. ಈ ತಹಸೀಲ್ದಾರ್ ಮಂಜುನಾಥ್ ಪಂಚಾಳ, ಕಾರ್ಯನಿರ್ವಾಹಕ ಅಧಿಕಾರಿ ಲಿಂಗರಾಜ ಪಾಟೀಲ್, ವಲಯ ಅರಣ್ಯಧಿಕಾರಿ ಶ್ರೀಕಾಂತ ರಾಠೋಡ, ರಾಜ್ಯ ಕಾರ್ಯಕರಣಿ ಸದಸ್ಯ ಅಪ್ಪರಾವ ಸೌಧಿ, ದುರ್ಯೋಧನ ಹೂಗಾರ್, ಮಲ್ಲಿಕಾರ್ಜುನ ಪಾಟೀಲ್, ಸೂರ್ಯಕಾಂತ ಮಠಪತಿ, ರೇವಣಪ್ಪ ಹೂಗಾರ್, ಹುಮನಾಬಾದ್ ತಾಲೂಕಾಧ್ಯಕ್ಷ ಸಂಜೀವಕುಮಾರ್ ಜುನ್ನಾ, ಪ್ರಧಾನ ಕಾರ್ಯದರ್ಶಿ ಗುಂಡು ಅತಿವಾಳ, ಸೈಯದ್ ಮುಸ್ತಫಾ ಖಾದ್ರಿ, ಮೋಹಿಯೋದ್ದೀನ್ ಲಾಥೋಡಿ, ರಾಜಕುಮಾರ ಆರ್. ಹಡಪದ, ವಿದ್ಯಾಸಾಗರ ಕಟ್ಟಿಮನಿ, ನವೀನ ಗಂಜಿ, ಮಂಜುನಾಥ್ ಚಿಂತಕೋಟಿ, ಅನೀಲಕುಮಾರ್ ಸಿಂಧೆ, ಶಶಿಕಾಂತ್ ಭಗೋಜಿ, ಶೈಲೇಂದ್ರ ಕಾವಡಿ, ಶ್ರೀಮಂತರಾವ ಇಂಚುರೇ, ಸಜೀಶ ಲಂಬುನೂರ್, ಸಲ್ಲಾವುದ್ದೀನ ಸಿದ್ಧಿಕಿ ಸೇರಿದಂತೆ ಪಟ್ಟಣದ ಪ್ರಮುಖರು, ಶಿಕ್ಷಕರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ಕೂಲಿ ಕಾರ್ಮಿಕರಿಗೆ ಕೆಲಸ ಕೊಟ್ಟು ಗುಳೆ ಹೋಗುವುದು ತಪ್ಪಿಸಿ



• **ಮಲ್ಲಮ್ಮ ನುಡಿ ವಾರ್ತೆಕೊಟ್ಟೂರು**

ಪಟ್ಟಣದ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ ಪದಾಧಿಕಾರಿಗಳು. ಹಾಗೂ ಕೊಗಳೆ ಗ್ರಾಮದ. ಕಾರ್ಮಿಕರು ಎಪಿಎಂಸಿ ಮಾರುಕಟ್ಟೆ ಸಮೀಪ ಗಣೇಶ್ ಗುಡಿಯಿಂದ ತಾಲೂಕು ಪಂಚಾಯತಿವರೆಗೆ ಕೂಲಿ ಕಾರ್ಮಿಕರು ಕಾಲ್ನಡಿಗೆಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಬೇಕೆ ಬೇಕು ಕಾರ್ಮಿಕರಿಗೆ ಕೂಲಿ ಕೆಲಸ ಬೇಕು ಎಂದು ಕಾರ್ಮಿಕರು ಸರ್ಕಾರ ವಿರುದ್ದ ಘೋಷಣೆ ಕೂಗುತ್ತಾ ಸರ್ಕಾರಕ್ಕೆ ಮನವಿ ಸಲ್ಲಿಸಲು ತಾಲೂಕು ಪಂಚಾಯಿತಿ ಮುಂಭಾಗದಲ್ಲಿ ಅಧಿಕಾರಿಗಳಾದ ಎ ಡಿ ವಿಜಯ್ ಕುಮಾರ್ ಹೆಚ್. ರವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿಯಾದ ಮಲ್ಲೇಶ್ ರವರು ಮಾತನಾಡಿ ನಮ್ಮ ಹಕ್ಕೋತ್ತಾಯಿಸುವುದೇನೆಂದರೆ ಗಿಃಲು ಖಂಒ ಗೆ ಕಾನೂನು ಅನುಷ್ಠಾನ ಮಾಡುವಲ್ಲಿ ಕಳೆದ ಒಂದು ತಿಂಗಳಿಂದ ಕೇಂದ್ರ ಸರ್ಕಾರ ವಿಫಲವಾಗಿದೆ. ಕೂಲಿ ಕಾರ್ಮಿಕರಿಗೆ ಕೆಲಸ ಸಿಗುತ್ತಿಲ್ಲ. ಕಾರ್ಮಿಕರುವಲಸೆ ಹೋಗುವದು ಹೆಚ್ಚಾಗಿದೆ ಹಾಗೂ ಕೇಂದ್ರ ನಿಯೋಜಿಸಿರುವ 318 ಕಾಮಗಾರಿಗಳು ಲಕ್ಷಾಂತರ ಕಾರ್ಮಿಕರು ಕೆಲಸ ಮಾಡಲು ಹೂಳು ಎತ್ತುವಂತಹ ಕಾಮಗಾರಿಗಳನ್ನು ಅನುಷ್ಠಾನ ಮಾಡಬೇಕು ಕಾಂಟ್ರಾಕ್ಟರ್ಗಳು ಕೆಲಸ ಮಾಡುವ ಕಾಮಗಾರಿಗಳನ್ನು ನಿಯೋಜನೆ ಮಾಡಿ 125 ದಿನ ಕೆಲಸ ಕೊಡುತ್ತಿದ್ದೇವೆ ಎಂದು ಹೇಳುತ್ತಿದ್ದರು.

ಪಂಚಾಯಿತಿ ಮಟ್ಟದಲ್ಲಿ ಪಿ ಡಿ ಓ ಗಳು ಸಾಕಷ್ಟು ಪಂಚಾಯಿತಿಗಳಲ್ಲಿ ಕೆಲಸ ಕೊಡಲು ಸಾಧ್ಯವಾಗುತ್ತಿಲ್ಲ ಎಂದು ಹೇಳುತ್ತಿದ್ದಾರೆ. ಇದು ಖಂಡನೀಯ ಸಂಗತಿಯಾಗಿದೆ ಹಾಗಾಗಿ ಸಂಬದಪಟ್ಟಅದಿಕಾರಿಗಳು ನಮ್ಮ ಪರವಾಗಿ ಕೇಂದ್ರಕ್ಕೆ ಒತ್ತಾಯಿಸಿ ಈ ಕೆಳಗಿನ ಕಾಮಗಾರಿಗಳನ್ನು ಜಾರಿಗೆ ತರಲು ಹಾಕ್ಕೋತ್ತಾಯಿಸಿ ದುಡಿಯುವ ಕೈಗಳಿಗೆ ಕೆಲಸ ನೀಡಬೇಕೆಂದು ಕೇಳಿಕೊಳ್ಳುತ್ತಿದ್ದೇವೆ.

ಹಕ್ಕೋತ್ತಾಯಗಳು : ನಿರಂತರ ಕೆಲಸ ಬೇಕು. ಸ್ಥಳೀಯವಾಗಿ ಪ್ರತಿ ಹಳ್ಳಿಯಲ್ಲಿ ಕೆಲಸ ನೀಡಬೇಕು. ಕಾರ್ಮಿಕರು ಕೆಲಸ. ಮಾಡುವಂತಹ ಕೆಲಸಗಳು ಗಿಃಲು RAM G ಕಾನೂನಲ್ಲಿ ಇಲ್ಲ ಕೂಡಲೇ ಹೂಳು ಎತ್ತುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಬೇಕು. ಕೊಟ್ಟೂರು ತಾಲೂಕನ್ನು ಬರಗಾಲ ತಾಲೂಕಾಗಿ ಘೋಷಣೆ ಮಾಡಿ 200 ದಿನಗಳ ಕೆಲಸ ನೀಡಬೇಕು. ಎಲ್ಲಾ ಕಡೆ ಮಳೆ ಇಲ್ಲದೆ ದನ ಕರು ಕುರಿ ಮೇಕೆಗಳು ಪರದಾಡುತ್ತಿವೆ ಕೂಡಲೇ ಗೋಶಾಲೆಗಳನ್ನು ತೆರೆಯಬೇಕು.

ಕೆಲಸದ ಸ್ಥಳದಲ್ಲಿ ಮೃತರಾದ ಕುಟುಂಬಗಳಿಗೆ 10 ಲಕ್ಷ ರೂಪಾಯಿ ಪರಿಹಾರ ನೀಡಲು ಕಾನೂನು ಮಾಡಬೇಕು. ನರೇಗಾ ಂಙುಚಿಥಿ ಮರು ಪ್ರಾರಂಭವಾಗಬೇಕು. ಹಾಗೂ ಕೂಲಿ ಕಾರ್ಮಿಕರು ಕೆಲಸಕ್ಕಾಗಿ ವಲಸೆ ಹೋಗುವುದನ್ನು ನಿಲ್ಲಿಸಬೇಕು. ಸರ್ಕಾರ ಕೂಡಲೇ ಕೊಗಳಿ ಗ್ರಾಮದಲ್ಲಿ ಕೂಲಿ ಕಾರ್ಮಿಕರಿಗೆ ಕೆಲಸ ನೀಡಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತಾಲೂಕಿನ ಕೂಲಿ ಕಾರ್ಮಿಕರು ತಾಲೂಕು ಪಂಚಾಯಿತಿ ಮುಂಭಾಗದಲ್ಲಿ ಉಗ್ರವಾದ ಹೋರಾಟಮಾಡಬೇಕಾಗುತ್ತದೆ ಎಂದು ಸಂಘಟನೆಯ ಪಧಾದಿಕಾರಿಗಳು.ಸದಸ್ಯರು. ಕೂಲಿ ಕಾರ್ಮಿಕರು ಅಗ್ರಹಿಸಿದರು.ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲೆ ಸಂಚಾಲಕರಾದ ಅಕ್ಕಮ್ಮ .ತಾಲೂಕು ಸಂಚಾಲಕರಾದ ಕೊಗಳಿ ನೇತ್ರ. ಉಜ್ಜಿನಿ ಶಿಲ್ಪ. ಹಾಗು ಕೋಗಳಿ. ಹಾಗೂ ತಾಲೂಕಿನ ಕೂಲಿ ಕಾರ್ಮಿಕರು ಇದ್ದರು

# ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಪರೀಕ್ಷೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆಸಲು ಕ್ರಮವಹಿಸಿ : ಜಿಲ್ಲಾಧಿಕಾರಿ ಡಾ.ಸುರೇಶ ಸೂಚನೆ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಆಗಸ್ಟ್ 2 ರಂದು ಜಿಲ್ಲೆಯಾದ್ಯಂತ ನಡೆಯಲಿರುವ ಮಿಕ್ಕುಳಿದ ವೃಂದದ ಹಾಗೂ ಸ್ಥಳೀಯ ವೃಂದದ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಪರೀಕ್ಷೆಯು ಒಟ್ಟು 24 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಪ್ರಕ್ರಿಯೆಯನ್ನು ಅತ್ಯಂತ ಪಾರದರ್ಶಕ ಮತ್ತು ಶಿಸ್ತುಬದ್ಧವಾಗಿ ನಡೆಸಲು ನಿಯೋಜಿತ ಪರೀಕ್ಷಾ ವೀಕ್ಷಕರು, ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಸೂಚನೆ ನೀಡಿದರು.

ಗುರುವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಮಿಕ್ಕುಳಿದ ವೃಂದದ ಹಾಗೂ ಸ್ಥಳೀಯ ವೃಂದದ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಪರೀಕ್ಷಾ ಕೇಂದ್ರಗಳಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಕೇಂದ್ರಗಳಿಗೆ ಶಿವದಾರ, ಜನಿವಾರ, ಮಾಂಗಲ್ಯ, ಮೂಗುತಿ ಮತ್ತು ವಿಭೂತಿಗೆ ಅವಕಾಶವಿದೆ. ನಿಯೋಜಿತರಾಗಿರುವ ಅಧಿಕಾರಿ/ಸಿಬ್ಬಂದಿಗಳು ಡ್ರೆಸ್ ಕೋಡ್ ಅಧಿಕಾರಿಗಳು, ಪರೀಕ್ಷೆ ಪ್ರಾರಂಭವಾಗುವ ಮುನ್ನವೇ ನಿಗದಿತ ಪರೀಕ್ಷಾ ಕೊಠಡಿಗೆ ತೆರಳಿ ವರದಿ ಮಾಡಿಕೊಳ್ಳಬೇಕು. ಪ್ರಾಧಿಕಾರವು ನೀಡಿರುವ ಉಡುಪಿನ ಸಂಹಿತೆ ಮತ್ತು ನಿರ್ದೇಶನಗಳಿಗೆ ಅನುಗುಣವಾಗಿ ಅಭ್ಯರ್ಥಿಗಳು ಪಾಲಿಸುತ್ತಿದ್ದಾರೆಯೇ ಎಂಬುದನ್ನು ಸೂಕ್ಷ್ಮವಾಗಿ ಮೇಲ್ವಿಚಾರಣೆ ಮಾಡಬೇಕು. ಸಿಬ್ಬಂದಿಗಳು ಪ್ರಾಧಿಕಾರದ ನಿರ್ದೇಶನದಂತೆ ಅಭ್ಯರ್ಥಿಗಳ ಫ್ರಿಸ್ಕಿಂಗ್ (ಅಂಗಶೋಧನೆ) ಪ್ರಕ್ರಿಯೆಯನ್ನು ಸರಿಯಾಗಿ ನಡೆಸುತ್ತಿರುವುದನ್ನು ಖಾತರಿಪಡಿಸಿಕೊಳ್ಳಬೇಕು ಎಂದರು.

ಪ್ರಾಧಿಕಾರದಿಂದ 'ಫೇಶಿಯಲ್ ರೆಕಗ್ನಿಷನ್' ಸಂಬಂಧ ನಿಯೋಜಿತರಾದ ನೋಡಲ್ ಅಧಿಕಾರಿ ಹಾಗೂ ಸಿಬ್ಬಂದಿಗಳ ಕಾರ್ಯವೈಖರಿಯನ್ನು ಮೇಲ್ವಿಚಾರಣೆ ಮಾಡಬೇಕು. ಕೊಠಡಿಯಲ್ಲಿರುವ ಸಿ.ಸಿ.ಟಿ.ವಿ ಕ್ಯಾಮೆರಾಗಳು ಹಾಗೂ ಇತರ ಸಂಪರ್ಕ ಸಾಧನಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ತಪಾಸಣೆ ಮಾಡಬೇಕು. ಪರೀಕ್ಷಾ ಸಿಬ್ಬಂದಿ, ತಪಾಸಣಾ ತಂಡಗಳು, ಸ್ವಚ್ಛತಾ ಸಿಬ್ಬಂದಿ ಸೇರಿದಂತೆ ಯಾರೂ ಸಹ ಪರೀಕ್ಷಾ ಕೇಂದ್ರ ಅಥವಾ ನಿಷೇಧಿತ ಪ್ರದೇಶಗಳಿಗೆ ಯಾವುದೇ ರೀತಿಯ ಅನಗತ್ಯ ಅಥವಾ ತಾಂತ್ರಿಕ ಸಾಧನಗಳನ್ನು ತೆಗೆದುಕೊಂಡು ಹೋಗದಂತೆ ಕಟ್ಟುನಿಟ್ಟಾಗಿ ತಡೆಯಬೇಕು.

ಯಾವುದೇ ರೀತಿಯ ಭದ್ರತಾ ಲೋಪ ಅಥವಾ ಕಾರ್ಯವಿಧಾನದಲ್ಲಿ ಉಲ್ಲಂಘನೆಗಳು ಕಂಡುಬಂದಲ್ಲಿ ತಕ್ಷಣವೇ ಅದನ್ನು ತಡೆದು, ಈ ಕುರಿತು ಸಂಬಂಧಪಟ್ಟ ಪ್ರಾಧಿಕಾರಕ್ಕೆ ತಕ್ಷಣ ವರದಿ ಮಾಡಬೇಕು. ಪರೀಕ್ಷಾರ್ಥಿಗಳಿಗೆ ಅನುಕೂಲವಾಗುವಂತೆ ಶುದ್ಧ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಸರಿಯಾದ ಬೆಳಕು ಹಾಗೂ ತರಗತಿಗಳಲ್ಲಿ ಗಡಿಯಾರ ಸೇರಿ ಮೂಲಭೂತ ಸೌಕರ್ಯಗಳನ್ನು ಕಡ್ಡಾಯವಾಗಿ ಒದಗಿಸಬೇಕು. ಮಹಿಳಾ ಅಭ್ಯರ್ಥಿಗಳ ಪರಿಶೀಲನೆಗೆ ಪ್ರತ್ಯೇಕ ವ್ಯವಸ್ಥೆ ಮಾಡಬೇಕು ಎಂದು ಸೂಚನೆ ನೀಡಿದರು.

ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಎಲ್ಲಾ ಜೆರಾಕ್ಸ್ ಅಂಗಡಿಗಳು ಹಾಗೂ ಸೈಬರ್ ಕೆಫೆಗಳನ್ನು ಕಡ್ಡಾಯವಾಗಿ ಮುಚ್ಚತಕ್ಕದ್ದು. ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಲು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಲೂ ಸೂಕ್ತ ಭದ್ರತೆ ಒದಗಿಸಲು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ನಿರ್ದೇಶನ ನೀಡಲಾಗಿದೆ. ಪರೀಕ್ಷಾ ನಿಯೋಜಿತ ಎಲ್ಲ ಅಧಿಕಾರಿಗಳು, ಸಿಬ್ಬಂದಿ ಕೆಇಎ ನೀಡಿರುವ ಎಲ್ಲ ಮಾರ್ಗಸೂಚಿ, ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಂಡು ಸರಿಯಾಗಿ ಅರ್ಥಮಾಡಿಕೊಳ್ಳಬೇಕು. ಪರೀಕ್ಷಾ ಕರ್ತವ್ಯದಲ್ಲಿ ಯಾವುದೇ ಗೊಂದಲವಾಗಬಾರದು. ಕೊಠಡಿ ಮೇಲ್ವಿಚಾರಕರಿಗೂ ಸೂಕ್ತ ಮಾರ್ಗದರ್ಶನ ನೀಡಿ ಎಂದು ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ ಅವರು ಮಾತನಾಡಿ, ಆಗಸ್ಟ್ 2 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ಮಿಕ್ಕುಳಿದ ವೃಂದ ಹಾಗೂ ಸಂಜೆ 4 ಗಂಟೆಯಿಂದ 5.30 ರವರೆಗೆ ಸ್ಥಳೀಯ ವೃಂದದ ಪರೀಕ್ಷೆಗಳು ನಡೆಯಲಿವೆ. ಜಿಲ್ಲೆಯ ಕೊಪ್ಪಳ ನಗರ, ಭಾಗ್ಯನಗರ ಹಾಗೂ ಗಂಗಾವತಿಯಲ್ಲಿ ಒಟ್ಟು 24 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮಿಕ್ಕುಳಿದ ವೃಂದದಲ್ಲಿ ಕೊಪ್ಪಳದ 16 ಪರೀಕ್ಷಾ ಕೇಂದ್ರಗಳಲ್ಲಿ 5,480 ಅಭ್ಯರ್ಥಿಗಳು ಹಾಗೂ ಗಂಗಾವತಿಯ 8 ಪರೀಕ್ಷಾ ಕೇಂದ್ರಗಳಲ್ಲಿ 2,665 ಅಭ್ಯರ್ಥಿಗಳು ಸೇರಿದಂತೆ ಒಟ್ಟು 8,145 ಅಭ್ಯರ್ಥಿಗಳು ಹಾಗೂ ಸ್ಥಳೀಯ ವೃಂದದಲ್ಲಿ ಕೊಪ್ಪಳದ 16 ಪರೀಕ್ಷಾ ಕೇಂದ್ರಗಳಲ್ಲಿ 4,922 ಅಭ್ಯರ್ಥಿಗಳು ಮತ್ತು ಗಂಗಾವತಿಯ 4 ಪರೀಕ್ಷಾ ಕೇಂದ್ರಗಳಲ್ಲಿ 1,327 ಅಭ್ಯರ್ಥಿಗಳು ಸೇರಿದಂತೆ ಒಟ್ಟು 6,249 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಎಲ್ಲ ಪರೀಕ್ಷಾ ಕೇಂದ್ರಗಳನ್ನು ಈಗಾಗಲೇ ಪರಿಶೀಲಿಸಲಾಗಿದೆ, ಪರೀಕ್ಷಾ ಕೇಂದ್ರದಲ್ಲಿ ಯಾವುದೇ ಅಕ್ರಮ ನಡೆಯದಂತೆ ಕ್ರಮವಹಿಸಲು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ, ಪ್ರಶ್ನೆ ಪತ್ರಿಕೆಗಳ ಸಾಗಾಣಿಕೆಗೆ ತ್ರಿ ಸದಸ್ಯ ಸಮಿತಿಯನ್ನು ರಚಿಸಲಾಗಿದೆ. ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಮತ್ತು ವೆಬ್‌ಕಾಸ್ಟಿಂಗ್ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಪೊಲೀಸ್ ಇಲಾಖೆಯಿಂದ ವೆಬ್‌ಕ್ಯಾಸ್ಟಿಂಗ್ ಕಾರ್ಯವನ್ನು ಕೈಗೊಳ್ಳಲಾಗುವುದು. ಪ್ರತಿ ಪರೀಕ್ಷಾ ಕೇಂದ್ರಗಳಲ್ಲಿ ಜಾಮರ್‌ಗಳನ್ನು ಅಳವಡಿಸಲಾಗುತ್ತದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರನ್ನು ವೀಕ್ಷಕ ಅಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರನ್ನು ವಸ್ತ್ರ ಸಂಹಿತೆ ಅಧಿಕಾರಿಗಳನ್ನು ನೇಮಕ ಮಾಡಲಾಗಿರುತ್ತದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರನ್ನು ಪ್ರಶ್ನೆ ಪತ್ರಿಕೆ ಪಾಲಕರು ಮತ್ತು ಜಾಗೃತ ದಳದ ಸದಸ್ಯರನ್ನು ನೇಮಕ ಮಾಡಲಾಗಿರುತ್ತದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್‌ಕುಮಾರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರ, ಡಿಡಿಪಿಯು ಜಗದೀಶ್, ಕೊಪ್ಪಳ ಡಿವೈಎಸ್‌ಪಿ ಮುತ್ತಣ್ಣ ಸವರಗೋಳ, ಗಂಗಾವತಿ ಡಿವೈಎಸ್‌ಪಿ ನ್ಯಾಮಗೌಡರ್, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಪರೀಕ್ಷಾ ಕೇಂದ್ರಗಳ ನಿಯೋಜಿತ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಶಿಕ್ಷಕಿ ಪ್ರೇಮಾ ಹರ್ತಿ ಸೇವಾ ನಿವೃತ್ತಿ ವಿದ್ಯಾರ್ಥಿಗಳಿಂದ ಭಾವಪೂರ್ಣ ಬೀಳ್ಕೊಡುಗೆ



• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ನಗರದ ಬೇಲ್ದಾರ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದ ಪ್ರೇಮಾ ಹರ್ತಿ ಅವರು ಜುಲೈ 31ರಂದು ಸೇವಾ ನಿವೃತ್ತಿ ಹೊಂದಿದರು.

ಶಿಕ್ಷಣ ಇಲಾಖೆಯಲ್ಲಿ ಸುದೀರ್ಘ 30 ವರ್ಷಗಳ ಕಾಲ ಕೊಪ್ಪಳ ಜಿಲ್ಲೆಯ ವಿವಿಧೆಡೆ ಸೇವೆ ಸಲ್ಲಿಸಿದ ಅವರು, ಸಾವಿರಾರು ಮಕ್ಕಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಪ್ರಸ್ತುತ ಶಾಲೆಯಲ್ಲಿ ಕಳೆದ 14 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದ ಅವರು, ಮಕ್ಕಳಲ್ಲಿ ನೈತಿಕ ಮೌಲ್ಯಗಳು, ಸ್ವಚ್ಛತೆ, ಶಿಸ್ತು ಹಾಗೂ ನಾಯಕತ್ವ ಗುಣಗಳನ್ನು ಬೆಳೆಸುವಲ್ಲಿ ವಿಶೇಷ ಕಾಳಜಿ ವಹಿಸಿದ್ದರು.

ಮಕ್ಕಳು ಶಿಕ್ಷಣದ ಕಡೆ ಹೆಚ್ಚಿನ ಆಸಕ್ತಿ ತೋರಬೇಕು ಎಂಬ ಉದ್ದೇಶದಿಂದ ಹಲವು ಶೈಕ್ಷಣಿಕ ಹಾಗೂ ಪ್ರೇರಣಾತ್ಮಕ ಕಾರ್ಯಕ್ರಮಗಳನ್ನು ಆಯೋಜಿಸಿ, ಮಕ್ಕಳಿಗೆ ಪ್ರೀತಿ ಮತ್ತು ಕಾಳಜಿಯಿಂದ ಮಾರ್ಗದರ್ಶನ ನೀಡುತ್ತಿದ್ದರು. ಈ ಕಾರಣದಿಂದಲೇ ಅವರು ವಿದ್ಯಾರ್ಥಿಗಳ ನೆಚ್ಚಿನ ಶಿಕ್ಷಕಿಯಾಗಿ ಗುರುತಿಸಿಕೊಂಡಿದ್ದರು.

ಸೇವಾ ನಿವೃತ್ತಿಯ ಸಂದರ್ಭದಲ್ಲಿ ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಶಿಕ್ಷಕಿಗೆ ಹೃದಯಪೂರ್ವಕ ಹಾಗೂ ಭಾವಪೂರ್ಣ ಬೀಳ್ಕೊಡುಗೆ ನೀಡಿದರು. ಈ ಮೂಲಕ ಗುರು–ಶಿಷ್ಯರ ನಡುವಿನ ಆತ್ಮೀಯ ಬಾಂಧವ್ಯದ ಮಹತ್ವವನ್ನು ಸ್ಮರಿಸಿದರು.

ಇದೇ ಸಂದರ್ಭದಲ್ಲಿ ಮಕ್ಕಳಿಗೆ ಸಿಹಿ ಊಟದ ವ್ಯವಸ್ಥೆ ಮಾಡಲಾಗಿದ್ದು, ನೋಟ್‌ಬುಕ್, ಪೆನ್ನು ಹಾಗೂ ಪೆನ್ಸಿಲ್‌ಗಳನ್ನು ವಿತರಿಸಲಾಯಿತು. ಮಹಿಳಾ ಧ್ವನಿ ಸಂಸ್ಥೆ, ಹಿತೈಷಿಗಳು ಹಾಗೂ ಪಾಲಕರ ವತಿಯಿಂದ ಶಿಕ್ಷಕಿ ಪ್ರೇಮಾ ಹರ್ತಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಬಿ.ಎನ್. ಹೊರಪೇಟಿ, ಯಲ್ಲಾಲಿಂಗ ಕತ್ತಿ, ಶಾಲೆಯ ಮುಖ್ಯೋಪಾಧ್ಯಾಯ ಪ್ರಕಾಶ್, ಆನಂದ್, ಸಂತೋಷ್ ಸೇರಿದಂತೆ ಶಿಕ್ಷಕರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶರಣಬಸವ ವಿವಿಯಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳ ಕೌಶಲ್ಯ ವೃದ್ಧಿಗೆ ಡ್ರೋನ್ ಪ್ರಯೋಗಾಲಯ ಸ್ಥಾಪನೆ



• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

: ಇಂಜಿನಿಯರಿಂಗ್ ವಿದ್ಯಾರ್ಥಿಗಳ ಕೌಶಲ್ಯಾಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಶರಣಬಸವ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಬ್ಯಾಂಕ್‌ನ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ನಿಧಿಯಡಿ 12.98 ಲಕ್ಷ ರೂಪಾಯಿಗಳ ನೆರವಿನಿಂದ ಅತ್ಯಾಧುನಿಕ ಡ್ರೋನ್ ಪ್ರಯೋಗಾಲಯವನ್ನು ಶೀಘ್ರದಲ್ಲೇ ಸ್ಥಾಪಿಸಲಾಗುತ್ತಿದೆ.

ಶರಣಬಸವೇಶ್ವರ ಸಂಸ್ಥಾನದ ದಾಸೋಹ ಮಹಾಮನೆಯಲ್ಲಿ ಬುಧವಾರದಂದು ನಡೆದ ಗುರು ಪೂರ್ಣಿಮೆ ಕಾರ್ಯಕ್ರಮದಲ್ಲಿ, ಕರ್ನಾಟಕ ಬ್ಯಾಂಕ್‌ನ ಸಹಾಯಕ ಮಹಾಪ್ರಬಂಧಕರಾದ ಮಲ್ಲನಗೌಡ ಬಿರಾದಾರ ಅವರು 12.98 ಲಕ್ಷ ರೂಪಾಯಿಗಳ ಚೆಕ್ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಡಾ. ದಾಕ್ಷಾಯಿಣಿ ಅವ್ವಾಜಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರಿಗೆ ಅಧಿಕೃತವಾಗಿ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ ಸೇರಿದಂತೆ ವಿಶ್ವವಿದ್ಯಾಲಯದ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಕರ್ನಾಟಕ ಬ್ಯಾಂಕ್‌ನ ಮುಖ್ಯ ವ್ಯವಸ್ಥಾಪಕರಾದ ಶಶಿಕಿರಣ, ಕ್ಲಸ್ಟರ್ ಮುಖ್ಯಸ್ಥ ಹಾಗೂ ಮುಖ್ಯ ವ್ಯವಸ್ಥಾಪಕರಾದ ಕಾಲೋ ಕುಲಕರ್ಣಿ, ಆರ್‌ಎಲ್‌ಪಿಎಸ್‌ಸಿ ಮುಖ್ಯ ವ್ಯವಸ್ಥಾಪಕರಾದ ಜಿ. ಸೋಮಶೇಖರ್ ಹಾಗೂ ಶಾಖಾ ವ್ಯವಸ್ಥಾಪಕರಾದ ಆರ್.ಡಿ. ಗುರುರಾಜ ಸಹ ಉಪಸ್ಥಿತರಿದ್ದರು.


ಸಂಪೂರ್ಣ ಸಜ್ಜಿತ ಡ್ರೋನ್ ಪ್ರಯೋಗಾಲಯವನ್ನು ಸ್ಥಾಪಿಸಲು ಕರ್ನಾಟಕ ಬ್ಯಾಂಕ್ ತನ್ನ ಸಿಎಸ್‌ಆರ್ (ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ) ಯೋಜನೆಯಡಿ ನೀಡಿರುವ 12.98 ಲಕ್ಷ ರೂಪಾಯಿಗಳ ಅನುದಾನಕ್ಕಿಂತ ಹೆಚ್ಚಿನ ಹಣ ವೆಚ್ಚವಾಗಲಿರುವುದರಿಂದ, ಉಳಿದ ಅಗತ್ಯ ವೆಚ್ಚವನ್ನು ಶರಣಬಸವ ವಿಶ್ವವಿದ್ಯಾಲಯವೇ ಭರಿಸಿ, ತನ್ನ ಮುಖ್ಯ ಆವರಣದಲ್ಲಿ ಅತ್ಯಾಧುನಿಕ ಡ್ರೋನ್ ಪ್ರಯೋಗಾಲಯವನ್ನು ಸ್ಥಾಪಿಸಲಿದೆ.

ಡ್ರೋನ್ ಪ್ರಯೋಗಾಲಯ ಸ್ಥಾಪನೆಗಾಗಿ ಬ್ಯಾಂಕ್‌ನ ಸಿಎಸ್‌ಆರ್ ನಿಧಿಯಿಂದ ಅನುದಾನ ಒದಗಿಸಿದ ಹಿನ್ನೆಲೆಯಲ್ಲಿ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ಕರ್ನಾಟಕ ಬ್ಯಾಂಕ್‌ನ ಅಧಿಕಾರಿಗಳನ್ನು ಸನ್ಮಾನಿಸಿ ಕೃತಜ್ಞತೆ ಸಲ್ಲಿಸಿದರು.

ವಿಶ್ವವಿದ್ಯಾಲಯದಲ್ಲಿ ಸ್ಥಾಪನೆಯಾಗಲಿರುವ ಡ್ರೋನ್ ಪ್ರಯೋಗಾಲಯವು ವಿದ್ಯಾರ್ಥಿಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳ ಸಂಶೋಧನೆ ಮತ್ತು ನವೋದ್ಯಮ, ಕೌಶಲ್ಯಾಭಿವೃದ್ಧಿ ಹಾಗೂ ಪಠ್ಯಕ್ರಮ ಆಧಾರಿತ ತಾಂತ್ರಿಕ ತರಬೇತಿಗೆ ಮಹತ್ತರ ಕೊಡುಗೆ ನೀಡಲಿದೆ. ಅತ್ಯಾಧುನಿಕ ತಾಂತ್ರಿಕ ಪ್ರಯೋಗಾಲಯಗಳೊಂದಿಗೆ ಡ್ರೋನ್ ಪ್ರಯೋಗಾಲಯವು ತಂತ್ರಜ್ಞಾನ ಶಿಕ್ಷಣದ ಭವಿಷ್ಯವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವಹಿಸುವುದರ ಜೊತೆಗೆ ವಿವಿಧ ಕ್ಷೇತ್ರಗಳಲ್ಲಿ ವೃತ್ತಿಜೀವನಕ್ಕೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಲಿದೆ.

ಈ ಪ್ರಯೋಗಾಲಯದಲ್ಲಿ ವಿದ್ಯಾರ್ಥಿಗಳು ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಆಧಾರಿತ ಡಿಜಿಟಲ್ ಸ್ವಯಂಚಾಲನಾ ತಂತ್ರಜ್ಞಾನದಲ್ಲಿನ ಪ್ರಾಯೋಗಿಕ ಬೆಳವಣಿಗೆಗಳನ್ನು ಅರಿತುಕೊಳ್ಳಲಿದ್ದು, ಮಾನವರಹಿತ ವೈಮಾನಿಕ ವಾಹನಗಳ ಪರಿಕಲ್ಪನೆ, ಕಾರ್ಯವಿಧಾನ ಹಾಗೂ ಅದಕ್ಕೆ ಸಂಬಂಧಿಸಿದ ಅಲ್ಗಾರಿದಮ್‌ಗಳ ಕುರಿತು ಪ್ರಾಯೋಗಿಕ ಜ್ಞಾನವನ್ನು ಪಡೆಯಲಿದ್ದಾರೆ. ಈ ಡ್ರೋನ್ ಪ್ರಯೋಗಾಲಯದಿಂದ, ಆರಂಭಿಕ ಹಂತದಲ್ಲಿಯೇ ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್, ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಆ್ಯಂಡ್ ಮಷಿನ್ ಲರ್ನಿಂಗ್, ಎಲೆಕ್ಟ್ರಾನಿಕ್ಸ್ ಆ್ಯಂಡ್ ಕಮ್ಯುನಿಕೇಶನ್ ಇಂಜಿನಿಯರಿಂಗ್, ಎಲೆಕ್ಟ್ರಿಕಲ್ ಆ್ಯಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್, ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಆ್ಯಂಡ್ ಡೇಟಾ ಸೈನ್ಸ್, ಮೆಕ್ಯಾನಿಕಲ್ ಇಂಜಿನಿಯರಿಂಗ್, ಸಿವಿಲ್ ಇಂಜಿನಿಯರಿಂಗ್ ಹಾಗೂ ಎನರ್ಜಿ ಇಂಜಿನಿಯರಿಂಗ್ ಸೇರಿದಂತೆ ವಿವಿಧ ವಿಭಾಗಗಳ 1,000 ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೇರ ಪ್ರಯೋಜನ ಪಡೆಯಲಿದ್ದಾರೆ.

# ಹಡಪದ ಅಪ್ಪಣ್ಣನವರ ನೂತನ ವೃತ್ತ ಉದ್ಘಾಟನೆ



• **ಮಲ್ಲಮ್ಮ ನುಡಿ ವಾರ್ತೆ ಕುಕನೂರು**

ತಾಲೂಕಿನ ರಾಜೂರ ಆಡೂರು ಗ್ರಾಮದ ಹಡಪದ ಅಪ್ಪಣ್ಣ ಸಮಾಜದ ಕುಲಬಾಂಧವರು 892ನೇ ಜಯಂತಿ ಹಾಗೂ ಗ್ರಾಮದಲ್ಲಿ ಹಡಪದ ಅಪ್ಪಣ್ಣನವರ ನೂತನ ವೃತ್ತವನ್ನು ಬೈಪಾಸ್ ರಸ್ತೆಯಲ್ಲಿ ನಿರ್ಮಾಣ ಮಾಡಲಾಯಿತು.

ರಾಜೂರು ಆಡೂರು ಗ್ರಾಮದ ಹಡಪದ ಸಮಾಜದವರು ನೂತನ ವೃತ್ತ ನಿರ್ಮಾಣ ಮಾಡಿ ವಿಶೇಷ ಪೂಜೆ ಸಲ್ಲಿಸಿ ವಿಜೃಂಭಣೆಯಿಂದ ನಿಜ ಸುಖಿ ಹಡಪದ ಅಪ್ಪಣ್ಣ ಅವರ ಜಯಂತಿಯನ್ನು ಗ್ರಾಮೀಣ ಮಟ್ಟದಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಸವರಾಜ ಹಡಪದ, ಶರಣಪ್ಪ ಹಡಪದ, ಕಳಕಪ್ಪ ಹಡಪದ, ಈರಣ್ಣ ಹಡಪದ, ಚನ್ನಪ್ಪ ಹಡಪದ ಆದಪ್ಪ ಹಡಪದ, ಶರಣಪ್ಪ ಹಡಪದ, ಹಾಗೂ ಇತರರು ಪಾಲ್ಗೊಂಡಿದ್ದರು.

# ಆಗಸ್ಟ್ 2 ರಂದು ಪೊಲೀಸ್ ಕಾನ್‌ಸ್ಟೇಬಲ್ ಲಿಖಿತ ಪರೀಕ್ಷೆ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ನಿಷೇಧಾಜ್ಞೆ ಜಾರಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯಲ್ಲಿ ಪೊಲೀಸ್ ಕಾನ್‌ಸ್ಟೇಬಲ್ (ಸಿವಿಲ್) ಹುದ್ದೆಗಳ ನೇರ ನೇಮಕಾತಿ ಲಿಖಿತ ಪರೀಕ್ಷೆಯು ಆಗಸ್ಟ್ 2 ರಂದು ನಡೆಯಲಿದ್ದು, ಪರೀಕ್ಷೆಯನ್ನು ಅಕ್ರಮ ಮುಕ್ತವಾಗಿ ಹಾಗೂ ಸುಸೂತ್ರವಾಗಿ ನಡೆಸುವ ಹಿತದೃಷ್ಟಿಯಿಂದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಹೊರಡಿಸಿದ್ದಾರೆ.ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ 2023 ರ ಕಲಂ 163 ರಡಿ ಲಭ್ಯವಿರುವ ಅಧಿಕಾರವನ್ನು ಬಳಸಿ ಈ ಆದೇಶವನ್ನು ಹೊರಡಿಸಲಾಗಿದೆ.

ಅಂದು ಬೆಳಿಗ್ಗೆ 10.30 ರಿಂದ 12 ಗಂಟೆಯ ವರೆಗೆ ಪೊಲೀಸ್ ಕಾನ್‌ಸ್ಟೇಬಲ್ (ಸಿವಿಲ್ – ಮಿಕ್ಕುಳಿದ ವೃಂದ) ಪರೀಕ್ಷೆ ಮತ್ತು ಸಂಜೆ 04 ರಿಂದ 05.30 ಗಂಟೆಯ ವರೆಗೆ ಪೊಲೀಸ್ ಕಾನ್‌ಸ್ಟೇಬಲ್ (ಸಿವಿಲ್ – ಸ್ಥಳೀಯ ವೃಂದ) ಪರೀಕ್ಷೆ ನಡೆಯಲಿವೆ.ಬಳ್ಳಾರಿ ಜಿಲ್ಲೆಯಾದ್ಯಂತ ಒಟ್ಟು 25 ಪರೀಕ್ಷಾ ಕೇಂದ್ರಗಳಲ್ಲಿ ಲಿಖಿತ ಪರೀಕ್ಷೆ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ. ಪರೀಕ್ಷೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲಿನ ಜೆರಾಕ್ಸ್ ಸೆಂಟರ್ ಮತ್ತು ಇಂಟರ್‌ನೆಟ್ ಸೆಂಟರ್‌ಗಳು ಕಾರ್ಯನಿರ್ವಹಿಸದಂತೆ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಈ ಪ್ರದೇಶದಲ್ಲಿ ಅನಧಿಕೃತ ವ್ಯಕ್ತಿಗಳು ಮತ್ತು ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಪ್ರತಿಬಂಧಿಸಲಾಗಿದೆ.

ಈ ನಿಷೇಧಾಜ್ಞೆ ಆದೇಶವು ಪರೀಕ್ಷಾ ಕರ್ತವ್ಯದಲ್ಲಿ ನಿರತರಾಗಿರುವ ಮೇಲ್ವಿಚಾರಕರು ಹಾಗೂ ಸಂಬಂಧಪಟ್ಟ ಸಿಬ್ಬಂದಿಯವರಿಗೆ ಅನ್ವಯಿಸುವುದಿಲ್ಲ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ಸಂಗೀತ ಪರಂಪರೆಯ ಅರಿವಿನಿಂದ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ಹೆಚ್ಚಳ: ವೆಂಕಟೇಶ್



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿದ್ಯಾರ್ಥಿನಿಯರ ಪ್ರತಿಭೆಯನ್ನು ಉತ್ತೇಜಿಸುವ ಹಾಗೂ ಭಾರತೀಯ ಸಂಗೀತ ಪರಂಪರೆಯನ್ನು ತಿಳಿಯಲು ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸುವುದರಿಂದ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ಹೆಚ್ಚಾಗುತ್ತದೆ ಎಂದು ಸಂಡೂರು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯ ನಿರ್ದೇಶಕ ವೆಂಕಟೇಶ್ ಅವರು ಹೇಳಿದರು.

ಸಂಡೂರು ಪಟ್ಟಣದ ಡಾ. ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿನಿಯರಿಗೆ ಗುರುವಾರ ಆಯೋಜಿಸಿದ್ದ 'ಶಾಸ್ತ್ರೀಯ ಸಂಗೀತ' ಕಲಿಕಾ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿನಿಯರು ಶಿಕ್ಷಣದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು. ಶಾಸ್ತ್ರೀಯ ಸಂಗೀತವು ನಮ್ಮ ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಭಾಗವಾಗಿದ್ದು, ವಿದ್ಯಾರ್ಥಿನಿಯರಲ್ಲಿ ಶಿಸ್ತು, ಏಕಾಗ್ರತೆ ಹಾಗೂ ಆತ್ಮವಿಶ್ವಾಸವನ್ನು ಬೆಳೆಸಲು ಸಹಕಾರಿಯಾಗಿದೆ ಎಂದು ತಿಳಿಸಿದರು.

ಈ ತರಬೇತಿಯಿಂದ ವಿದ್ಯಾರ್ಥಿನಿಯರಲ್ಲಿರುವ ಸಂಗೀತ ಪ್ರತಿಭೆ ಹೊರಹೊಮ್ಮಲು ಹಾಗೂ ರಾಜ್ಯ, ರಾಷ್ಟ್ರ ಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅವಕಾಶ ಸಿಗಲಿದೆ. ವಿದ್ಯಾರ್ಥಿನಿಯರ ಪ್ರತಿಭೆ ಅನಾವರಣಕ್ಕೆ ಶಾಸ್ತ್ರೀಯ ಸಂಗೀತ ತರಬೇತಿ ಸಹಕಾರಿ ಆಗಲಿದೆ ಎಂದು ತಿಳಿಸಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ್ ಅವರು ಸ್ವಾಗತ ಮತ್ತು ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕ ನುಡಿಗಳಾನ್ನಾಡಿದರು.ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನೇತ್ರಾವತಿ, ಬಿ.ತಾಯಪ್ಪ, ವಿಠಲ್, ರಾಜೇಶ್, ಆಸಿಯಾ ಸೇರಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗ ಹಾಜರಿದ್ದರು.

# ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದಿಂದ ವಯೋನಿವೃತ್ತ ಅಧಿಕಾರಿ, ಸಿಬ್ಬಂದಿಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ವತಿಯಿಂದ ಸುದೀರ್ಘ ಹಾಗೂ ಶ್ಲಾಘನೀಯ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಶುಕ್ರವಾರ ಸನ್ಮಾನಿಸಿ ಗೌರವಿಸಲಾಯಿತು.

ಸಾರ್ವಜನಿಕ ಸೇವೆಯಲ್ಲಿ ತಮ್ಮದೇ ಆದ ವಿಶಿಷ್ಟ ಕೊಡುಗೆ ನೀಡಿ, ಯಶಸ್ವಿಯಾಗಿ ಸೇವಾ ಅವಧಿಯನ್ನು ಪೂರೈಸಿದ ನಿವೃತ್ತ ನೌಕರರನ್ನು ಒಕ್ಕೂಟದ ಪದಾಧಿಕಾರಿಗಳು ಆತ್ಮೀಯವಾಗಿ ಬೀಳ್ಕೊಟ್ಟರು.

ಬಿ. ಶ್ರೀಕಂಠಸ್ವಾಮಿ ಅವರು, ಜಿಲ್ಲಾ ಯೋಜನಾ ನಿರ್ದೇಶಕರ ಕಚೇರಿಯ ಕಾರ್ಯಪಾಲಕ ಅಭಿಯಂತರರಾಗಿ (ಇಇ) ಬರೋಬ್ಬರಿ 33 ವರ್ಷಗಳ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾಗಿದ್ದು, ಅವರ ದಕ್ಷ ಸೇವೆಯನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಅದೇರೀತಿಯಾಗಿ ಪುಷ್ಪಾವತಿ ಅವರು, ಜಿಲ್ಲಾ ಖಜಾನೆ ಇಲಾಖೆಯಲ್ಲಿ ಪ್ರಥಮ ದರ್ಜೆ ಸಹಾಯಕಿಯಾಗಿ (ಎಫ್‌ಡಿಎ) 22 ವರ್ಷಗಳ ಕಾಲ ನಿಷ್ಠೆಯಿಂದ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ್ದು, ಅವರ ಸೇವೆಯನ್ನು ಸನ್ಮಾನಿಸಿ ಗೌರವಿಸಲಾಯಿತು.

ಸರ್ಕಾರಿ ಸೇವೆಯಲ್ಲಿ ಸಾರ್ವಜನಿಕರ ಹಿತಕ್ಕಾಗಿ ದೀರ್ಘಕಾಲ ಶ್ರಮಿಸಿ, ಕಳಂಕವಿಲ್ಲದೆ ನಿವೃತ್ತಿ ಹೊಂದುವುದು ಹೆಮ್ಮೆಯ ವಿಷಯ. ನಿವೃತ್ತರಾದ ಅಧಿಕಾರಿಗಳು ಮತ್ತು ಸಿಬ್ಬಂದಿಯ ಮುಂದಿನ ಜೀವನ ಸುಖಕರ ಮತ್ತು ಆರೋಗ್ಯದಾಯಕವಾಗಿರಲಿ ಎಂದು ಒಕ್ಕೂಟದ ಪ್ರಮುಖರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ವಿವಿಧ ಪದಾಧಿಕಾರಿಗಳು, ಇಲಾಖೆಯ ಸಿಬ್ಬಂದಿ ಹಾಗೂ ಬಂಧುಮಿತ್ರರು ಉಪಸ್ಥಿತರಿದ್ದು, ನಿವೃತ್ತರಿಗೆ ಹೂಮಾಲೆ ಹಾಕಿ ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

# ನೀಟ್ (UG)-2026: 150ನೇ ರ್‍ಯಾಂಕ್: ಎನ್. ಸಾಯಿ ಶ್ರಾವ್ಯಗೆ ಬಿಡಿಸಿಸಿಐನಿಂದ ಅಭಿನಂದನೆ




ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನೀಟ್ (UG)-2026 ಪರೀಕ್ಷೆಯಲ್ಲಿ 150ನೇ ರ್‍ಯಾಂಕ್ ಗಳಿಸಿರುವ ಬಳ್ಳಾರಿಯ ವಿದ್ಯಾರ್ಥಿನಿ ಎನ್. ಸಾಯಿ ಶ್ರಾವ್ಯ ಅವರನ್ನು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಶುಕ್ರವಾರ ಸನ್ಮಾನಿಸಿ ಅಭಿನಂದಿಸಿದೆ.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಹಾಗೂ ಗೌರವ ಕಾರ್ಯದರ್ಶಿಗಳಾದ ಕೆ. ಸಿ. ಸುರೇಶಬಾಬು ಅವರು, ಎನ್. ಸಾಯಿ ಶ್ರಾವ್ಯ ಅವರಿಗೆ ಅಭಿನಂದನೆ ಸಲ್ಲಿಸಿ, ವೈದ್ಯಕೀಯ ಶಿಕ್ಷಣದಲ್ಲಿ ಉತ್ತಮ ಸಾಧನೆ ಮಾಡಿ, ಜನಸೇವೆಗೆ ಅರ್ಪಣೆಗೊಳ್ಳಬೇಕು ಎಂದು ಹಾರೈಸಿದರು.

ಅಭಿನಂದನೆಗಳನ್ನು ಸ್ವೀಕರಿಸಿ ಮಾತನಾಡಿದ ಎನ್. ಸಾಯಿ ಶ್ರಾವ್ಯ ಅವರು, ಬಿಡಿಸಿಸಿಐನಲ್ಲಿ ಅಭಿನಂದನೆಗಳನ್ನು ಸ್ವೀಕರಿಸುತ್ತಿರುವುದಕ್ಕೆ ಖುಷಿಯಾಗುತ್ತಿದೆ. ಹೆಮ್ಮೆ ಅನಿಸುತ್ತಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುವ ವಿಶ್ವಾಸವಿದೆ ಎಂದು ಹೇಳಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಎಸ್. ದೊಡ್ಡನಗೌಡ, ಉಪಾಧ್ಯಕ್ಷರಾದ ಪಿ. ಪಾಲಣ್ಣ, ಜಂಟಿ ಕಾರ್ಯದರ್ಶಿಗಳಾದ ವಿ. ರಾಮಚಂದ್ರ, ಖಜಾಂಚಿಗಳಾದ ಸಿ.ಎಸ್. ಸತ್ಯನಾರಾಯಣ, ಮಾಜಿ ಅಧ್ಯಕ್ಷರಾದ ಬಿ. ಮಹಾರುದ್ರ ಗೌಡ, ಸಿ. ಶ್ರೀನಿವಾಸರಾವ್, ಡಾ. ಡಿ. ಎಲ್. ರಮೇಶ್ ಗೋಪಾಲ್, ವಿವಿಧ ಕಮಿಟಿಗಳ ಅಧ್ಯಕ್ಷರು, ವಿಶೇಷ ಆಹ್ವಾನಿತರು ಹಾಗೂ ವಿಶೇಷ ಸಮನ್ವಯ ಸಮಿತಿ ಸದಸ್ಯರು ಉಪಸ್ಥಿತರಿದ್ದು ಎನ್. ಸಾಯಿ ಶ್ರಾವ್ಯ ಅವರನ್ನು ಅಭಿನಂದಿಸಿದರು.

# ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನಿಗಾವಹಿಸಿ:ತಹಶೀಲ್ದಾರ್‌ನರಸಪ್ಪ

• ಮಲ್ಲಮ್ಮ ನುಡಿ ವಾರ್ತೆಕುರುಗೋಡು




ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಮಳೆಕೊರತೆ ಆಗಿದ್ದರಿಂದ ಬರಗಾಲ ಆವರಿಸಿದೆ. ಇದರಿಂದ ಜನ ಮತ್ತು ಜಾನುವಾರುಗಳಿಗೆ ಕುಡಿಯುವನೀರು, ಮೇವು ಪೂರೈಕೆ ಮಾಡಿ ಸಮಸ್ಯೆ ಬಾರದಂತೆ ತಾಲೂಕು ಮಟ್ಟದ ಅಧಿಕಾರಿಗಳು ನಿಗಾವಹಿಸಿ ಕೆಲಸಮಾಡಬೇಕೆಂದು ಕುರುಗೋಡು ತಹಶೀಲ್ದಾರ್ ನರಸಪ್ಪ ಅಧಿಕಾರಿಗಳಿಗೆ ಖಡಕ್ ಸಂದೇಶ ನೀಡಿದರು.

ಅವರು ಪಟ್ಟಣದ ತಹಶೀಲ್ದಾರ್ ಸಭಾಂಗಣದಲ್ಲಿ ಬರಗಾಲ ಹಿನ್ನಲೆಯಲ್ಲಿ ಕರೆಯಲಾಗಿದ್ದ ತಾಲೂಕುಮಟ್ಟದ ಬರನಿರ್ವಹಣಾ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಲ್ಲದೆ ಇತರೆ ವಿವಿದ ಇಲಾಖೆಯ ತಾಲೂಕುಮಟ್ಟದ ಅದಿಕಾರಿಗಳು ತಾಲೂಕಿನಲ್ಲಿ ಯಾವುದೇ ಸಮಸ್ಯೆ ಬಾರದಂತೆ ಬರಪರಿಸ್ಥಿತಿ ಎದುರಿಸಲು ತುರ್ತಾಗಿ ಕಾರ್ಯನಿರ್ವಹಿಸಲು ಸನ್ನದ್ದರಾಗಿ ಎಂದು ಸೂಚನೆ ನೀಡಿದರು.ಕುರುಗೋಡು ಪುರಸಭೆ ಮುಖ್ಯಾಧಿಕಾರಿ ದತ್ತಾತ್ರೇಯಹೆಗೆಡೆ ಅವರು ಮಾತನಾಡಿ, ಕುರುಗೋಡು ಪುರಸಭೆ ಎಲ್ಲಾ 23 ವಾರ್ಡುಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕೆರೆಯನ್ನು ಈಗಾಗಲೆ ತುಂಬಿಸಲಾಗಿದೆ. ಜೊತೆಗೆ ಆರ್‌ಒ. ಪ್ಲಾಂಟುಗಳು ಸಹ ಯಾವುದೆ ಸಮಸ್ಯೆ ಇಲ್ಲದಂತೆ ಕಾರ್ಯನಿರ್ವಹಿಸುತ್ತಿವೆ. ಮತ್ತು ನಲ್ಲಿಯಲ್ಲಿ ನೀರನ್ನು ವ್ಯರ್ಥವಾಗದಂತೆ ನಿಗಾವಹಿಸಿ ನೀರನ್ನು ಮಿತವಾಗಿ ಬಳಸಿ, ಸಂರಕ್ಷಣೆಗೆ ಮುಂದಾಗಬೇಕೆಂದು ಕರೆನೀಡಿದರು. ಕುರುಗೋಡು ಜೆಸ್ಕಾ ಎಇಇ ಶೇಕ್‌ಮೊಹಮ್ಮದ್‌ಜಾಫರ್ ಅವರು ತಾಲೂಕಿನಲ್ಲಿ ಕುಡಿಯುವನೀರಿನ ಕೆರೆಗಳಿಗೆ ಮತ್ತು ಆರ್‌ಒ. ಪ್ಲಾಂಟುಗಳಿಗೆ ವಿದ್ಯುತ್‌ಸಂಪರ್ಕದಲ್ಲಿ ಸಮಸ್ಯೆಯಾಗದಂತೆ ನಿವಾವಹಿಸಿ ಕೆಲಸಮಾಡುತ್ತೇನೆ ಎಂದು ಭರವಸೆ ನೀಡಿದರು.

ಕುರುಗೋಡು ತಾಲೂಕು ವೈದ್ಯಾಧಿಕಾರಿ ಡಾ.ಮಂಜುನಾಥಜವಳಿ ಅವರು ಮಾತನಾಡಿ, ಬರಗಾಲ ಮತ್ತು ಮಳೆಗಾಲ ಇದ್ದರೂ ಗ್ರಾಮೀಣ ಪ್ರದೇಶಗಳಲ್ಲಿನ ಚರಂಡಿಗಳು ಸ್ವಚ್ಚತೆಗಾಗಿ ಬ್ಲೀಚಿಂಗ್‌ಪೌಡರ್ ಸಿಂಪಡಿಸಿ, ಸಾಂಕ್ರಾಮಿಕರೋಗಗಳನ್ನು ತಡೆಗಟ್ಟವುದಕ್ಕೆ ಮುಂಜಾಗ್ರತಕ್ರಮಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ನುಡಿದರು. ಕೃಷಿ ಇಲಾಖೆಯ ಅಧಿಕಾರಿ ಎಂ.ದೇವರಾಜ ಹಾಗು ತೋಟಗಾರಿಕೆ ಸಹಾಯಕನಿರ್ದೇಶಕ ಶಂಕರ್ ಅವರು ರೈತರಿಗೆ ಇಲಾಖೆಯಿಂದ ತೊಂದರೆಯಾಗದಂತೆ ನಿಗಾವಹಿಸಿ ಕೆಲಸಮಾಡುವುದಾಗಿ ತಿಳಿಸಿದರು. ಅಲ್ಲದೆ ಕುರುಗೋಡು ತಾಪಂ. ಕಾರ್ಯನಿರ್ವಾಹಕ ಅಧಿಕಾರಿ ಪೊಂಪಾಪತಿಹಿರೇಮಠ್ ಅವರು ಮಾತನಾಡಿ, ತಾಲೂಕಿನ ಎಲ್ಲಾ ಗ್ರಾಪಂ ಪಿಡಿಒಗಳಿಗೆ ಆಯಾ ಗ್ರಾಪಂವ್ಯಾಪ್ತಿಯಲ್ಲಿ ಬರುವ ಕುಡಿಯುವನೀರಿನ ಕೆರೆಗಳನ್ನು ತುಂಬಿಸಬೇಕು, ಜಾನುವಾರುಗಳಿಗೆ ಕುಡಿಯುವನೀರಿನ ತೊಟ್ಟಿಗಳನ್ನು ನಿರ್ಮಾಣ ಮಾಡಬೇಕೆಂದು ಸೂಚನೆ ನೀಡಿದರು. ಒಟ್ಟಾರೆ ಬರಗಾಲದಲ್ಲಿ ತಾಲೂಕುಮಟ್ಟದ ಎಲ್ಲಾ ಇಲಾಖೆಯ ಅಧಿಕಾರಿಗಳು ಜನರಿಗೆ ಸಮಸೆಯಾಗದಂತೆ ನಿಗಾವಹಿಸಿ ಬರನಿರ್ವಹಣಾ ಕ್ರಮಗಳನ್ನು ಅನುಸರಿಸಲು ಎಲ್ಲರೂ ಸಿದ್ದರಾಗೋಣ ಎಂದು ಕುರುಗೋಡು ತಾಹಶೀಲ್ದಾರ ನರಸಪ್ಪ ಅವರು ತಿಳಿಸಿದರು. ಗ್ರೇಡ್2 ತಹಶೀಲ್ದಾರ ಮಲ್ಲೇಶಪ್ಪ,ಶಿರಸ್ತೆದಾರ್ ವಿಜಯಕುಮಾರ್,ಆರ್‌ಐ.ಸುರೇಶ, ಆರ್‌ಐ.ಭದ್ರಯ್ಯಸ್ವಾಮಿ, ಸೇರಿದಂತೆ ಗ್ರಾಪಂ. ಪಿಡಿಒಗಳು, ತಾಲೂಕಿನ ಎಲ್ಲಾ ಗ್ರಾಮಲೆಕ್ಕಾಧಿಕಾರಿಗಳು, ಇತರೆ ತಾಲೂಕುಮಟ್ಟದ ಅಧಿಕಾರಿಗಳು ಇದ್ದರು

# ಸರ್ಕಾರಿ ಪ್ರೌಢಶಾಲೆ ಮುಧೋಳ (ಬಿ) ಯಲ್ಲಿ ನೂತನ ಎಸ್.ಡಿ.ಎಮ್.ಸಿ ಸಮಿತಿ ರಚನೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಸರ್ಕಾರಿ ಪ್ರೌಢಶಾಲೆ ಮುಧೋಳ (ಬಿ) ಯಲ್ಲಿ ನೂತನ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಯನ್ನು ಯಶಸ್ವಿಯಾಗಿ ರಚಿಸಲಾಯಿತು.

ಶಾಲೆ ಆವರಣದಲ್ಲಿ ಜರುಗಿದ ಈ ಸಭೆಯಲ್ಲಿ ಸುಮಾರು 75ಕ್ಕೂ ಹೆಚ್ಚು ಪೋಷಕರು ಹಾಗೂ ಗ್ರಾಮದ ಮುಖಂಡರು ಭಾಗವಹಿಸಿದ್ದರು. ಸಭೆಯಲ್ಲಿ ಎಲ್ಲರ ಸಮ್ಮತಿಯೊಂದಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಎಸ್.ಡಿ.ಎಮ್.ಸಿ ನೂತನ ಪದಾಧಿಕಾರಿಗಳ ವಿವರ:ಅಧ್ಯಕ್ಷರು: ದತ್ತು ತಂದೆ ಹಣಮಂತ

ಉಪಾಧ್ಯಕ್ಷರು: ಸುನೀತಾ ಗಂಡ ಬೀರೇಂದ್ರವಾಡೆ

ಸದಸ್ಯರು: ಅನೀಸಾ ಬೇಗಂ ಹೈದರ್ ಸಾಬ್ ಶೇಖ್, ಪ್ರೇಮಿಲಾ ಸಂಜೂಕುಮಾರ, ಮೀನಾಕ್ಷಿ ಮಿಲಿಂದ್‌ಕುಮಾರ, ನಟರಾಜ ಧನರಾಜು ಶಿಂದೆ,ರಾಜಕುಮಾರ ಹಣಮಂತ ದಿನಕರ,ಶಿವಾನಂದ ತಂದೆ ನಾಗನಾಥ ಗುಂಡಹಳ್ಳಿ, ಅಂಕೋಶಾ ತಂದೆ ರಾಜಾರಾಮ, ಸೇರಿದಂತೆ ಇನ್ನಿತರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಪಿ. ಡಿ. ಯೋ ದತ್ತಾತ್ರೇಯ ಪೂಜಾರಿ, ಶಾಲೆಯ ಮುಖ್ಯ ಶಿಕ್ಷಕರಾದ ಶ್ರೀಮತಿ ಸ್ವರೂಪರಾಣಿ ಬಿ. ಬೋರೆ ಹಾಗೂ ಶಾಲೆಯ ಸಿಬ್ಬಂದಿ ವರ್ಗದವರು, ಗ್ರಾಮದ ಪ್ರಮುಖರಾದ ನಾಗಯ್ಯ ಸ್ವಾಮಿ, ಧನರಾಜು ಶಿಂದೆ, ಶೋಮುನಾಥ ಸ್ವಾಮಿ, ಬಸವರಾಜ ವಾಂಚೆ, ಬದ್ರಿ ಕೊಲಶೆಟ್ಟಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಭೇದಭಾವವಿಲ್ಲದೇ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕರೆ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ



ವ್ಯಾಜ್ಯಗಳ ವಿರುದ್ಧ ಹೋರಾಡಲು ಬಲವಿಲ್ಲದ ಬಡವರು, ಶ್ರಮಿಕರು ಸೇರಿದಂತೆ ಇತರೆ ಸಾಮಾನ್ಯಜನರ ಪ್ರಕರಣಗಳನ್ನು ಅತೀ ಶೀಘ್ರದಲ್ಲಿ ಇತ್ಯರ್ಥಪಡಿಸಬೇಕು ಎಂದು ಮಾಜಿ ಸಚಿವ ಕೆ.ವೆಂಕಟೇಶ್ ತಿಳಿಸಿದರು.ಪಟ್ಟಣದ ವಕೀಲರ ಸಂಘದ ಆವರಣದಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿಯ ಅನುದಾನದಲ್ಲಿ ವಾಹನ ನಿಲುಗಡೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದರು ಕಾರ್ಯಾಂಗ ಮತ್ತು ಶಾಸಕಾಂಗವನ್ನು ಸರಿ ದಾರಿಗೆ ತರಲು ನ್ಯಾಯಾಂಗಕ್ಕೆ ಹೆಚ್ಚಿನ ಜವಾಬ್ದಾರಿ ಇದೆ. ನ್ಯಾಯಾಂಗ ಸರಿಯಾಗಿದ್ದರೆ ದೇಶದಲ್ಲಿ ಶಾಂತಿ ಸದಾ ಇರುತ್ತೇವೆ. ನಮ್ಮ ಸರ್ಕಾರದ ಅವಧಿಯಲ್ಲಿ ನ್ಯಾಯಾಂಗ ಇಲಾಖೆಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲು ಆದ್ಯತೆ ನೀಡಲಾಗಿದೆ. ದೀರ್ಘಕಾಲದಿಂದ ನ್ಯಾಯಾಲಯಗಳಲ್ಲಿ ಬಾಕಿ ಇರುವ ಬಡವರ ವ್ಯಾಜ್ಯಗಳನ್ನು ಆರು ತಿಂಗಳಲ್ಲಿ ತ್ವರಿತವಾಗಿ ವಿಲೇವಾರಿ ಮಾಡುವ ಸಿವಿಲ್ ಪ್ರಕ್ರಿಯಾ ಸಂಹಿತಾ (ಕರ್ನಾಟಕ ತಿದ್ದುಪಡಿ) ವಿಧೇಯಕ– 2023 ಕ್ಕೆ ರಾಷ್ಟ್ರಪತಿಗಳು ಅಂಕಿತ ಹಾಕುವ ಮೂಲಕ ಬಡವರಿಗೆ ಅನುಕೂಲ ಕಲ್ಪಿಸಲಾಗಿದೆ. ಇಲ್ಲಿನ ಸಿವಿಲ್ ಶ್ರೇಣಿಯ ನ್ಯಾಯಾಲಯದಲ್ಲಿ ಹೆಚ್ಚಿನ ಹಳೆಯ ಪ್ರಕರಣಗಳು ಬಾಕಿ ಇವೆ. ಇವುಗಳು ಶೀಘ್ರವಾಗಿ ಇತ್ಯರ್ಥವಾದರೆ ಬಡವರು, ಸಣ್ಣ ಮತ್ತು ಅತಿ ಸಣ್ಣ ರೈತರು, ಜನರು ಹಾಗೂ ಕಾರ್ಮಿಕರು ಸೇರುವಂತೆ ಇತರೆ ಜನಸಾಮಾನ್ಯರಿಗೆ ಅನುಕೂಲವಾಗುತ್ತದೆ. ಇಂಥ ಹಳೆಯ ಪ್ರಕರಣಗಳ ಶೀಘ್ರ ಇತ್ಯರ್ಥ್ಯಕ್ಕೆ ನ್ಯಾಯಾಲಯದ ಜೊತೆಗೆ ವಕೀಲರು ಸಹಕರಿಸಬೇಕು. ವಕೀಲರು ಯಾವುದೇ ಒಳಒಪ್ಪಂದಕ್ಕೆ ಹೊಂದಾಣಿಕೆ ಮಾಡಿಕೊಳ್ಳದೇ ಕಕ್ಷಿದಾರರಿಗೆ ನ್ಯಾಯ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ವಕೀಲರಿಗೆ ಬುದ್ದಿವಂತಿಕೆಯ ಜೊತೆಗೆ ಹೃದಯವಂತಿಕೆಯೂ ಇರಬೇಕು ಎಂದರು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಧನಪಾಲ್ ಮಾತನಾಡಿ ಮಾನ್ಯ ಶಾಸಕರಾದ ಕೆ.ವೆಂಕಟೇಶ್ ರವರು ವಕೀಲರ ಬೇಡಿಕೆಗಳಿಗೆ ಸದಾ ಸ್ಪಂದಿಸುತ್ತಾ ಬಂದಿದ್ದಾರೆ. ಇವರು 2013–2018 ರವರಿಗೆ ಶಾಸಕರಾಗಿದ್ದ ಸಂದರ್ಭದಲ್ಲಿ ಪಿರಿಯಾಪಟ್ಟಣ ಜೆಎಂಎಫ್ಸಿ ನ್ಯಾಯಾಲಯಕ್ಕೆ ನೂತನ ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡಿ ಬೃಹತ್ ಮತ್ತು ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲಾಯಿತು ಈ ಮತ್ತೆ ಅವರ ಅವಧಿಯಲ್ಲಿಯೇ ವಕೀಲರ ಸಂಘದ ಆವರಣದಲ್ಲಿ ವಾಹನ ನಿಲುಗಡೆ ಕಟ್ಟಡ ನಿರ್ಮಾಣವಾಗುತ್ತಿರುವುದು ಸಂತಸ ತಂದಿದೆ ಮುಂದಿನ ದಿನಗಳಲ್ಲಿಯೂ ವೆಂಕಟೇಶ್ ರವರು ವಕೀಲರಿಗೆ ಅಗತ್ಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.ಕಾರ್ಯಕ್ರಮದಲ್ಲಿ ಜೆಎಂಎಫ್ಸಿ ನ್ಯಾಯಾಲಯದ ಹಿರಿಯ ಶ್ರೇಣಿ ನ್ಯಾಯಾಧೀಶರಾದ ಎಂ.ರಾಜು,ಸಿವಿಲ್ ಶ್ರೇಣಿ ನ್ಯಾಯಾಧೀಶರಾದ ಎಸ್.ಎಂ.ಧನುರಾಜ್, ಹೆಚ್ಚುವರಿ ಸಿವಿಲ್ ಶ್ರೇಣಿ ನ್ಯಾಯಾಧೀಶರಾದ ಎಂ.ಎಸ್.ವಿದ್ಯಾ, ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಎಂಡಿಸಿಸಿ ಬ್ಯಾಂಕ್ ನಿರ್ದೇಶಕ ಈಚೂರು ಲೋಕೇಶ್, ತಾಲ್ಲೂಕು ವಕೀಲರ ಸಂಘದ ಕಾರ್ಯದರ್ಶಿ ಆಯಿತನಹಳ್ಳಿ ಶಂಕರ್, ಖಜಾಂಚಿ ಜಿ.ಬಸವನಹಳ್ಳಿ ಹರೀಶ್, ಉಪಾಧ್ಯಕ್ಷ ಚಂದ್ರೇಗೌಡ, ಜಂಟಿ ಕಾರ್ಯದರ್ಶಿಗಳಾದ ಗುರುಪ್ರಸಾದ್, ಐ.ಜಿ.ರಘುರಾಮ್, ಮಾಜಿ ಅಧ್ಯಕ್ಷರಾದ ಎಸ್.ಎಂ.ಪುರುಷೋತ್ತಮ್,ಕೆ.ಭಾಸ್ಕರ್ , ಬಿ.ಜಿ.ಸತೀಶ್, ಬಿ.ಎಂ.ಕುಮಾರ್, ವಕೀಲರಾದ ಗೋವಿಂದೇಗೌಡ, ಸುದೀಶ್, ಜಗದೀಶ್, ಮಾಯಿಗೌಡ, ಮಾದೇಗೌಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ವೈಭವದಿಂದ ಜರುಗಿದ ಗುರು ಪೂರ್ಣಿಮೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ




ತಾಲೂಕಿನ ಜಲಸಂಗಿ ಗ್ರಾಮದ ಶ್ರೀ ಬಾಬುರಾವ ಮಹಾರಾಜರು ನಂದಿ ಬಸವಣ್ಣ ಗುಡ್ಡದಲ್ಲಿ ಗುರು ಪೂರ್ಣಿಮೆ ಪ್ರಯುಕ್ತ ಸಂಗೀತ ಕಾರ್ಯಕ್ರಮ ಹಾಗೂ ಕುವೆಂಪು ಅವರ ಸಾಹಿತ್ಯ ಕವಿ ಗೋಷ್ಠಿ ಕಾರ್ಯಕ್ರಮ ಬಾಬುರಾವ್ ಮಹಾರಾಜರು ಉದ್ಘಾಟಿಸಿ, ಮಾತನಾಡಿದರು. ಸುಗಮ ಸಂಗೀತ ಗೀತೆಯನ್ನು ಕಲ್ಯಾಣ ಕರ್ನಾಟಕ ಖ್ಯಾತ ಕಲಾವಿದ ಮಂಜುನಾಥ್ ಜಲಸಂಗಿ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಡಾ. ಸಿದ್ರಾಮ ವಾಘಮಾರೆ, ಹಣಮಂತ ಘಾಟಬೋರಳ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಎಲ್ಲ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ವಿಬಿಜಿ ರಾಮ್ ಜಿ ಅನುಷ್ಠಾನ ಹಾಗೂ ಗುಳೆ ತಡೆ ಕುರಿತಂತೆ ಸಭೆ ನಡೆಸಿದರು. ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್, ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ, ಆಯುಕ್ತರಾದ ದಿವ್ಯಪ್ರಭು ಮತ್ತಿತರರು ಪಾಲ್ಗೊಂಡಿದ್ದರು.

## 13.51ಲಕ್ಷ ಗಣತಿ ನಮೂನೆ ಡಿಜಿಟಲೀಕರಣ



**ಬಾಗಲಕೋಟೆ:** ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಜುಲೈ 30 ವರೆಗೆ ಒಟ್ಟು 13,51,461 ಗಣತಿ ನಮೂನೆಗಳ ಡಿಜಿಟಲೀಕರಣವಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಮತದಾರರ ಪಟ್ಟಿಗಳ ವಿಶೇಷ ಪರಿಷ್ಕರಣೆ ಪ್ರಗತಿ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಲ್ಲಿಯವರೆಗೆ ಆಗಿರುವ ಪ್ರಗತಿಯ ಮಾಹಿತಿಯನ್ನು ತಿಳಿಸಿದರು. ಜಿಲ್ಲೆಯ 7 ಮತಕ್ಷೇತ್ರಗಳಿಗೆ ಸಂಬಂಧಿಸಿದಂತೆ ಒಟ್ಟು 16,31202 ಮತದಾರರಿದ್ದು, ಈ ಎಲ್ಲ ಮತದಾರರ ಮುದ್ರಿತವಾಗಿರುವ ಗಣತಿ ನಮೂನೆಗಳನ್ನು ಈಗಾಗಲೇ ಸಂಬಂಧಪಟ್ಟ ಬೂತ್ ಮಟ್ಟದ ಅಧಿಕಾರಿಗಳಿಂದ ವಿತರಿಸಲಾಗಿದೆ. ಇಲ್ಲಿಯವರೆಗೆ ಒಟ್ಟು 13,51,461 ಗಣತಿ ನಮೂನೆಗಳನ್ನು ಡಿಜಿಟಲೀಕರಣ ಮಾಡಲಾಗಿದ್ದು, 91,187 ಡಿಜಿಟಲೀಕರಣಕ್ಕೆ ಬಾಕಿ ಉಳಿದಿವೆ ಎಂದು ತಿಳಿಸಿದರು.

ಪ್ರತಿದಿನ ಬಿಎಲ್‌ಓಗಳು ಭೌತಿಕ ಪರಿಶೀಲನೆಯೊಂದಿಗೆ ಗುರುತಿಸಿದ ಗೈರು, ಸ್ಥಳಾಂತರ, ನಿಧನ ಡ್ಯೂಪ್ಲಿಕೇಟ ಆದಂತಹ ಮತದಾರರ ವಿವರಗಳನ್ನು ತಮ್ಮ ಆಪ್‌ನಲ್ಲಿ ಅಪ್ಲೋಡ್ ಮಾಡಿರುತ್ತಾರೆ. ಪರಿಶೀಲನೆ ಕಾರ್ಯದಲ್ಲಿ ಒಟ್ಟು 10840 ಗೈರು ಮತದಾರರು ಇದ್ದು, ಸ್ಥಳಾಂತರಗೊಂಡ ಮತದಾರರ ಸಂಖ್ಯೆ 1,13,690, ನಿಧನ ಹೊಂದಿರುವ ಮತದಾರರ ಸಂಖ್ಯೆ 41,239 41239, ಡ್ಯೂಪ್ಲಿಕೇಟ್ ಮತದಾರರ ಸಂಖ್ಯೆ 21985,ಇತರೆ 827 ಮತದಾರರು ಇದ್ದಾರೆ. ಬಿಎಲ್‌ಓಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ನಿಮ್ಮ ಪಕ್ಷದ ವತಿಯಿಂದ ನೇಮಿಸಿದ ಮತಗಟ್ಟೆ ಮಟ್ಟದ ಏಜೆಂಟರುಗಳಿಗೆ ಭಾಗವಾರು ಎ.ಎಸ್.ಡಿಗಳ ಸಂಪೂರ್ಣ ಮಾಹಿತಿಯನ್ನು ನೀಡಿದ್ದಾರೆ. ಎ.ಎಸ್.ಡಿ.ಡಿ ಪಟ್ಟಿಯಲ್ಲಿ ಯಾವುದೇ ರೀತಿಯ ಆಕ್ಷೇಪಣೆಗಳು ಇದ್ದಲ್ಲಿ ಸಂಬಂಧಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಹಾಗೂ ಮತದಾರರ ನೋಂದಣಾಧಿಕಾರಿಗಳ ಗಮನಕ್ಕೆ ತರಲು ತಿಳಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ಎಲ್ಲ ರಾಜಕೀಯ ಪಕ್ಷಗಳಿಂದ ನೇಮಕಗೊಂಡ ಮತಗಟ್ಟೆ ಮಟ್ಟದ ಏಜೆಂಟರುಗಳ ಸಂಪೂರ್ಣವಾಗಿ ಸಹಕಾರ ನೀಡಿದ್ದಾರೆ. ಇದೇ ರೀತಿಯ ಪರಿಷ್ಕರಣೆ ಕಾರ್ಯ ಪೂರ್ಣಗೊಳ್ಳುವವರೆಗೆ ತಮ್ಮ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ಅಧಿಕಾರಿ ಬಿ.ಎಸ್.ಕಡಕಬಾವಿ, ಚುನಾವಣಾ ವಿಭಾಗದ ಮಹೇಶ ಪಾಂಡವ ಸೇರಿದಂತೆ ವಿವಿಧ ರಾಜಕೀಯ ಪ್ರತಿನಿಧಿಗಳಾದ ಮಲ್ಲಿಕಾರ್ಜುನ ಕಾಂಬಳೆ, ಪ್ರಭು ಹಳ್ಳೂರ, ಶರಥ ಪಾಟೀಲ, ಮಲ್ಲಿಕಾರ್ಜುನ ಮುತ್ತಪ್ಪನವರ, ಶಿವಾನಂದ ಸುರಪುರ ಹಾಗೂ ಇತರರು ಉಪಸ್ಥಿತರಿದ್ದರು.

## ಹರ್ಡಲ್ಸ್ ಸ್ಪರ್ಧೆಯಲ್ಲಿ ಢಣಾಪುರ ಪ್ರೌಢಶಾಲೆಯ ವಿದ್ಯಾರ್ಥಿನಿಯರ ಸಾಧನೆ



**ಗಂಗಾವತಿ:** ಗಂಗಾವತಿ ನಗರದ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಇಂದು ನಡೆದ ತಾಲೂಕು ಮಟ್ಟದ ಶಾಲಾ ಕ್ರೀಡಾಕೂಟದ ಹರ್ಡಲ್ಸ್ ಸ್ಪರ್ಧೆಯಲ್ಲಿ ಢಣಾಪುರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಅತ್ಯುತ್ತಮ ಪ್ರದರ್ಶನ ನೀಡಿ ಶಾಲೆಗೆ ಕೀರ್ತಿ ತಂದಿದ್ದಾರೆ.

ಸ್ಪರ್ಧೆಯಲ್ಲಿ ಢಣಾಪುರ ಪ್ರೌಢಶಾಲೆಯ ವಿದ್ಯಾರ್ಥಿನಿ ಶ್ರಾವಣಿ (ತಂದೆ: ಶರಣಪ್ಪ) ದ್ವಿತೀಯ ಸ್ಥಾನವನ್ನು ಪಡೆದು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗುವ ಮೂಲಕ ಗಮನಾರ್ಹ ಸಾಧನೆ ಮಾಡಿದ್ದಾರೆ. ತಮ್ಮ ವೇಗ, ಆತ್ಮವಿಶ್ವಾಸ ಹಾಗೂ ನಿರಂತರ ಅಭ್ಯಾಸದ ಫಲವಾಗಿ ಅವರು ಈ ಸಾಧನೆ ಮಾಡಿದ್ದು, ಶಾಲೆಯ ಹೆಸರನ್ನು ತಾಲೂಕು ಮಟ್ಟದಲ್ಲಿ ಎತ್ತಿಹಿಡಿದಿದ್ದಾರೆ.

ಅದೇ ರೀತಿ ಇದೇ ಶಾಲೆಯ ಮತ್ತೊಬ್ಬ ಪ್ರತಿಭಾನ್ವಿತ ವಿದ್ಯಾರ್ಥಿನಿ ಮಮತಾ (ತಂದೆ: ಗವಿಸಿದ್ದಪ್ಪ) ಹರ್ಡಲ್ಸ್ ಸ್ಪರ್ಧೆಯಲ್ಲಿ ತೃತೀಯ ಸ್ಥಾನವನ್ನು ಪಡೆದು ಶಾಲೆಗೆ ಮತ್ತೊಂದು ಗೌರವ ತಂದುಕೊಟ್ಟಿದ್ದಾರೆ. ಇಬ್ಬರು ವಿದ್ಯಾರ್ಥಿನಿಯರ ಸಾಧನೆಯು ಶಾಲೆಯ ಕ್ರೀಡಾ ಪರಂಪರೆಗೆ ಮತ್ತಷ್ಟು ಮೆರಗು ತಂದಿದ್ದು, ವಿದ್ಯಾರ್ಥಿಗಳಲ್ಲಿ ಕ್ರೀಡಾಸಕ್ತಿಯನ್ನು ಹೆಚ್ಚಿಸಿದೆ. ಈ ಸಾಧನೆಯ ಹಿಂದೆ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀ ಚಂದ್ರಶೇಖರ್ ಜಾಪಾಳ ಅವರ ಶ್ರಮ, ಸೂಕ್ತ ತರಬೇತಿ ಹಾಗೂ ಮಾರ್ಗದರ್ಶನ ಪ್ರಮುಖ ಪಾತ್ರ ವಹಿಸಿದೆ ಎಂದು ಶಾಲಾ ಆಡಳಿತ ಮಂಡಳಿ ಅಭಿಪ್ರಾಯಪಟ್ಟಿದೆ. ವಿದ್ಯಾರ್ಥಿನಿಯರಿಗೆ ನಿರಂತರ ಅಭ್ಯಾಸ ನೀಡಿದ ಪರಿಣಾಮ ತಾಲೂಕು ಮಟ್ಟದಲ್ಲಿ ಉತ್ತಮ ಫಲಿತಾಂಶ ದೊರೆತಿದೆ ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ಹನುಮಂತಪ್ಪ ಅವರು ವಿಜೇತ ವಿದ್ಯಾರ್ಥಿನಿಯರನ್ನು ಅಭಿನಂದಿಸಿ, ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲೂ ಅತ್ಯುತ್ತಮ ಪ್ರದರ್ಶನ ನೀಡಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗುವಂತೆ ಶುಭ ಹಾರೈಸಿದರು. ಕ್ರೀಡೆ ಮತ್ತು ಶಿಕ್ಷಣ ಎರಡರಲ್ಲೂ ವಿದ್ಯಾರ್ಥಿಗಳು ಸಾಧನೆ ಮಾಡುವ ಮೂಲಕ ಶಾಲೆಯ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು, ಗ್ರಾಮದ ಗುರುಹಿರಿಯರು, ಯುವಕ ಮಿತ್ರರು ಹಾಗೂ ಸಾರ್ವಜನಿಕರು ವಿದ್ಯಾರ್ಥಿನಿಯರ ಸಾಧನೆಗೆ ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದರು. ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿಯೂ ಢಣಾಪುರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಉತ್ತಮ ಪ್ರದರ್ಶನ ನೀಡಿ ಮತ್ತಷ್ಟು ಸಾಧನೆ ಮಾಡಲಿ ಎಂದು ಶುಭ ಹಾರೈಸಿದರು.

# ಶ್ರದ್ಧಾ–ಭಕ್ತಿಯಿಂದ ಗುರು ಪೂರ್ಣಿಮಾ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಶಂಕರ್ ಮಠದ ಶಾರದಾ ಮಂದಿರದಲ್ಲಿ ಗುರು ಪೂರ್ಣಿಮೆಯನ್ನು ಶ್ರದ್ಧಾ–ಭಕ್ತಿಯಿಂದ ಹಾಗೂ ಧಾರ್ಮಿಕ ಸಂಭ್ರಮದೊಂದಿಗೆ ಆಚರಿಸಲಾಯಿತು. ಗುರುಗಳಿಗೆ ವಿಶೇಷ ಪೂಜೆ, ಧರ್ಮಸಭೆ, ಭಜನಾ ಕಾರ್ಯಕ್ರಮ ಹಾಗೂ ಮಹಾಮಂಗಳಾರತಿಯೊಂದಿಗೆ ನಡೆದ ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಪಾಲ್ಗೊಂಡು ಗುರುಪರಂಪರೆಗೆ ನಮನ ಸಲ್ಲಿಸಿದರು.



ಕಾರ್ಯಕ್ರಮದ ಅಂಗವಾಗಿ ನಡೆದ ಧರ್ಮಸಭೆಯನ್ನುದ್ದೇಶಿಸಿ ಮಾತನಾಡಿದ ಶಾರದಾ ಮಂದಿರದ ಧರ್ಮದರ್ಶಿ ನಾರಾಯಣರಾವ್ ವೈದ್ಯ, ಭಾರತವು ವೈವಿಧ್ಯತೆಯಲ್ಲಿ ಏಕತೆಯನ್ನು ಹೊಂದಿರುವ ರಾಷ್ಟ್ರವಾಗಿದ್ದು, ಅದರ ಭವ್ಯ ಸಂಸ್ಕೃತಿ ಮತ್ತು ಪರಂಪರೆಯಲ್ಲಿ ಗುರು ಸ್ಥಾನಕ್ಕೆ ಅತ್ಯಂತ ಉನ್ನತ ಗೌರವವಿದೆ ಎಂದು ಹೇಳಿದರು.

"ತಾಯಿಯೇ ಮೊದಲ ಗುರು. ಆ ಬಳಿಕ ಜೀವನದ ಸನ್ಮಾರ್ಗವನ್ನು ತೋರಿಸುವ ಪ್ರತಿಯೊಬ್ಬರೂ ಗುರುಗಳೇ. ಅಜ್ಞಾನದಿಂದ ಜ್ಞಾನದೆಡೆಗೆ, ಅಂಧಕಾರದಿಂದ ಬೆಳಕಿನೆಡೆಗೆ ಮನುಷ್ಯನನ್ನು ಕೊಂಡೊಯ್ಯುವವನೇ ನಿಜವಾದ ಗುರು. ಅಂತಹ ಗುರುಗಳ ಆಶೀರ್ವಾದವಿಲ್ಲದೆ ಜೀವನ ಸಾರ್ಥಕವಾಗುವುದಿಲ್ಲ" ಎಂದು ಅವರು ಅಭಿಪ್ರಾಯಪಟ್ಟರು.

ಮಹರ್ಷಿ ವೇದವ್ಯಾಸರ ಜನ್ಮದಿನವನ್ನು ಗುರು ಪೂರ್ಣಿಮೆಯಾಗಿ ಆಚರಿಸಲಾಗುತ್ತಿದ್ದು, ಭಾರತವು ಸಾಧು–ಸಂತರು, ಋಷಿ–ಮುನಿಗಳು ಹಾಗೂ ಮಹಾನ್ ಗುರುಗಳ ತಪೋಭೂಮಿಯಾಗಿದೆ. ಅವರ ಮಾರ್ಗದರ್ಶನದಿಂದಲೇ ಭಾರತೀಯ ಸಂಸ್ಕೃತಿ ವಿಶ್ವದಾದ್ಯಂತ ವಿಶಿಷ್ಟ ಸ್ಥಾನವನ್ನು ಪಡೆದಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶೃಂಗೇರಿ ಶಾರದಾ ಪೀಠದ ಜಗದ್ಗುರು ಶ್ರೀ ಭಾರತೀಯ ತೀರ್ಥ ಮಹಾಸ್ವಾಮಿಗಳವರ 48 ದಿನಗಳ ಚಾತುರ್ಮಾಸ ವ್ರತ ಇಂದಿನಿಂದ ಆರಂಭಗೊಂಡಿರುವುದು ಅತ್ಯಂತ ಪವಿತ್ರ ಹಾಗೂ ಮಹತ್ವದ ಧಾರ್ಮಿಕ ಆಚರಣೆ–ಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರ್ಯವೈಶ್ಯ ಸಮಾಜದ ಮುಖಂಡ ಸಂತೋಷ್ ಕೆಲೋಜಿ ಮಾತನಾಡಿ, ಹಿಂದೂ ಧರ್ಮ ಸಂಕಷ್ಟದಲ್ಲಿದ್ದ ಕಾಲದಲ್ಲಿ ಜಗದ್ಗುರು ಶ್ರೀ ಆದಿ ಶಂಕರಾಚಾರ್ಯರು ದೇಶಾದ್ಯಂತ ಸಂಚರಿಸಿ ಧರ್ಮದ ಪುನರುತ್ಥಾನಕ್ಕೆ ನೀಡಿದ ಕೊಡುಗೆ ಅನನ್ಯವಾಗಿದೆ ಎಂದು ಹೇಳಿದರು.

"ಧರ್ಮದ ಸಂಕಷ್ಟದ ಸಂದರ್ಭದಲ್ಲಿ ಆದಿ ಶಂಕರಾಚಾರ್ಯರಂತಹ ಮಹಾಪುರುಷರು ಸಾವಿರ ವರ್ಷಕ್ಕೊಮ್ಮೆ ಜನಿಸುತ್ತಾರೆ. ಅವರು ಬೋಧಿಸಿದ ಧರ್ಮ, ಸಂಸ್ಕಾರ, ಮಾನವೀಯತೆ ಹಾಗೂ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಕೈಜೋಡಿಸಬೇಕು. ದೇಶದ ಸರ್ವತೋಮುಖ ಪ್ರಗತಿಗೆ ಧರ್ಮ ಮತ್ತು ಸಂಸ್ಕೃತಿ ಪ್ರಮುಖ ಆಧಾರವಾಗಿವೆ" ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶಾರದಾ ಶಂಕರ ಭಜನಾ ಮಂಡಳಿ, ಗಂಗಾಧರೇಶ್ವರ ಭಜನಾ ಮಂಡಳಿ, ಸತ್ಯದೇವ ಭಜನಾ ಮಂಡಳಿ, ಶ್ರೀ ಯೋಗೇಶ್ವರ ಯಾಜ್ಞವಲ್ಕ ಭಜನಾ ಮಂಡಳಿ ಸೇರಿದಂತೆ ವಿವಿಧ ಭಜನಾ ಮಂಡಳಿಗಳ ಸದಸ್ಯರು ಭಕ್ತಿರಸಪೂರ್ಣ ಭಜನೆಗಳನ್ನು ಹಾಡಿದರು. ವಿಶೇಷವಾಗಿ ಜಗದ್ಗುರು ಶ್ರೀ ಆದಿ ಶಂಕರಾಚಾರ್ಯರು ರಚಿಸಿದ 'ಕಲ್ಯಾಣವೃಷ್ಟಿ' ಸೇರಿದಂತೆ ಹಲವು ಭಕ್ತಿಗೀತೆಗಳನ್ನು ಗಾಯನ ಮಾಡಿ ಭಕ್ತರನ್ನು ಭಕ್ತಿಸಾಗರದಲ್ಲಿ ತೇಲಿಸಿದರು.

ಭಜನಾ ಕಾರ್ಯಕ್ರಮದ ವೇಳೆ ಶಾರದಾ ಮಂದಿರದ ಆವರಣ ಭಕ್ತಿಮಯ ವಾತಾವರಣದಿಂದ ಕಂಗೊಳಿಸಿತು. ಭಕ್ತರು ಗುರುಗಳಿಗೆ ವಿಶೇಷ ಪೂಜೆ ಸಲ್ಲಿಸಿ, ಆಶೀರ್ವಾದ ಪಡೆದು ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಈ ಧಾರ್ಮಿಕ ಕಾರ್ಯಕ್ರಮದಲ್ಲಿ ರಾಘವೇಂದ್ರ ಮೇಘೂರ್, ಬಾಲಕೃಷ್ಣ ದೇಸಾಯಿ, ಮೋಹನ್ ಲೆಕ್ಕಿಹಾಳ, ರಾಘವೇಂದ್ರ ಅಳವಂಡಿಕರ್, ಸುನಿಲ್ ವೈದ್ಯ, ಪವನ್ ಜೋಶಿ ಸೇರಿದಂತೆ ಸೌಂದರ್ಯ ಲಹರಿ ಭಜನಾ ಮಂಡಳಿಯ ಸದಸ್ಯರು, ಆರ್ಯವೈಶ್ಯ ಸಮಾಜದ ಮುಖಂಡರು, ವಿವಿಧ ಭಜನಾ ಮಂಡಳಿಗಳ ಸದಸ್ಯರು ಹಾಗೂ ನೂರಾರು ಭಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ನಡೆದ ಮಹಾಮಂಗಳಾರತಿಯಲ್ಲಿ ಭಕ್ತರು ಭಕ್ತಿಭಾವದಿಂದ ಪಾಲ್ಗೊಂಡು ಗುರುಗಳಿಗೆ ನಮನ ಸಲ್ಲಿಸಿದರು. ಗುರು ಪೂರ್ಣಿಮೆಯ ಅಂಗವಾಗಿ ನಡೆದ ಈ ಧಾರ್ಮಿಕ ಸಮಾರಂಭವು ಶ್ರದ್ಧೆ, ಭಕ್ತಿ ಹಾಗೂ ಭಾರತೀಯ ಗುರುಪರಂಪರೆಯ ಮಹತ್ವವನ್ನು ಸಾರುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

# ಮಳೆಗಾಲದಲ್ಲಿ ಮನೋಹರ ನೋಟ; ಇಲಾಖೆಗಳ ನಿರಾಸಕ್ತಿಗೆ ಸ್ಥಳೀಯರ ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದಿಂದ ಕೇವಲ ಮೂರು ಕಿಲೋಮೀಟರ್ ದೂರದಲ್ಲಿರುವ ನಜರಾಪುರ ಗ್ರಾಮದ ರಸ್ತೆಗೆ ಹೊಂದಿಕೊಂಡಿರುವ ದಭ್ ದಭಿ ಜಲಪಾತ ಮಳೆಗಾಲದಲ್ಲಿ ತನ್ನ ನೈಸರ್ಗಿಕ ಸೌಂದರ್ಯದಿಂದ ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿದೆ. ಈ ವರ್ಷ ಸಮರ್ಪಕ ಮಳೆಯಾಗದಿದ್ದರೂ ಸುರಿದ ಅಲ್ಪ ಮಳೆಯಿಂದ ಜಲಪಾತದಲ್ಲಿ ನೀರಿನ ಹರಿವು ಕಾಣಿಸಿಕೊಂಡಿದ್ದು, ಪ್ರಕೃತಿ ಪ್ರಿಯರಿಗೆ ಮನಸೂರೆಗೊಳ್ಳುವ ದೃಶ್ಯವನ್ನು ನೀಡುತ್ತಿದೆ.

ಬೆಟ್ಟಗಳ ಮಧ್ಯೆ ಧುಮ್ಮಿಕ್ಕಿ ಹರಿಯುವ ಜಲಪಾತ, ಸುತ್ತಮುತ್ತಲಿನ ಹಚ್ಚಹಸಿರು ಪರಿಸರ ಹಾಗೂ ನಿಶ್ಶಬ್ದ ಪ್ರಕೃತಿ ವಾತಾವರಣದಿಂದ ಈ ಪ್ರದೇಶ ಜಿಲ್ಲೆಯ ಸುಂದರ ಪ್ರವಾಸಿ ತಾಣಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ. ಪ್ರತಿವರ್ಷ ಮಳೆಗಾಲದಲ್ಲಿ ನೂರಾರು ಪ್ರವಾಸಿಗರು ಕುಟುಂಬ ಸಮೇತರಾಗಿ ಇಲ್ಲಿ ಭೇಟಿ ನೀಡಿ ಪ್ರಕೃತಿ ಸೌಂದರ್ಯವನ್ನು ಸವಿಯುತ್ತಾರೆ.

ಆದರೆ, ಇಂತಹ ಸುಂದರ ತಾಣವಾಗಿದ್ದರೂ ದಭ್ ದಭಿ ಜಲಪಾತ ಅಭಿವೃದ್ಧಿಯ ಕೊರತೆಯಿಂದ ಇನ್ನೂ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಅರಣ್ಯ ಇಲಾಖೆ, ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಜಿಲ್ಲಾ ಪಂಚಾಯಿತಿ ಹಾಗೂ ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಈ ಪ್ರವಾಸಿ ತಾಣದ ಅಭಿವೃದ್ಧಿಯತ್ತ ಅಗತ್ಯ ಗಮನ ಹರಿಸಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ.



ಪ್ರವಾಸಿಗರಿಗೆ ಸುರಕ್ಷತಾ ಬೇಲಿ ಹಾಗೂ ಅಪಾಯದ ನಾಮ ಫಲಕ ಮಾತ್ರ ಅರಣ್ಯ ಇಲಾಖೆಯಿಂದ ಅಳವಡಿಕೆ ಯಾಗಿರುವದು ಬಿಟ್ಟರೆ, ಕುಡಿಯುವ ನೀರು, ಶೌಚಾಲಯ, ವಾಹನ ನಿಲುಗಡೆ, ವಿಶ್ರಾಂತಿ ತಾಣ, ಕಸದ ವಿಲೇವಾರಿ ವ್ಯವಸ್ಥೆ ಸೇರಿದಂತೆ ಯಾವುದೇ ಮೂಲಭೂತ ಸೌಲಭ್ಯಗಳಿಲ್ಲ. ಅಲ್ಲದೆ, ಜಲಪಾತದ ಸ್ಥಳ, ಮಾರ್ಗ ಸೂಚನೆಗಳನ್ನು ತಿಳಿಸುವ ಮಾಹಿತಿ ಫಲಕಗಳ ಕೊರತೆಯೂ ಎದ್ದು ಕಾಣುತ್ತಿದೆ. ಇದರಿಂದ ಮೊದಲ ಬಾರಿಗೆ ಆಗಮಿಸುವ ಪ್ರವಾಸಿಗರು ಹಲವು ತೊಂದರೆಗಳನ್ನು ಎದುರಿಸುವಂತಾಗಿದೆ.

ಜಲಪಾತವನ್ನು ಪ್ರವಾಸೋದ್ಯಮದ ದೃಷ್ಟಿಯಿಂದ ಅಭಿವೃದ್ಧಿಪಡಿಸಿದರೆ ಗುರುಮಠಕಲ್ ಭಾಗದ ಪ್ರಮುಖ ಪ್ರವಾಸಿ ಆಕರ್ಷಣಾ ಕೇಂದ್ರವಾಗಿ ರೂಪುಗೊಳ್ಳುವ ಸಾಮರ್ಥ್ಯ ಹೊಂದಿದೆ. ಆದ್ದರಿಂದ ಸಂಬಂಧಪಟ್ಟ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಅಗತ್ಯ, ಮೂಲಸೌಕರ್ಯಗಳನ್ನು ಕಲ್ಪಿಸುವ ಮೂಲಕ ಈ ಪ್ರಕೃತಿ ತಾಣವನ್ನು ಸಂರಕ್ಷಿಸಿ ಅಭಿವೃದ್ಧಿಪಡಿಸಬೇಕು ಎಂದು ಸ್ಥಳೀಯರು ಹಾಗೂ ಪ್ರವಾಸಿಗರು ಒತ್ತಾಯಿಸಿದ್ದಾರೆ.

# ತಾಯಿ–ಮಗು ಹತ್ಯೆ ಪ್ರಕರಣ: ಪರಾರಿಯಾಗಿದ್ದ ಪತಿ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಆಂದ್ರಾಳ್ ಪ್ರದೇಶದಲ್ಲಿ ನಡೆದ ತಾಯಿ ಮತ್ತು ಏಳು ತಿಂಗಳ ಹೆಣ್ಣು ಮಗುವಿನ ಭೀಕರ ಹತ್ಯೆ ಪ್ರಕರಣದಲ್ಲಿ ಪರಾರಿಯಾಗಿದ್ದ ಆರೋಪಿ ಪತಿ ಹೊನ್ನೂರಸ್ವಾಮಿಯನ್ನು ಪೊಲೀಸರು ಬಂಧಿಸಿದ್ದಾರೆ. ಕೌಟುಂಬಿಕ ಕಲಹವೇ ಈ ದುರ್ಘಟನೆಗೆ ಪ್ರಮುಖ ಕಾರಣ ಎಂದು ಶಂಕಿಸಲಾಗಿದ್ದು, ಪ್ರಕರಣದ ಎಲ್ಲ ಆಯಾಮಗಳಿಂದ ತನಿಖೆ ಮುಂದುವರಿದಿದೆ.



ಮೃತರನ್ನು ರಾಜೇಶ್ವರಿ (26) ಹಾಗೂ ಅವರ ಏಳು ತಿಂಗಳ ಮಗಳು ಅಶ್ವಿನಿ ಎಂದು ಗುರುತಿಸಲಾಗಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಪತಿ–ಪತ್ನಿಯ ನಡುವೆ ಆಗಾಗ್ಗೆ ನಡೆಯುತ್ತಿದ್ದ ಕೌಟುಂಬಿಕ ಕಲಹ ತೀವ್ರ ಸ್ವರೂಪ ಪಡೆದು, ಹೊನ್ನೂರಸ್ವಾಮಿ ಸುತ್ತಿಗೆಯಿಂದ ಪತ್ನಿ ಮತ್ತು ಮಗುವಿನ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸರು ಶಂಕಿಸಿದ್ದಾರೆ. ಗಂಭೀರ ಗಾಯಗಳಿಂದ ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎನ್ನಲಾಗಿದೆ.

ಘಟನೆಯ ಬಳಿಕ ಆರೋಪಿ ಸ್ಥಳದಿಂದ ಪರಾ–ರಿಯಾಗಿದ್ದ. ಮಾಹಿತಿ ತಿಳಿದ ಕೂಡಲೇ ಎಪಿಎಂಸಿ ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದರು. ಪ್ರಕರಣ ದಾಖಲಿಸಿಕೊಂಡು ವಿಶೇಷ ತಂಡ ರಚಿಸಿ ಆರೋಪಿಯ ಶೋಧ ಕಾರ್ಯ ಆರಂಭಿಸಲಾಗಿತ್ತು. ನಂತರ ಪೊಲೀಸರು ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧನದ ಬಳಿಕ ವಿಚಾರಣೆ ನಡೆಸಲಾಗುತ್ತಿದ್ದು, ಹತ್ಯೆಯ ಹಿಂದಿನ ನಿಖರ ಕಾರಣ, ಪೂರ್ವಯೋಜನೆ ಇದೆಯೇ ಮತ್ತು ಕುಟುಂಬದೊಳಗಿನ ವಿವಾದದ ಸ್ವರೂಪವೇನು ಎಂಬುದನ್ನು ತನಿಖೆ ಮಾಡಲಾಗುತ್ತಿದೆ.

ಪೊಲೀಸರು ಘಟನಾ ಸ್ಥಳದಿಂದ ದೊ–ರೆತ ಸಾಕ್ಷ್ಯಗಳು, ನೆರೆಹೊರೆಯವರ ಹೇಳಿಕೆಗಳು ಹಾಗೂ ಕುಟುಂಬ ಸದಸ್ಯರ ಮಾಹಿತಿಯನ್ನು ಸಂಗ್ರಹಿಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆಯ ವರದಿ ಹಾಗೂ ವಿಧಿವಿಜ್ಞಾನ ಪರೀಕ್ಷೆಯ ಫಲಿತಾಂಶಗಳು ತನಿಖೆಗೆ ಪ್ರಮುಖವಾಗಲಿವೆ.

ಈ ಘಟನೆ ಬಳ್ಳಾರಿ ನಗರದಲ್ಲಿ ಇತ್ತೀಚೆಗೆ ನಡೆದ ಮತ್ತೊಂದು ಕೌಟುಂಬಿಕ ಹತ್ಯೆ ಪ್ರಕರಣದ ಬೆನ್ನಲ್ಲೇ ಸಂಭವಿಸಿರುವುದು ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಕೆಲವೇ ದಿನಗಳ ಹಿಂದೆ ಗುಗ್ಗರಹಟ್ಟಿ ಪ್ರದೇಶದಲ್ಲಿ ರಾಜಿ ಪಂಚಾಯಿತಿ ನೆಪದಲ್ಲಿ ಪತ್ನಿ ಮತ್ತು ಮಾವನನ್ನು ಕೊಲೆ ಮಾಡಲಾಗಿದ್ದ ಘಟನೆ ಇನ್ನೂ ಜನರ ಮನಸ್ಸಿನಿಂದ ಮಾಸುವ ಮುನ್ನವೇ ಮತ್ತೊಂದು ಭೀಕರ ಪ್ರಕರಣ ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಕುಟುಂಬ ಕಲಹಗಳು ಹಿಂಸಾತ್ಮಕ ಸ್ವರೂಪ ಪಡೆಯುತ್ತಿರುವ ಬಗ್ಗೆ ಸಾರ್ವಜನಿಕರು ಕಳವಳ ವ್ಯಕ್ತಪಡಿಸುತ್ತಿದ್ದಾರೆ.

ಪೊಲೀಸರು ತನಿಖೆ ಮುಂದುವರಿಸಿದ್ದು, ಆರೋಪಿಯ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ತನಿಖೆ ಪೂರ್ಣಗೊಂಡ ಬಳಿಕ ಹೆಚ್ಚಿನ ಅಧಿಕೃತ ಮಾಹಿತಿಯನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ.

# ಸಮಾಜಕ್ಕೆ ದಾರಿ ತೋರುವ ಶಕ್ತಿ ಪತ್ರಿಕೋದ್ಯಮಕ್ಕಿದೆ: ಶಾಸಕ ಮೇಟಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪತ್ರಿಕೋದ್ಯಮ ಸಮಾಜದ ಅಂಕು–ಡೊಂಕು ತಿದ್ದುವ ಸಂವಿಧಾನಬದ್ಧ, ಜವಾಬ್ದಾರಿಯುತ ವೃತ್ತಿಯಾಗಿದ್ದು, ಕೇವಲ ತಪ್ಪುಗಳನ್ನು ಬಿಂಬಿಸುವುದಲ್ಲದೇ ಸಮಾಜದಲ್ಲಿನ ಉತ್ತಮ ಕಾರ್ಯಗಳನ್ನು ಜನರ ಮುಂದೆ ತಂದು ಮತ್ತಷ್ಟು ಅಭಿವೃದ್ಧಿಗೆ ಪ್ರೇರಣೆ ನೀಡುವ ಶಕ್ತಿ ಅದಕ್ಕಿದೆ ಎಂದು ಬಾಗಲಕೋಟೆ ಶಾಸಕ ಉಮೇಶ ಮೇಟಿ ಹೇಳಿದರು.



ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಶುಕ್ರವಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪತ್ರಕರ್ತರು ತಮ್ಮ ಕುಟುಂಬಕ್ಕಿಂತ ಸಮಾಜದ ಹಿತಾಸಕ್ತಿಗೆ ಹೆಚ್ಚಿನ ಆದ್ಯತೆ ನೀಡಿ ನಿರಂತರ ಸೇವೆ ಸಲ್ಲಿಸುತ್ತಾರೆ. ಅಂತಹ ಪತ್ರಕರ್ತರ ಮಕ್ಕಳಿಗೆ ಗೌರವ ನೀಡಿ ಅವರ ಶೈಕ್ಷಣಿಕ ಸಾಧನೆಯನ್ನು ಗುರುತಿಸುವುದು ಅವರಿಗೆ ಮತ್ತಷ್ಟು ಪ್ರೇರಣೆಯಾಗಲಿದೆ ಎಂದರು.

ಜಿಲ್ಲೆಯ ಹಿರಿಯ ಪತ್ರಕರ್ತರಾದ ದಿ.ರಾಮ ಮನಗೂಳಿ, ದಿ.ಎನ್.ಎಚ್.ಶಾಲಗಾರ, ದಿ.ಶ್ರೀಶೈಲ ಅಂಗಡಿ ಹಾಗೂ ದಿ.ಶರಣಬಸವರಾಜ ಜಿಗಜಿನ್ನಿ ಅವರ ಹೆಸರಿನಲ್ಲಿ ಅತ್ಯುತ್ತಮ ಪತ್ರಕರ್ತರಿಗೆ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಅವರ ಸೇವೆಯನ್ನು ಸ್ಮರಿಸುವ ಜೊತೆಗೆ ಇಂದಿನ ಪತ್ರಕರ್ತರಿಗೆ ಮತ್ತಷ್ಟು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಲು ಉತ್ತೇಜನ ನೀಡುವ ಕಾರ್ಯವಾಗಿದೆ. ಪತ್ರಕರ್ತರಷ್ಟೇ ಅಲ್ಲದೇ ಮನೆ ಮನೆಗೆ ಪತ್ರಿಕೆ ತಲುಪಿಸುವ ವಿತರಕರ ಸೇವೆಯನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವುದು ಸಂಘದ ವಿಶೇಷ ಕಾರ್ಯವಾಗಿದೆ. ಇಂದಿಗೂ ಪತ್ರಿಕೆ ವಿತರಿಸುವ ಹಿರಿಯರ ಸೇವೆ ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಆಶಯ ನುಡಿ ಹೇಳಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ, ಕಾರ್ಯನಿರತ ಪತ್ರಕರ್ತರ ಸಂಘ 90 ವರ್ಷಕ್ಕೂ ಹೆಚ್ಚು ವರ್ಷಗಳ ಕಾಲ ಸುದೀರ್ಘ ಇತಿಹಾಸ ಹೊಂದಿದೆ. ಸಂಘದ ಬೆಳವಣಿಗೆಯಲ್ಲಿ ಹಿರಿಯ ಪತ್ರಕರ್ತರ ಪಾತ್ರ ಮಹತ್ತರವಾಗಿದೆ. ಅವರ ದೂರದೃಷ್ಟಿ, ಸಂಘಟನಾ ಶಕ್ತಿ ಮತ್ತು ವೃತ್ತಿಯ ಮೇಲಿನ ಬದ್ಧತೆಯ ಫಲವಾಗಿ ಇಂದು ಸಂಘವು 10 ಸಾವಿರ ಸದಸ್ಯರನ್ನು ಹೊಂದಿದೆ. ಸಂಘದ ಹೆಸರಿನಲ್ಲಿ 1 ಕೋಟಿ ರೂ.ಗಳ ನಿಧಿಯಿಂದ ಬರುವ ಬಡ್ಡಿದರಲ್ಲಿ ಸಹಾಯಧನ ಕೊಡುವ ಕಾರ್ಯ ಮಾಡಲಾಗುತ್ತಿದೆ ಎಂದರು.

ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಮಾತನಾಡಿ, ಸಮಾಜದಲ್ಲಿ ಕಂಡುಬರುವ ತಪ್ಪುಗಳನ್ನು ಎಚ್ಚರಿಸುವುದರ ಜೊತೆಗೆ ಜನಜಾಗೃತಿ ಮೂಡಿಸುವ ಮಹತ್ತರ ಜವಾಬ್ದಾರಿಯನ್ನು ಪತ್ರಿಕೋದ್ಯಮ ಸಮರ್ಥವಾಗಿ ನಿರ್ವಹಿಸುತ್ತಿದೆ. ಸಮಾಜದಲ್ಲಿನ ಓರೆ–ಕೋರೆಗಳನ್ನು ತಿದ್ದುವ ಕೆಲಸವನು ಪತ್ರಕರ್ತರು ನಿರಂತರವಾಗಿ ಮಾಡುತ್ತಿದ್ದು, ಅವರ ಕಾರ್ಯದಕ್ಷತೆ ಮತ್ತು ನಿಷ್ಪಕ್ಷಪಾತ ವರದಿಗಾರಿಕೆಯಿಂದ ಸಮಾಜದಲ್ಲಿ ಪತ್ರಕರ್ತರ ಮೇಲೆ ಬಲವಾದ ವಿಶ್ವಾಸ ನಿರ್ಮಾಣವಾಗಿದೆ ಎಂದು ಅಭಿಪ್ರಾಯಪಟ್ಟರು.

ಬಿಟಿಡಿಎ ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಮಾತನಾಡಿ, ಇಂದಿನ ಸಮಾಜದಲ್ಲಿ ಪತ್ರಿಯೊಂದು ಕ್ಷೇತ್ರದ ಬೆಳವಣಿಗೆ ಹಾಗೂ ಜನಜಾಗೃತಿಗೆ ಪತ್ರಿಕೋದ್ಯಮ ಅತ್ಯಗತ್ಯವಾಗಿದ್ದು, ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಸದೃಡಗೊಳಿಸುವಲ್ಲಿ ಮಾದ್ಯಮಗಳ ಪಾತ್ರ ಮಹತ್ವದ್ದಾಗಿದೆ ಎಂದರು. ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಶಿಕ್ಷಣ, ಸಂಘಟನೆ ಮತ್ತು ಹೋರಾಟಗಳು ಸಮಾಜದ ಪ್ರಗತಿಯ ಮೂಲಾಧಾರವಾಗಿವೆ. ಈ ಮೂರಕ್ಕೂ ಪತ್ರಿಕೋದ್ಯಮವು ಜೀವ ತುಂಬುವ ಶಕ್ತಿಯಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾನಿಪ ಅಧ್ಯಕ್ಷ ಮಹೇಶ ಅಂಗಡಿ ಮಾತನಾಡಿದರು. ಕಾನಿಪ ರಾಜ್ಯ ಕಾರ್ಯಕಾರಣಿ ಸದಸ್ಯ ಈಶ್ವರ ಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಿಗೆ, ಪತ್ರಿಕಾ ವಿತರಕರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಪಂ ಸಿಇಓ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಕಾನಿಪ ರಾಜ್ಯ ಕಾರ್ಯದರ್ಶಿ ಪುಂಡಲೀಕ ಬಾಳೋಜಿ, ಜಿಲ್ಲಾ ವಾರ್ತಾಧಿಕಾರಿ ಕಸ್ತೂರಿ ಪಾಟೀಲ, ಜಿಲ್ಲಾ ಕಾನಿಪ ಪ್ರಧಾನ ಕಾರ್ಯದರ್ಶಿ ಜಗದೀಶ ಗಾಣಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ದಿ.ಶರಣಬಸವರಾಜ ಎಸ್.ಜಿಗಜಿನ್ನಿ ಸ್ಮರಣಾರ್ಥ ನೀಡುವ ಸತ್ಯಾಶ್ರಯ ಪ್ರಶಸ್ತಿಗೆ ಭಾಜನರಾದ ಬಾದಾಮಿ ಪತ್ರಕರ್ತ ಲಿಂಗರಾಜ ಚಿನಿವಾಲರ, ದಿ.ರಾಮ ಮನಗೂಳಿ ಸ್ಮರಣಾರ್ಥ ಉಮೇಶ ಪೂಜಾರಿ ಕೊಡಮಾಡುವ ಸವಿನುಡಿ ಪ್ರಶಸ್ತಿ ಪಡೆದಿರುವ ಪತ್ರಕರ್ತ ಶ್ರೀಶೈಲ ಬಿರಾದಾರ, ದಿ.ಎನ್.ಎಚ್.ಶಾಲಗಾರ ಸ್ಮರಣಾರ್ಥ ನೀಡುವ ಸಮಾಜವೀರ ಪ್ರಶಸ್ತಿ ಪಡೆದಿರುವ ಪತ್ರಕರ್ತ ಸುಭಾಷ ಹೊದ್ಲೂರ ಹಾಗೂ ಮಾತೋಶ್ರೀ ದಿ.ತಾಯಮ್ಮ ಕಲ್ಲಪ್ಪಗೌಡ ಬಿರಾದಾರ ಸ್ಮರಣಾರ್ಥ ನೀಡುವ ಕಾಯಕ ಪ್ರಶಸ್ತಿಗೆ ಭಾಜನರಾದ ಶಿರೂರಿನ ಪತ್ರಿಕಾ ವಿತರಕಿ ಸಂಗನಬಸವ್ವ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.**

**ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ಪತ್ರಕರ್ತರ ಮಕ್ಕಳಾದ ಸಾಧನಾ ಅಳಗಿ, ನವೀನ ತುಳಸಿದಾಸ ಲೋಖಂಡೆ, ಅನುಷಾ ಹಳ್ಳದ, ಜಾಫರ ಅತ್ತಾರ, ಪೃಥ್ವಿರಾಹ್ ಶಿಂಘಿ, ಗಾಯತ್ರಿ ಜೀರಗಾಳ, ಕೌಸ್ತುಬ ನರಗುಂದ, ಸಮರ್ಥ ಜಮಖಂಡಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ನಿವೇದಿತಾ ಹೊಸಮನಿ, ನಿವೇದಿತಾ ಹಿರೇಮಠ, ಭವಾನಿ ನರಸಿಂಹಮೂರ್ತಿ, ಸೃಜನ ಶೇಬಿನಕಟ್ಟಿ, ವಿದ್ಯಾಧರಿ ಗರಸಂಗಿ ಅವರನ್ನು ಸನ್ಮಾನಿಸಿ ಪುರಸ್ಕರಿಸಲಾಯಿತು.**

## ಬೆಂಗಳೂರು ಆವೃತ್ತಿಗೆ ಶುಭಾಶಯಗಳು



ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಸತ್ಯ, ನಿಷ್ಠೆ ಮತ್ತು ಜನಪರ ಮೌಲ್ಯಗಳನ್ನು ಆಧಾರವಾಗಿಟ್ಟುಕೊಂಡು ಕನ್ನಡ ನಾಡಿನ ಸೇವೆಯಲ್ಲಿ ತೊಡಗಿರುವ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಬೆಂಗಳೂರು ಆವೃತ್ತಿ ಆರಂಭವಾಗುತ್ತಿರುವುದು ಅತ್ಯಂತ ಹರ್ಷದ ಸಂಗತಿ.

ಪತ್ರಿಕೆಯು ಸಮಾಜದ ಧ್ವನಿಯಾಗಿ, ಕನ್ನಡ ಭಾಷೆ, ಸಂಸ್ಕೃತಿ ಮತ್ತು ಮೌಲ್ಯಗಳನ್ನು ಮತ್ತಷ್ಟು ಬಲಪಡಿಸುವ ಕಾರ್ಯದಲ್ಲಿ ಯಶಸ್ವಿಯಾಗಲಿ. ಜನರ ಸಮಸ್ಯೆಗಳನ್ನು ನಿರ್ಭಯವಾಗಿ ಪ್ರತಿಬಿಂಬಿಸಿ, ಸಮಾಜದಲ್ಲಿ ಜಾಗೃತಿ ಮೂಡಿಸುವ ಶಕ್ತಿಯಾಗಿ ಬೆಳೆಯಲಿ.

ಮಲ್ಲಮ್ಮ ನುಡಿ ಪತ್ರಿಕೆಯ ಮಾಲೀಕರು, ಸಂಪಾದಕರು, ಸಿಬ್ಬಂದಿ ವರ್ಗ ಹಾಗೂ ಓದುಗರಿಗೆ ನನ್ನ ಹೃತ್ಪೂರ್ವಕ ಶುಭಾಶಯಗಳು. ಬೆಂಗಳೂರು ಆವೃತ್ತಿಯು ಯಶಸ್ಸಿನ ಹೊಸ ಶಿಖರಗಳನ್ನು ತಲುಪಿ, ಜನಮನ್ನಣೆ ಗಳಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

–ಡಾ. ಜ್ಞಾನರಾಜ ಪ್ರಭುಗಳು

**ಮಾಣಿಕಪ್ರಭು ಸಂಸ್ಥಾನ. ಮಾಣಿಕನಗರ, ಹುಮನಾಬಾದ್**

## ಮಲ್ಲಮ್ಮ ನುಡಿ ದಿನಪತ್ರಿಕೆಯ ಬೆಂಗಳೂರು ಆವೃತ್ತಿಗೆ ಶುಭಾಶಯಗಳು



ಜನರ ಧ್ವನಿಯಾಗಿ, ಕನ್ನಡ ನಾಡಿನ ಸಂಸ್ಕೃತಿ, ಸಾಹಿತ್ಯ ಹಾಗೂ ಸಮಾಜಮುಖಿ ಮೌಲ್ಯಗಳನ್ನು ಎತ್ತಿಹಿಡಿಯುತ್ತಿರುವ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಬೆಂಗಳೂರು ಆವೃತ್ತಿ ಆರಂಭವಾಗುತ್ತಿರುವುದು ಅತ್ಯಂತ ಸಂತಸದ ಸಂಗತಿ.

ಈ ಪತ್ರಿಕೆಯು ಸತ್ಯ, ನಿಷ್ಪಕ್ಷಪಾತತೆ ಮತ್ತು ಜನಪರ ಪತ್ರಿಕೋದ್ಯಮದ ಮೂಲಕ ಬೆಂಗಳೂರಿನ ಜನರ ಸಮಸ್ಯೆಗಳು ಹಾಗೂ ಆಶೋತ್ತರಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸಲಿ. ಸಮಾಜದ ಎಲ್ಲ ವರ್ಗಗಳ ವಿಶ್ವಾಸ ಗಳಿಸಿ ಇನ್ನಷ್ಟು ಯಶಸ್ಸಿನತ್ತ ಸಾಗಲಿ ಎಂಬುದು ನನ್ನ ಹಾರೈಕೆ. ಪತ್ರಿಕೆಯ ಮಾಲೀಕರು, ಸಂಪಾದಕರು, ಸಿಬ್ಬಂದಿ ವರ್ಗ ಹಾಗೂ ಓದುಗರೆಲ್ಲರಿಗೂ ಹೃತ್ಪೂರ್ವಕ ಶುಭಾಶಯಗಳು. ಮಲ್ಲಮ್ಮ ನುಡಿ ಬೆಂಗಳೂರು ಆವೃತ್ತಿಯು ಯಶಸ್ವಿಯಾಗಿ ಬೆಳೆಯಲಿ ಎಂದು ಹಾರೈಸುತ್ತೇನೆ.

–ಪೂಜ್ಯ ಶ್ರೀ ಶ್ರೀ ರೇಣುಕಾಗಂಗಾಧರ ಶ್ರೀಗಳು,

**ಹಿರೇಮಠ, ಹುಮನಾಬಾದ್**

## ಬೆಂಗಳೂರು ಆವೃತ್ತಿಗೆ ಶ್ರೀ ವೇಮಾನಂದ ಶ್ರೀಗಳ ಹಾರೈಕೆ



"ಮಲ್ಲಮ್ಮ ನುಡಿ" ಪ್ರಾದೇಶಿಕ ಪತ್ರಿಕೆಯ ಬೆಂಗಳೂರು ಆವೃತ್ತಿಯ ಆರಂಭಕ್ಕೆ ರೆಡ್ಡಿ ಪೀಠದ ಪೂಜ್ಯ ಶ್ರೀಶ್ರೀ ವೇಮಾನಂದ ಶ್ರೀಗಳು ಹೃತ್ಪೂರ್ವಕ ಶುಭ ಹಾರೈಸಿದ್ದಾರೆ.

ಈ ಸಂದರ್ಭದಲ್ಲಿ ಆಶೀರ್ವಚನ ನೀಡಿದ ಅವರು, "ಪತ್ರಿಕೆಗಳು ಸಮಾಜದಲ್ಲಿ ಸತ್ಯ, ನ್ಯಾಯ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಶಕ್ತಿಯಾಗಿವೆ. ಜನರ ಧ್ವನಿಯಾಗಿ ಕಾರ್ಯನಿರ್ವಹಿಸುವ 'ಮಲ್ಲಮ್ಮ ನುಡಿ' ಸಮಾಜಮುಖಿ ಹಾಗೂ ನಿಷ್ಪಕ್ಷಪಾತ ಪತ್ರಿಕೋದ್ಯಮದ ಮೂಲಕ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮುಂದುವರಿಸಲಿ" ಎಂದು ಆಶಿಸಿದರು.

ಬೆಂಗಳೂರು ಆವೃತ್ತಿಯ ಆರಂಭವು ಪತ್ರಿಕೆಯ ಬೆಳವಣಿಗೆಯಲ್ಲಿ ಮಹತ್ವದ ಮೈಲಿಗಲ್ಲಾಗಿದ್ದು, ರಾಜ್ಯದ ಎಲ್ಲ ವರ್ಗದ ಜನರ ಆಶೋತ್ತರಗಳಿಗೆ ಸ್ಪಂದಿಸುವ ಮಾಧ್ಯಮವಾಗಿ ಮತ್ತಷ್ಟು ಯಶಸ್ಸು ಗಳಿಸಲಿ ಎಂದು ಅವರು ಹಾರೈಸಿದರು.

ಪತ್ರಿಕೆಯ ಸಂಪಾದಕ ಮಂಡಳಿ, ವರದಿಗಾರರು, ಸಿಬ್ಬಂದಿ ವರ್ಗ ಹಾಗೂ ಓದುಗರಿಗೆ ಶುಭಾಶಯಗಳನ್ನು ತಿಳಿಸಿದ ಶ್ರೀಶ್ರೀ ವೇಮಾನಂದ ಶ್ರೀಗಳು, "ಮಲ್ಲಮ್ಮ ನುಡಿ" ಸಮಾಜ ಸೇವೆ, ಜನಜಾಗೃತಿ ಮತ್ತು ನೈತಿಕ ಮೌಲ್ಯಗಳ ಪ್ರಸಾರದಲ್ಲಿ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂದು ಆಶೀರ್ವದಿಸಿದರು.

# ಸಾರ್ವಜನಿಕರಿಗೆ ನೆಮ್ಮದಿ, ಅಪರಾಧಿಗಳಿಗೆ ಟೆನ್ಷನ್..!

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಬಳ್ಳಾರಿ ಜಿಲ್ಲೆಯಲ್ಲಿ ಅಪರಾಧ ನಿಯಂತ್ರಣ, ಕಾನೂನು–ಸುವ್ಯವಸ್ಥೆ ಕಾಪಾಡುವಿಕೆ ಹಾಗೂ ಸಾರ್ವಜನಿಕರಲ್ಲಿ ಭದ್ರತೆಯ ಭರವಸೆ ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಸುಮನ್ ಡಿ. ಪನ್ನೇಕರ್ ಅವರ ನೇತೃತ್ವದಲ್ಲಿ ಕೈಗೊಳ್ಳಲಾಗುತ್ತಿರುವ ಕ್ರಮಗಳು ಸಾರ್ವಜನಿಕರ ಗಮನ ಸೆಳೆಯುತ್ತಿವೆ. ಇತ್ತೀಚಿನ ದಿನಗಳಲ್ಲಿ ಕಳ್ಳತನ, ದರೋಡೆ, ಸರಗಳ್ಳತನ ಹಾಗೂ ಇತರೆ ಅಪರಾಧ ಪ್ರಕರಣಗಳ ತನಿಖೆಯನ್ನು ತ್ವರಿತಗೊಳಿಸಿ, ಆರೋಪಿಗಳನ್ನು ಪತ್ತೆಹಚ್ಚುವಲ್ಲಿ ಜಿಲ್ಲಾ ಪೊಲೀಸರು ಪರಿಣಾಮಕಾರಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

ಜಿಲ್ಲೆಯಲ್ಲಿ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ವಿಶೇಷ ಕಾರ್ಯಾಚರಣೆಗಳು, ರಾತ್ರಿ ಗಸ್ತು, ವಾಹನ ತಪಾಸಣೆ, ಅನುಮಾನಾಸ್ಪದ ವ್ಯಕ್ತಿಗಳ ಮೇಲೆ ನಿಗಾ, ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಹಾಗೂ ಪೊಲೀಸ್–ಸಾರ್ವಜನಿಕರ ಸಂಪರ್ಕ ಸಭೆಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುತ್ತಿದೆ. ಇದರಿಂದ ಸಾರ್ವಜನಿಕರಲ್ಲಿ ಭದ್ರತೆಯ ಭಾವನೆ



ಹೆಚ್ಚಾಗಿದ್ದು, ಅಪರಾಧ ಚಟುವಟಿಕೆಗಳಿಗೆ ತಡೆ ಬೀಳುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಜಿಲ್ಲೆಯಲ್ಲಿ ದಾಖಲಾಗುತ್ತಿರುವ ವಿವಿಧ ಅಪರಾಧ ಪ್ರಕರಣಗಳ ತನಿಖೆಯನ್ನು ತಾಂತ್ರಿಕ ಸಾಕ್ಷ್ಯಗಳ ನೆರವಿನಿಂದ ವೇಗವಾಗಿ ಪೂರ್ಣಗೊಳಿಸುವುದು, ಆರೋಪಿಗಳನ್ನು ಬಂಧಿಸುವುದು ಹಾಗೂ ಕಾನೂನು ಕ್ರಮಗಳನ್ನು ಸಮಯೋಚಿತವಾಗಿ ಕೈಗೊಳ್ಳುವಲ್ಲಿ ಪೊಲೀಸ್ ಇಲಾಖೆ ಹೆಚ್ಚು ಒತ್ತು ನೀಡುತ್ತಿದೆ. ಪೊಲೀಸ್ ಸಿಬ್ಬಂದಿಗೆ ಸಮರ್ಪಕ ಮಾರ್ಗದರ್ಶನ, ಜವಾಬ್ದಾರಿಗಳ ಸ್ಪಷ್ಟ ಹಂಚಿಕೆ ಹಾಗೂ ನಿರಂತರ ಮೇಲ್ವಿಚಾರಣೆಯ ಮೂಲಕ ಇಲಾಖೆಯ ಕಾರ್ಯಕ್ಷಮತೆ ಹೆಚ್ಚಿಸಲು ಎಸ್‌ಪಿ ಅವರು ಗಮನ ಹರಿಸುತ್ತಿದ್ದಾರೆ ಎನ್ನಲಾಗುತ್ತಿದೆ.

**ಸಾರ್ವಜನಿಕರೊಂದಿಗೆ ನೇರ ಸಂವಾದಕ್ಕೆ ಆದ್ಯತೆ**

ಪೊಲೀಸರು ಸಾರ್ವಜನಿಕರ ಬಳಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವುದು, ದೂರುಗಳನ್ನು ಸ್ವೀಕರಿಸುವುದು ಹಾಗೂ ಸ್ಥಳದಲ್ಲಿಯೇ ಅಗತ್ಯ ಕ್ರಮಗಳ ಕುರಿತು ಮಾರ್ಗದರ್ಶನ ನೀಡುವುದು ಸೇರಿದಂತೆ ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಇದರಿಂದ ಜನರು ಪೊಲೀಸ್ ಇಲಾಖೆಯ ಮೇಲೆ ಹೆಚ್ಚಿನ ವಿಶ್ವಾಸ ವ್ಯಕ್ತಪಡಿಸುತ್ತಿದ್ದು, ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಳ್ಳಲು ಅವಕಾಶ ದೊರೆಯುತ್ತಿದೆ ಎಂದು ಹಲವರು ತಿಳಿಸಿದ್ದಾರೆ.

**ಅಪರಾಧಿಗಳಿಗೆ ಎಚ್ಚರಿಕೆ, ಕಾನೂನು ಪಾಲನೆಗೆ ಒತ್ತು**

ಜಿಲ್ಲೆಯಲ್ಲಿ ಸಮಾಜದ ಶಾಂತಿ ಕದಡುವ ಚಟುವಟಿಕೆಗಳು, ಪುಡಿ ರೌಡಿಗಳ ಹಾವಳಿ, ಅಕ್ರಮ ವ್ಯವಹಾರಗಳು ಹಾಗೂ ಕಾನೂನುಬಾಹಿರ ಚಟುವಟಿಕೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ. ಅಪರಾಧ ಚಟುವಟಿಕೆಗಳಲ್ಲಿ ತೊಡಗುವವರಿಗೆ ಕಾನೂನಿನ ಪ್ರಕಾರ ಕ್ರಮ ಅನಿವಾರ್ಯ ಎಂಬ ಸಂದೇಶವನ್ನು ಪೊಲೀಸ್ ಇಲಾಖೆ ಸ್ಪಷ್ಟವಾಗಿ ನೀಡುತ್ತಿದೆ.

**"ಸಿಂಗಂ ಲೇಡಿ" ಎಂದು ಮೆಚ್ಚುಗೆ**

ಕರ್ತವ್ಯನಿಷ್ಠೆ, ಶಿಸ್ತು, ಸಮಯೋಚಿತ ನಿರ್ಧಾರಗಳು ಹಾಗೂ ಅಪರಾಧಿಗಳ ವಿರುದ್ಧ ರಾಜಿ ಇಲ್ಲದ ಕಾರ್ಯವೈಖರಿಯಿಂದ ಎಸ್‌ಪಿ ಸುಮನ್ ಡಿ. ಪನ್ನೇಕರ್ ಅವರನ್ನು ಕೆಲವು ಸಾರ್ವಜನಿಕರು "ಸಿಂಗಂ ಲೇಡಿ" ಎಂದು ಕರೆದೂ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಆದರೆ ಇದು ಸಾರ್ವಜನಿಕರಿಂದ ವ್ಯಕ್ತವಾಗಿರುವ ಅಭಿಪ್ರಾಯವಾಗಿದ್ದು, ಅಧಿಕೃತ ಬಿರುದು ಅಲ್ಲ.

**ಜನರ ಅಭಿಪ್ರಾಯ**

ಜಿಲ್ಲೆಯಲ್ಲಿ ಅಪರಾಧ ನಿಯಂತ್ರಣಕ್ಕೆ ಆದ್ಯತೆ ನೀಡುತ್ತಿರುವ ಪೊಲೀಸ್ ಇಲಾಖೆಯ ಕಾರ್ಯವೈಖರಿಯಿಂದ ಸಾರ್ವಜನಿಕರು ನೆಮ್ಮದಿಯಿಂದ ಬದುಕುವ ವಾತಾವರಣ ನಿರ್ಮಾಣವಾಗುತ್ತಿದೆ ಎಂದು ಹಲವರು ಅಭಿಪ್ರಾಯಪಟ್ಟಿದ್ದಾರೆ. ಇದೇ ರೀತಿಯ ಜನಸ್ನೇಹಿ, ಶಿಸ್ತುಬದ್ಧ ಹಾಗೂ ಜವಾಬ್ದಾರಿಯುತ ಆಡಳಿತ ಶೈಲಿ ಸರ್ಕಾರದ ಇತರೆ ಇಲಾಖೆಗಳಲ್ಲಿಯೂ ಕಂಡುಬರಬೇಕು ಎಂಬ ಬೇಡಿಕೆಯೂ ವ್ಯಕ್ತವಾಗುತ್ತಿದೆ.

**ಪೊಲೀಸ್ ಇಲಾಖೆಯ ಆದ್ಯತೆ**


ಜಿಲ್ಲೆಯನ್ನು ಇನ್ನಷ್ಟು ಸುರಕ್ಷಿತಗೊಳಿಸುವುದು, ಅಪರಾಧ ಪ್ರಕರಣಗಳ ತ್ವರಿತ ಭೇದನೆ, ಸಾರ್ವಜನಿಕರೊಂದಿಗೆ ವಿಶ್ವಾಸದ ಬಾಂಧವ್ಯ ಬೆಳೆಸುವುದು ಹಾಗೂ ಕಾನೂನು–ಸುವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದು ಪೊಲೀಸ್ ಇಲಾಖೆಯ ಪ್ರಮುಖ ಆದ್ಯತೆಯಾಗಿದ್ದು, ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಕಾರ್ಯಾಚರಣೆಗಳು ಮುಂದುವರಿಯಲಿವೆ ಎಂಬ ಸಂದೇಶ ಇಲಾಖೆ ವಲಯದಿಂದ ವ್ಯಕ್ತವಾಗುತ್ತಿದೆ.

## ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಬೆಂಗಳೂರು ಆವೃತ್ತಿಗೆ ಹಾರ್ದಿಕ ಶುಭಾಶಯಗಳು

ಕನ್ನಡ ನಾಡಿನ ಜನರ ಧ್ವನಿಯಾಗಿ, ಸಮಾಜಮುಖಿ ಮೌಲ್ಯಗಳನ್ನು ಎತ್ತಿಹಿಡಿಯುತ್ತಾ ಜನಪರ ಪತ್ರಿಕೋದ್ಯಮಕ್ಕೆ ತನ್ನದೇ ಆದ ಕೊಡುಗೆ ನೀಡುತ್ತಿರುವ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಬೆಂಗಳೂರು ಆವೃತ್ತಿ ಆರಂಭವಾಗುತ್ತಿರುವುದು ಸಂತಸದ ಸಂಗತಿ.

ಈ ಹೊಸ ಆವೃತ್ತಿಯು ರಾಜಧಾನಿ ಬೆಂಗಳೂರಿನ ಜನರ ಸಮಸ್ಯೆಗಳು, ಅಭಿವೃದ್ಧಿ, ಸಂಸ್ಕೃತಿ ಮತ್ತು ಸಮಾಜದ ಧ್ವನಿಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಪ್ರತಿಬಿಂಬಿಸಲಿ. ನಿಷ್ಪಕ್ಷಪಾತ, ಜನಪರ ಮತ್ತು ಜವಾಬ್ದಾರಿಯುತ ಪತ್ರಿಕೋದ್ಯಮದ ಮೂಲಕ ಪತ್ರಿಕೆ ಇನ್ನಷ್ಟು ಎತ್ತರಕ್ಕೆ ಬೆಳೆಯಲಿ.

ಮಲ್ಲಮ್ಮ ನುಡಿ ಪತ್ರಿಕೆಯ ಮಾಲೀಕರು, ಸಂಪಾದಕರು, ಸಿಬ್ಬಂದಿ ವರ್ಗ ಹಾಗೂ ಓದುಗರಿಗೆ ನನ್ನ ಹೃತ್ಪೂರ್ವಕ ಶುಭಾಶಯಗಳು.



ಈ ಬೆಂಗಳೂರು ಆವೃತ್ತಿಯು ಯಶಸ್ವಿಯಾಗಿ ಬೆಳೆಯಲಿ ಎಂದು ಹಾರೈಸುತ್ತೇನೆ.

–ಎಚ್. ಕೆ. ಪಾಟೀಲ

**ಮಾಜಿ ಸಚಿವ**

# ಅಭ್ಯರ್ಥಿಗಳಿಗೆ ಸಚಿವ ಪ್ರಿಯಾಂಕ್ ಶುಭಾಶಯ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ರಾಜ್ಯ ಪೊಲೀಸ್ ಇಲಾಖೆಯ ವಿವಿಧ ವಿಭಾಗಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ನಿಟ್ಟಿನಲ್ಲಿ ಆರಂಭಿಸಲಾಗಿರುವ ಬೃಹತ್ ನೇಮಕಾತಿ ಪ್ರಕ್ರಿಯೆಯ ಅಂಗವಾಗಿ, 3,991 ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ಲಿಖಿತ ಪರೀಕ್ಷೆ ಆಗಸ್ಟ್ 2ರಂದು ನಡೆಯಲಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.



ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಸಂದೇಶ ಹಂಚಿಕೊಂಡಿರುವ ಸಚಿವರು, ನೇಮಕಾತಿಯಲ್ಲಿ ಉಳಿಕೆ ಮೂಲ ವೃಂದದ 3,395 ಹಾಗೂ ಕಲ್ಯಾಣ ಕರ್ನಾಟಕ ವೃಂದದ 596 ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪರೀಕ್ಷೆಯನ್ನು ನಡೆಸುತ್ತಿದ್ದು, ಉಳಿಕೆ ಮೂಲ ವೃಂದದ ಅಭ್ಯರ್ಥಿಗಳಿಗೆ ಬೆಳಿಗ್ಗೆ 10.00ರಿಂದ 11.30ರವರೆಗೆ ರಾಜ್ಯದಾದ್ಯಂತ 884 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳ ಅನುಕೂಲಕ್ಕಾಗಿ ಪರೀಕ್ಷೆಯ ಸಮಯವನ್ನು ಮಧ್ಯಾಹ್ನ 2.30ರ ಬದಲು ಸಂಜೆ 4.00ರಿಂದ 5.30ರವರೆಗೆ ನಿಗದಿಪಡಿಸಲಾಗಿದ್ದು, ಇದಕ್ಕಾಗಿ 186 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಅವರು ತಿಳಿಸಿದ್ದಾರೆ. ನೇಮಕಾತಿ ಪ್ರಕ್ರಿಯೆಯನ್ನು ಸಂಪೂರ್ಣ ಪಾರದರ್ಶಕ, ನ್ಯಾಯಸಮ್ಮತ ಹಾಗೂ ವಿಶ್ವಾಸಾರ್ಹವಾಗಿ ನಡೆಸಲು ರಾಜ್ಯ ಸರ್ಕಾರ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಅವರು ತಿಳಿಸಿದ್ದಾರೆ. ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮ ಅಥವಾ ವಂಚನೆಗೆ ಅವಕಾಶವಿಲ್ಲ ಎಂದು ಸ್ಪಷ್ಟಪಡಿಸಿರುವ ಸಚಿವರು, ಅಕ್ರಮ ಎಸಗಲು ಯತ್ನಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ.

# ವಿದ್ಯಾನಗರದಲ್ಲಿ ಬಬಲಾದ ಶ್ರೀ ಗುರುವೀರೇಶ್ವರರ ಪುರಾಣ ಪ್ರವಚನ

• **ಮಲ್ಲಮ್ಮ ನುಡಿ ವಾರ್ತೆ ಸೇಡಂ**

ನಗರದ ಸೇಡಂ ರಸ್ತೆಯ ಬಸವೇಶ್ವರ ಆಸ್ಪತ್ರೆಯ ಎದುರುಗಡೆ ಇರುವ ವಿದ್ಯಾನಗರ ಕಾಲೋನಿ ಮಲ್ಲಿಕಾರ್ಜುನ ಸಮುದಾಯ ಭವನದಲ್ಲಿ ವಿದ್ಯಾನಗರ ವೆಲ್ಫೇರ್ ಸೊಸೈಟಿ ವತಿಯಿಂದ ಈ ವರ್ಷದ ಶ್ರಾವಣ ಮಾಸದ ನಿಮಿತ್ಯ ಉತ್ತರ ಕರ್ನಾಟಕದ ಕಲಬುರಗಿ ಜಿಲ್ಲೆಯ ಹಾಗೂ ತಾಲೂಕಿನ ಚಿಕ್ಕ ಹಳ್ಳಿ ಬಬಲಾದ ಮುತ್ಯಾನ ಬಬಲಾದವೆಂದೇ ದೊಡ್ಡ ಹೆಸರು ಮಾಡಿರುವ ಶ್ರೀ ಗುರು ಚನ್ನವೀರೇಶ್ವರರ ಪುರಾಣ ಪ್ರವಚನ ನಡೆಸಬೇಕೆಂದು ಜುಲೈ 26 ರಂದು ನಡೆದ ಸೊಸೈಟಿ ಸರ್ವ ಸದಸ್ಯರ ಪುರಾಣ ಪೂರ್ವ ಭಾವಿ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಯಿತೆಂದು ಸೊಸೈಟಿ ಕಾರ್ಯದರ್ಶಿ ಶಿವರಾಜ ಅಂಡಗಿ ಪ್ರಕಟಣೆ ತಿಳಿಸಿದ್ದಾರೆ.

ಉತ್ತರ ಕರ್ನಾಟಕದ ಕಲಬುರಗಿ ಜಿಲ್ಲೆ ಹಾಗೂ ತಾಲೂಕಿನ ಚಿಕ್ಕಹಳ್ಳಿ ಬಬಲಾದ ಮುತ್ಯಾನ ಬಬಲಾದವೆಂದೆ ಹೆಸರು ಮಾಡಿರುವ ಗುರು ಚನ್ನವೀರೇಶ್ವರ ಸ್ವಾಮಿಗಳು ಈ ಭಾಗದಲ್ಲಿ ಸ್ವಾಮಿ,



ಶಿವಯೋಗಿ ಪದಗಳಿಂತ ಜನತೆಗೆ ಪ್ರಿಯಾವಾದದ್ದು ಮುತ್ಯಾ ಚನ್ನವೀರ ಎಂಬ ಹೆಸರು ಸ್ಮರಣೆಯವಾಗಿದೆ.

ಚನ್ನವೀರ ಮುತ್ಯಾ ಅವರು ದೇವಿಯ ಆರಾಧಕರು ಅಲ್ಲಲ್ಲಿ ದೇವಿಯ ಪುರಾಣ ಪ್ರವಚನ ಮಾಡಿಸಿ ಜನಮನಕ್ಕೆ ದೇಹಾತ್ಮ ವಿಜ್ಞಾನವನ್ನು ತಿಳಿಸಿಕೊಟ್ಟು ಮುತ್ತೈದೆಯರ ಪೂಜೆ ಮಾಡಿ ನಾರಿ ಮಣಿಯರು ನಾಡಿನ ಮಹಾದೇವ ಚೇತನವೆಂಬ ತತ್ವವನ್ನು ಬಿಂಬಿಸಿ ಪಾರ್ವತಿಯ ಸ್ವರೂಪವನ್ನು ಕಂಡು ತಾಯಂದಿರಲ್ಲಿ ಮಾತೃತ್ವ ಭಾವ ಬೆಳಸುತ್ತಾ ದೈವಿಶಕ್ತಿಯನ್ನು ಸಂಪಾದಿಸಿದ ಶ್ರೀ ಚನ್ನವೀರ ಸ್ವಾಮಿಗಳು ನೊಂದು ಬೆಂದು ಬಳಲಿ ಬಂದವರ ದುಃಖ–ದುಮ್ಮಾನಗಳನ್ನು ದೂರು ಮಾಡುವ ಶ್ರೀ ಗುರು ಚನ್ನವೀರೇಶ್ವರರ ಪುರಾಣ ಪ್ರವಚನ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.

ಪುರಾಣ ಪ್ರವಚನಕಾರರಾದ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಶಿಷ್ಯರಾದ ಶ್ರೀ ವೇ.ಮೂ. ವೀರಯ್ಯ ಶಾಸ್ತ್ರೀಗಳು ಗದಗ ಪುರಾಣ ಪ್ರವಚನ ಮಾಡಲಿದ್ದಾರೆ. ಶ್ರೀ ಶಿವಕುಮಾರ ಎಂ. ಹಿರೇಮಠ ಜಾಲಹಳ್ಳಿ ಇವರು ಸಂಗೀತ ಹಾಗೂ ಗಾಯನ ಮಾಡಲಿದ್ದಾರೆ. ಶ್ರೀ ಅಡಿವೇಶಕುಮಾರ ಗೋಕಾಕ ಗದಗ ಇವರು ತಬಲಾ ಸಾಥ್ ನೀಡಲಿದ್ದಾರೆ.

ಸೊಸೈಟಿ ಅಧ್ಯಕ್ಷ ಮಲ್ಲಿನಾಥ ದೇಶಮುಖ ಸರ್ವ ಸದಸ್ಯರ ಸಭೆಯ ಅಧ್ಯಕ್ಷತೆ ವಹಿಸಿದರು ಕಾರ್ಯದರ್ಶಿ ಶಿವರಾಜ ಅಂಡಗಿ, ಖಜಾಂಚಿ ಗುರುಲಿಂಗಯ್ಯ ಮಠಪತಿ, ಆಡಳಿತ ಮಂಡಳಿ ಸದಸ್ಯರಾದ ಉಮೇಶ ಶೆಟ್ಟಿ, ಬಿ. ಎನ್. ಪುಣ್ಯಶೆಟ್ಟಿ, ಬಸವಂತರಾವ ಜಾಬಶೆಟ್ಟಿ, ಸುಭಾಷ ಮಂಠಾಳೆ, ಮಲ್ಲಿಕಾರ್ಜುನ ಕಾಳೆ, ಕಾಶಿನಾಥ ಚಿನ್ಮಳ್ಳಿ, ಶ್ರೀಮಂತರಾವ ರಾಜಾಪೂರ, ಆದಪ್ಪ ಸಿಕೇದ್, ನಾಗರಾಜ ಹೆಬ್ಬಾಳ, ಸದಾಶಿವ ಕಂಠಿ, ಶಾಂತಯ್ಯ ಬೀದಿಮನಿ, ಆದಿಲಿಂಗಯ್ಯ ಕೊಡಳ್ಳಿ, ಸಂಗಮೇಶ ದಿವಟಗಿ, ನಾಗಭೂಷಣ ಹಿಂದೊಡ್ಡಿ, ನಾಗರಾಜ ಮುಗಳಿ, ವೀರೇಶ ನಾಗಶೆಟ್ಟಿ, ಉದಯಕುಮಾರ ಪಡಶೆಟ್ಟಿ, ರಮೇಶ ದಸ್ಮಾ, ಮಲ್ಲಿಕಾರ್ಜುನ ಸಿಂದಗಿ, ಶಾಂತಯ್ಯ ಬೀದಿಮನಿ, ರೇವಣಸಿದ್ದಪ್ಪ ಜೀವಣಗಿ, ತರುಣಶೇಖರ ಬಿರಾದಾರ, ಶರಣಯ್ಯ ಸ್ವಾಮಿ ಮಠಪತಿ ಇನ್ನಿತರರು ಉಪಸ್ಥಿತರಿದ್ದರು.

# ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಿ: ಡಿ.ಸಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಪ್ರಗತಿ, ಮೂಲಸೌಕರ್ಯ ಸುಧಾರಣೆ, ವಸತಿ ಯೋಜನೆಗಳು ಹಾಗೂ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ತರಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಇಕ್ರಂ ಶರೀಫ ಸೂಚಿಸಿದರು.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಿ. ಸಭೆಯಲ್ಲಿ ಕೇವಲ ಭೌತಿಕ ಅಂಕಿ–ಅಂಶಗಳ ವರದಿ ನೀಡುವುದಕ್ಕೆ ಸೀಮಿತವಾಗದೆ, ಬಜೆಟ್ ಅನುದಾನದ ಸಮರ್ಪಕ ಬಳಕೆ ಹಾಗೂ ಶಿಕ್ಷಣದ ಗುಣಮಟ್ಟದಲ್ಲಿ ಬದಲಾವಣೆ ತರಲು 15 ಪ್ರಮುಖ ಅಂಶಗಳ ಆಧಾರದ ಮೇಲೆ ವಿಸ್ತೃತವಾಗಿ ಚರ್ಚಿಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸವಾಲುಗಳನ್ನು ನೇರವಾಗಿ ಪರಿಶೀಲಿಸಿ ಪರಿಹಾರ ಕಂಡುಕೊಳ್ಳಿ, ಉರ್ದು ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಎದುರಿಸುವ ಕಲಿಕಾ ಹಿನ್ನಡೆ ಹಾಗೂ 'ಡ್ರಾಪ್‌ಔಟ್' ತಡೆಯಲು ಆರಂಭದಿಂದಲೇ ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳನ್ನು ಪರಿಣಾಮಕಾರಿಯಾಗಿ



ಕಲಿಸಬೇಕು, ಇದಕ್ಕಾಗಿ ಅಜೀಮ್ ಪ್ರೇಮ್‌ಜಿ ಫೌಂಡೇಶನ್ ಸಹಯೋಗದೊಂದಿಗೆ ಗಣಿತ, ವಿಜ್ಞಾನ ಹಾಗೂ ಭಾಷೆ ಶಿಕ್ಷಕರನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ. ಅಲ್ಲದೆ, 200ಕ್ಕೂ ಹೆಚ್ಚು ವಿದ್ಯಾರ್ಥಿಗಳಿರುವ ಮದರಸಗಳನ್ನು ಗುರುತಿಸಿ ಮೂಲಸೌಕರ್ಯಗಳ ಪಡೆಯಲು ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಹೇಳಿದರು.

ಮೌಲಾನಾ ಆಜಾದ್, ಮೊರಾರ್ಜಿ ದೇಸಾಯಿ ಹಾಗೂ ಉರ್ದು ಶಾಲೆಗಳ ಫಲಿತಾಂಶ, ಶಿಕ್ಷಕರ ಅಭಾವ ಹಾಗೂ ಅಗತ್ಯಗಳ ಕುರಿತು ಪಿಪಿಟಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಜೊತೆಗೆ, ಪೋಷಕರಿಗೆ ನಿರ್ದಿಷ್ಟ ಸ್ಥಳದಲ್ಲೇ ಪುಸ್ತಕ–ಬ್ಯಾಗ್ ಕೊಳ್ಳುವಂತೆ ಒತ್ತಾಯಿಸುವ ಖಾಸಗಿ ಶಾಲೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ನಗರದಲ್ಲಿ ಮಂಜೂರಾಗಿರುವ ಬಾಲಕಿಯರ ನೂತನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸ್ವಂತ ಕಟ್ಟಡ ನಿರ್ಮಾಣಕ್ಕೆ ವಕ್ಫ್ ಮಂಡಳಿ ಅಥವಾ ಲಭ್ಯವಿರುವ ಸರ್ಕಾರಿ ಭೂಮಿಯನ್ನು ತಕ್ಷಣ ಗುರುತಿಸಿ ವರದಿ ನೀಡುವಂತೆ ಜಿಲ್ಲಾ ವಕ್ಫ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಸುಧಾರಿಸಲು ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಅಂಗನವಾಡಿ ಕೇಂದ್ರಗಳು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯ ವರೆಗೆ ಕಾರ್ಯನಿರ್ವಹಿಸುವಂತೆ ಅಂಗನವಾಡಿ ಕಾರ್ಯಕರ್ತರಿಗೆ ತಿಳಿಸಲು ಅಗತ್ಯಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು

ಶಾಲಾ ಹೆಣ್ಣುಮಕ್ಕಳಿಗೆ ಶೌಚಾಲಯ ಮತ್ತು ಕಾಂಪೌಂಡ್ ಗೋಡೆ ನಿರ್ಮಿಸಲು ಕೆಕೆಆರ್‌ಡಿಬಿ ಅನುದಾನ ಬಳಸಿಕೊಳ್ಳಲು ಸೂಚಿಸಲಾಗಿದ್ದು, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪತ್ತೆ ಹಚ್ಚಲು ಮೌಲಾನಾ ಆಜಾದ್ ಶಿಕ್ಷಕರು ಭಾನುವಾರ ಸೇರಿದಂತೆ ಮನೆ–ಮನೆಗೆ ತೆರಳಿ ಸಮೀಕ್ಷೆ ನಡೆಸಲುವಂತೆ ಸೂಚಿಸಿದರು.

ಪ್ರತಿಯೊಬ್ಬ ಅರ್ಹ ವಿದ್ಯಾರ್ಥಿಗೂ ಪ್ರೀ–ಮೆಟ್ರಿಕ್ ಹಾಗೂ ಪೋಸ್ಟ್–ಮೆಟ್ರಿಕ್ ವಿದ್ಯಾರ್ಥಿವೇತನ ಸಮಯಕ್ಕೆ ಸರಿಯಾಗಿ ತಲುಪಿಸುವಂತೆ ಸೂಚಿಸಲಾಯಿತು. ಪಿ.ಎಂ. ಎ.ವಾಯ್ –ಗ್ರಾಮೀಣ ಯೋಜನೆಯಡಿ ಜಿಲ್ಲೆಗೆ ನಿಗದಿಯಾದ 72,000 ಮನೆಗಳಲ್ಲಿ ಈಗಾಗಲೇ 37,362 ಮನೆಗಳು ಮಂಜೂರಾಗಿದ್ದು, ಅದರಲ್ಲಿ 7,ಸಾವಿರ ಫಲಾನುಭವಿಗಳನ್ನು ಆಯ್ಕೆ ಆಗಿದ್ದು ಕಡಿಮೆನೆ, ಸರ್ಕಾರದ ಯೋಜನೆಗಳು ಪ್ರಚಾರ ವಾಹನಗಳು, 'ಜಿಂಗಲ್ಸ್' ಮತ್ತು ಮಾಧ್ಯಮ ಪ್ರಕಟಣೆಗಳ ಮೂಲಕ ತಳಮಟ್ಟದ ಸಾರ್ವಜನಿಕರಿಗೆ ತಲುಪಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಮಟ್ಟದ ನಾಮನಿರ್ದೇಶಕ ಸದಸ್ಯರುಗಳು ತಮ್ಮ ತಮ್ಮ ಸಲಹೆ ಸೂಚನೆಗಳು ನೀಡಿದರು.

'ಡೇ–ನಲ್ಮ್' ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ ಬ್ಯಾಂಕ್ ಮುಖಾಂತರ ಸಾಲ ಸೌಲಭ್ಯ ಒದಗಿಸಲು ಒದಗಿಸಿ, ಕ್ರಿಶ್ಚಿಯನ್, ಜೈನ್, ಸಿಖ್ ಹಾಗೂ ಮುಸ್ಲಿಂ ಸಮುದಾಯದ ಪ್ರಾರ್ಥನಾ ಮಂದಿರಗಳು, ಚರ್ಚ್ ನವೀಕರಣ ಮತ್ತು ಸಮುದಾಯ ಭವನಗಳ ಬಾಕಿ ಪ್ರಸ್ತಾವನೆಗಳನ್ನು ಶೀಘ್ರ ಸಲ್ಲಿಸಲು ತಿಳಿಸಲಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000, Telephone Number:08483200222

PRGI NO. (RNINO:KARKAN/2011/48371)